ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫೪

**ಪಟ್ಟಿ – ೨೭**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತಮೂರನೇ ಅಧಿವೇಶನ**

**(ಮುಂದುವರೆದ ಉಪವೇಶನ)**

---

**ಗುರುವಾರ, ದಿನಾಂಕ: ೧೬ನೇ ನವೆಂಬರ್, ೨೦೧೭**

**ಸಮೂಹ – IV**

೧. ಮುಖ್ಯ ಮಂತ್ರಿಗಳು

೨. ಗೃಹ ಸಚಿವರು

೩. ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು

೪. ನಗರಾಭಿವೃದ್ಧಿ ಹಾಗೂ ಹಜ್ ಸಚಿವರು

೫. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು

೬. ಅಬಕಾರಿ ಸಚಿವರು

---

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿರುವ ಫ್ಲೈಓವರ್ ಹಾಗೂ ಅಂಡರ್ ಪಾಸ್‌ಗಳ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) –**

೩೩೪೭ (೪೦೦೧) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನಲ್ಲಿರುವ ಒಟ್ಟು ಫ್ಲೈಓವರ್ ಹಾಗೂ ಅಂಡರ್ ಪಾಸ್‌ಗಳ ಸಂಖ್ಯೆ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ಆ ಪೈಕಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ನಿರ್ಮಿಸಿರುವ ಫ್ಲೈಓವರ್ ಹಾಗೂ ಅಂಡರ್ ಪಾಸ್‌ಗಳ ಒಟ್ಟು ಸಂಖ್ಯೆ ಎಷ್ಟು ; ಹಾಗೂ ಇದರ ನಿರ್ವಹಣೆಯನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಮಾಡುತ್ತಿದೆಯೇ ; ಇಲ್ಲದಿದ್ದಲ್ಲಿ, ಗುತ್ತಿಗೆಗೆ ನೀಡಲಾಗಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಇ) ಈ ಎಲ್ಲಾ ಫ್ಲೈಓವರ್‌ಗಳ ಮತ್ತು ಅಂಡರ್ ಪಾಸ್‌ಗಳ ಮೇಲೆ ಹಾಗೂ ಕೆಳಗೆ ಮಳೆ ನೀರಿನ ಮೋರಿ ಹಾಗೂ ಕೊಳವೆಗಳನ್ನು ಅಳವಡಿಸಿ ಯಾವ ರೀತಿ ನಿರ್ವಹಣೆ ಮಾಡಲಾಗುತ್ತಿದೆ? (ಸಂಪೂರ್ಣ ವಿವರ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿರುವ ಉದ್ಯಾನವನ/ಆಟದ ಮೈದಾನದ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) –**

೩೩೪೮ (೪೦೦೨) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ೭ ಸಿ.ಎಂ.ಸಿ./೧ ಟಿ.ಎಂ.ಸಿ. ಹಾಗೂ ೧೧೦ ಹಳ್ಳಿಗಳ ಪ್ರದೇಶದಲ್ಲಿ ಗುರುತಿಸಿದ್ದ ಹಾಗೂ ರಚಿಸಿದ್ದ ಉದ್ಯಾನವನ ಹಾಗೂ ಆಟದ ಮೈದಾನಗಳ ಸಂಖ್ಯೆ ಎಷ್ಟಿದ್ದವು ; (ಸಂಪೂರ್ಣ ವಿವರ ನೀಡುವುದು)

(ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ರಚನೆಯಾದ ನಂತರ ಉದ್ಯಾನವನ ಹಾಗೂ ಆಟದ ಮೈದಾನಗಳ ಸಂಖ್ಯೆ ಎಷ್ಟು ; (ಪ್ರತ್ಯೇಕವಾಗಿ ವಲಯವಾರು ಮಾಹಿತಿಗಳನ್ನು ನೀಡುವುದು)

(ಇ) ಬೆಂಗಳೂರು ನಗರದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಇಲ್ಲಿಯವರೆವಿಗೂ ವಲಯವಾರು ರಚಿಸಿ ಸ್ಥಾಪಿಸಿರುವ ಉದ್ಯಾನವನ ಹಾಗೂ ಆಟದ ಮೈದಾನಗಳ ಸಂಖ್ಯೆ ಎಷ್ಟು ? (ಪ್ರತ್ಯೇಕವಾಗಿ ವಲಯವಾರು ಮಾಹಿತಿಗಳನ್ನು ನೀಡುವುದು)

## ಅಬಕಾರಿ ಪರವಾನಗಿಯ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) –**

೩೩೪೯ (೪೦೦೦) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ದಿನಾಂಕ:೩೦–೦೬–೨೦೧೭ರವರೆವಿಗೂ ರಾಜ್ಯದ ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಲ್ಲಿ (ಸ್ಥಳೀಯ ಸಂಸ್ಥೆಗಳ ಪ್ರದೇಶಗಳನ್ನು ಹೊರತುಪಡಿಸಿ) ಇದ್ದಂತಹ ಅಬಕಾರಿ ಪರವಾನಗಿ ನೀಡಿದ ಮಳಿಗೆ/ಸ್ಥಳಗಳ (CL2, CL9,CL4,CL6A,CL7 & CL11C) ಸಂಖ್ಯೆ ಎಷ್ಟು;

ಆ) ದಿನಾಂಕ:೦೧–೦೭–೨೦೧೭ರಿಂದ ಇಲ್ಲಿಯವರೆವಿಗೂ ರಾಜ್ಯದ ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಲ್ಲಿ ನವೀಕರಿಸದೆ ಇರುವ ಅಬಕಾರಿ ಪರವಾನಗಿಗಳ (CL2,CL9,CL4,CL6A,CL7 & CL11C) ನವೀಕರಿಸದೆ ಇರುವ ಹಾಗೂ ನವೀಕರಿಸಿರುವ ಪರವಾನಗಿಗಳ ಸಂಖ್ಯೆ ಎಷ್ಟು;

ಇ) ನವೀಕರಿಸಿ, ವರ್ಗಾಯಿಸಿರುವ ಅಬಕಾರಿ ಪರವಾನಗಿಗಳ (CL2, CL9,CL4,CL6A,CL7 & CL11C) ಸಂಖ್ಯೆ ಎಷ್ಟು;

ಈ) ದಿನಾಂಕ:೩೦–೦೬–೨೦೧೭ರ ವರೆವಿಗೂ ಬಿ.ಬಿ.ಎಂ.ಪಿ ವ್ಯಾಪ್ತಿಯ ೪೮ ರೇಂಜುಗಳಲ್ಲಿನ ಪರವಾನಗಿಗಳ (CL2, CL9,CL4,CL6A,CL7 & CL11C) ಸಂಖ್ಯೆ ಎಷ್ಟು;

ಉ) ದಿನಾಂಕ ೦೧–೦೭–೨೦೧೭ ರಿಂದ ಇಲ್ಲಿಯವರೆವಿಗೂ ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ (೪೮ ರೇಂಜುಗಳಲ್ಲಿ) ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳ ಪರವಾನಗಿಗಳ (CL2, CL9,CL4,CL6A,CL7 & CL11C) ಪೈಕಿ ವರ್ಗಾಯಿಸಿರುವ ಪರವಾನಿಗೆ ಎಷ್ಟು;

ಊ) ಈ ಎಲ್ಲಾ (CL2, CL9,CL4,CL6A,CL7 & CL11C) ವರ್ಗಾವಣೆಗಳನ್ನು ಅಬಕಾರಿ ಕಾಯ್ದೆ ಹಾಗೂ ನಿಬಂಧನೆಗಳ ಪ್ರಕಾರ ವರ್ಗಾಯಿಸಲಾಗಿದೆಯೇ?

## ಬೆಳಗಾವಿ ಮೈಸೂರು ಹಾಗೂ ಬೆಂಗಳೂರು ವಿಭಾಗಗಳಲ್ಲಿ ೮% ಮೀಸಲಾತಿ ನೀಡುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೩೩೫೦ (೩೯೯೯) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಹೈದ್ರಾಬಾದ್–ಕರ್ನಾಟಕದ ಪ್ರದೇಶ ಹೊರತುಪಡಿಸಿ ೩೭೧ (ಜೆ) ಅಡಿಯಲ್ಲಿ ರಾಜ್ಯದ ಇತರೆ ವಿಭಾಗಗಳಲ್ಲಿ ೩೭೧ (ಜೆ) ಆಶಯ ಪ್ರಕಾರ ನೇಮಕಾತಿ ಹಾಗೂ ಮುಂಬಡ್ತಿಗಳಲ್ಲಿ ಶೇ. ೮% ಮೀಸಲಾತಿಯಲ್ಲಿ ಗೊಂದಲ ಸೃಷ್ಟಿಯಾಗಿದ್ದು ಇತ್ತೀಚೆಗೆ ನ್ಯಾಯಾಲಯದ ತೀರ್ಪಿನ ಪ್ರತಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದ್ದರೆ, ನ್ಯಾಯಾಲಯದ ಆದೇಶ ಪ್ರತಿ ನೀಡುವುದು;

ಆ) ಈ ನಿಟ್ಟಿನಲ್ಲಿ ಸರ್ಕಾರ ಬೆಳಗಾವಿ, ಮೈಸೂರು ಹಾಗೂ ಬೆಂಗಳೂರು ವಿಭಾಗದಲ್ಲಿ ಸಂವಿಧಾನ ೩೭೧ (ಜೆ) ಅಡಿಯಲ್ಲಿ ಶೇ. ೮% ಮೀಸಲಾತಿ ನೀಡುವಂತೆ ನ್ಯಾಯಾಲಯ ಆದೇಶ ನೀಡಿದೆಯೇ; ಹಾಗಿದ್ದರೆ, ಆದೇಶದ ಪ್ರಕಾರ ಆದ ನೇಮಕಾತಿಗಳು ಎಷ್ಟು ಹಾಗೂ ವಿವಿಧ ಇಲಾಖೆಗಳಲ್ಲಿ ಬಡ್ತಿಗಳು ನೀಡಲಾಗಿದೆಯೇ; ಇಲ್ಲದಿದ್ದಲ್ಲಿ ವಿಳಂಬಕ್ಕೆ ಕಾರಣಗಳೇನು; ಯಾವ ಕಾಲಮಿತಿಯೊಳಗೆ ನೇಮಕಾತಿ ಹಾಗೂ ಬಡ್ತಿಗಳನ್ನು ನೀಡಲಾಗುವುದು? (ಇಲಾಖಾವಾರು, ವಿಭಾಗವಾರು ಸಂಪೂರ್ಣ ವಿವರ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಭಾಗದ ಕಳೆದ ೨ ವರ್ಷಗಳಿಂದ ಖಾಲಿ ಹುದ್ದೆಗಳ ಭರ್ತಿಗಾಗಿ ಅಧಿಸೂಚನೆ ಹೊರಡಿಸಿರುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೩೩೫೧ (೩೯೯೮) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಹೈದ್ರಾಬಾದ್–ಕರ್ನಾಟಕದ ೬ ಜಿಲ್ಲೆಗಳಲ್ಲಿ ೩೭೧ (ಜೆ) ಅಡಿಯಲ್ಲಿ ಕಳೆದ ೨ ವರ್ಷಗಳಿಂದ ಖಾಲಿ ಹುದ್ದೆಗಳ ಭರ್ತಿಗಾಗಿ ಅಧಿಸೂಚನೆ ಹೊರಡಿಸಿ ನೇಮಕಾತಿ ಮಾಡಲಾಗಿದೆಯೇ; ಹಾಗಿದ್ದರೆ, ಸರ್ಕಾರಿ ಹಾಗೂ ಅರೆ ಸರ್ಕಾರಿ ಇಲಾಖೆಗಳು ಯಾವುವು (ಸಂಪೂರ್ಣ ಮಾಹಿತಿ ನೀಡುವುದು)

ಆ) ಸದರಿ ೩೭೧ (ಜೆ) ಅಡಿಯಲ್ಲಿರುವ ವೃಂದವಾರು ಹುದ್ದೆಗಳನ್ನು ಗುರುತಿಸಿ ಅಧಿಸೂಚನೆಯನ್ನು ಹೊರಡಿಸುವಲ್ಲಿ ವಿಫಲವಾದ ಸರ್ಕಾರಿ ಹಾಗೂ ಅರೆ ಸರ್ಕಾರಿ ಇಲಾಖೆಗಳಾವುವು; (ಮಾಹಿತಿ ನೀಡುವುದು)

ಇ) ೩೭೧ (ಜೆ) ಅಡಿಯಲ್ಲಿ ಮೀಸಲಾತಿಯಲ್ಲಿ ನೇಮಕಾತಿ ಹಾಗೂ ಮುಂಬಡ್ತಿಯಲ್ಲಿ ಆಗುತ್ತಿರುವ ಗೊಂದಲ ಹಾಗೂ ವಿಳಂಬ ಸರ್ಕಾರದ ಗಮನಕ್ಕೆ ಬಂದಿದೆಯೇ; (ಮಾಹಿತಿ ನೀಡುವುದು)

ಈ) ಸದರಿ ನೇಮಕಾತಿ ಹಾಗೂ ಮುಂಬಡ್ತಿಯಲ್ಲಿ ಗೊಂದಲ ಹಾಗೂ ವಿಳಂಬ ಸರಿಪಡಿಸುವ ನಿಟ್ಟಿನಲ್ಲಿ ಸರ್ಕಾರದ ಮುಂದಿರುವ ಕ್ರಮಗಳೇನು ಹಾಗೂ ಯಾವ ಕಾಲಮಿತಿಯೊಳಗೆ ಪರಿಹರಿಸಲಾಗುವುದು? (ಮಾಹಿತಿ ನೀಡುವುದು)

## ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯಲ್ಲಿ ಹೊರಗುತ್ತಿಗೆಯ ಹುದ್ದೆಗಳ ಬಗ್ಗೆ.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೩೩೫೨ (೪೯೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಯಾವ ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲಾಗುತ್ತದೆ; (ಜಿಲ್ಲಾವಾರು ಹಾಗೂ ಹುದ್ದೆವಾರು ಮಾಹಿತಿ ನೀಡುವುದು)

(ಆ) ಸದರಿ ಇಲಾಖೆಯಲ್ಲಿ 'ಸಿ' ಮತ್ತು 'ಡಿ' ದರ್ಜೆಯ ಹುದ್ದೆಗಳನ್ನು ಯಾವ ಸಂಸ್ಥೆಗಳಿಗೆ ಹೊರಗುತ್ತಿಗೆಯನ್ನು ನೀಡಲಾಗುತ್ತಿದೆ; (ಸಂಸ್ಥೆಗಳ ಪೂರ್ಣ ವಿವರ, ಹೊರಗುತ್ತಿಗೆಯನ್ನು ಪಡೆದ ಅವಧಿ ಹಾಗೂ ಮುಕ್ತಾಯವಾದ ಅವಧಿಯ ವಿವರ ನೀಡುವುದು)

(ಇ) ಸದರಿ ಇಲಾಖೆಯು 'ಸಿ' ಮತ್ತು 'ಡಿ' ದರ್ಜೆಯ ನೌಕರರಿಗೆ ನಿಗಧಿಪಡಿಸಿರುವ ವೇತನ ಹಾಗೂ ಹೊರಗುತ್ತಿಗೆ ಪಡೆದ ಸಂಸ್ಥೆಯು

ನೀಡುತ್ತಿರುವ ವೇತನವೆಷ್ಟು; ಸದರಿ ಸಂಸ್ಥೆಯು ಪ್ರತಿ ತಿಂಗಳು ಸರಿಯಾದ ಸಮಯಕ್ಕೆ ವೇತನ ಪಾವತಿಸುತ್ತಿದೆಯೇ; ಇಲ್ಲವಾದಲ್ಲಿ, ಸರಿಯಾದ ಸಮಯಕ್ಕೆ ವೇತನ ನೀಡದ ಸಂಸ್ಥೆಗಳಾವುವು;

(ಈ) ಸದರಿ ನೌಕರರಿಗೆ ಪಿ.ಎಫ್ ಹಣವನ್ನು ನೀಡದೇ ಇರುವ ಸಂಸ್ಥೆಗಳು ಯಾವುವು; ಇವರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ವಿವರ ನೀಡುವುದು)

(ಉ) ಹೊರಗುತ್ತಿಗೆಯನ್ನು ಖಾಸಗಿ ಸಂಸ್ಥೆಗಳಿಗೆ ನೀಡದೇ ಸರ್ಕಾರವೇ ನೇರವಾಗಿ ವೇತನವನ್ನು ನೀಡಲು ಕ್ರಮ ಕೈಗೊಳ್ಳಬಹುದಲ್ಲವೆ? (ವಿವರ ನೀಡುವುದು)

## ಸಂವಿಧಾನ ೩೭೧(ಜೆ) ಅನುಷ್ಠಾನಗೊಂಡ ನಂತರ ಹೈದರಾಬಾದ್ ಕರ್ನಾಟಕ ಹುದ್ದೆಗಳ ಬಗ್ಗೆ.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೩೩೫೩ (೩೯೯೭) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಂವಿಧಾನದ ಕಲಂ ೩೭೧(ಜೆ) ಅನುಷ್ಠಾನಗೊಂಡ ನಂತರ ಇಲಾಖೆಯಲ್ಲಿರುವ ಹುದ್ದೆಗಳನ್ನು ಹೈದರಾಬಾದ್ ಕರ್ನಾಟಕ ಭಾಗದವರಿಗಾಗಿ ಪ್ರತ್ಯೇಕವಾಗಿ ವಿಂಗಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದರೆ, ಜಿಲ್ಲಾವಾರು, ಇಲಾಖಾವಾರು, ವೃಂದವಾರು ವರ್ಗಿಕರಿಸಲಾದ ಹುದ್ದೆಗಳ ಸಂಪೂರ್ಣ ಮಾಹಿತಿ ನೀಡುವುದು;

(ಆ) ಸಂವಿಧಾನದ ಕಲಂ ೩೭೧(ಜೆ) ಪ್ರಕಾರ ಹುದ್ದೆಗಳ ವರ್ಗಿಕರಿಸಿದ ನಂತರ ಹೈದರಾಬಾದ್ ಕರ್ನಾಟಕದ ಆರು ಜಿಲ್ಲೆಗಳಲ್ಲಿನ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ಮತ್ತು ನೇರ ನೇಮಕಾತಿಗಾಗಿ

ಹಾಗೂ ಮುಂಬಡ್ತಿಗಾಗಿ ಮೀಸಲಿರಿಸಿದ ಹುದ್ದೆಗಳು ಎಷ್ಟು; (ಜಿಲ್ಲಾವಾರು, ಇಲಾಖಾವಾರು, ವೃಂದವಾರು ಹುದ್ದೆಗಳ ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಖಾಲಿ ಇರುವ ಹುದ್ದೆಗಳ ಭರ್ತಿಗಾಗಿ ಸರ್ಕಾರದ ಮುಂದಿರುವ ಕ್ರಮವೇನು? (ಮಾಹಿತಿ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ಸರ್ಕಾರಿ/ಅರೆ ಸರ್ಕಾರಿ ಕಾರ್ಯಾಲಯಗಳ ಬಗ್ಗೆ.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೩೩೫೪ (೩೯೯೬) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್–ಕರ್ನಾಟಕ ಭಾಗದ ೬ ಜಿಲ್ಲೆಗಳು ಹಾಗೂ ಹರಪ್ಪನಹಳ್ಳಿ ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ/ಅರೆ ಸರ್ಕಾರಿ ಕಾರ್ಯಾಲಯಗಳು ಯಾವುವು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಹೈದ್ರಾಬಾದ್–ಕರ್ನಾಟಕ ಭಾಗದ ೬ ಜಿಲ್ಲೆಗಳು ಹಾಗೂ ಹರಪ್ಪನಹಳ್ಳಿ ತಾಲ್ಲೂಕಿನಲ್ಲಿ ಕಳೆದ ೨೦೧೫–೧೬ನೇ ಸಾಲಿನಿಂದ ಖಾಲಿ ಇರುವ ಹುದ್ದೆಗಳೆಷ್ಟು; ಆ ಪೈಕಿ ನೇಮಕಾತಿ ಮಾಡಿದ ಹುದ್ದೆಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು, ಇಲಾಖಾವಾರು ಮಾಹಿತಿ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ರಸ್ತೆ ಗುಂಡಿ ಮುಚ್ಚುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೩೫೫ (೪೦೦೮) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೆಂಗಳೂರಿನಲ್ಲಿ ತೀವ್ರ ಮಳೆಯಿಂದಾಗಿ ಜನ ಜೀವನ ಅಸ್ತವ್ಯಸ್ತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬೆಂಗಳೂರಿನಲ್ಲಿ ಮಳೆಗೆ ಬಲಿಯಾದವರ ಸಂಖ್ಯೆ ಎಷ್ಟು; (ವಿವರ ನೀಡುವುದು)

ಇ) ಬೆಂಗಳೂರಿನ ರಸ್ತೆ ಗುಂಡಿಯಿಂದಾಗಿ ಮೃತ ಪಟ್ಟವರ ಸಂಖ್ಯೆ ಎಷ್ಟು; (ವಿವರ ನೀಡುವುದು)

ಈ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ಚರಂಡಿ ಮತ್ತು ರಸ್ತೆ ನಿರ್ವಹಣೆ ಸಮರ್ಪಕವಾಗಿ ನಡೆಯದ ಕಾರಣ ಈ ಸ್ಥಿತ್ಯಂತರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ವಿವರ ನೀಡುವುದು;

ಉ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಧಿಕಾರಿಗಳು ಗುತ್ತಿಗೆದಾರರೊಂದಿಗೆ ಶಾಮೀಲಾಗಿ ಕಳಪೆ ಕಾಮಗಾರಿ ಹಾಗೂ ಸೂಕ್ತ ಕಾರ್ಯನಿರ್ವಹಣೆ ಮಾಡದೆ ಭ್ರಷ್ಟಾಚಾರ ಮಾಡಿರುವ ಪ್ರಕರಣಗಳೆಷ್ಟು; (ವಿವರ ನೀಡುವುದು)

ಊ) ಈ ತಪ್ಪಿತಸ್ಥ ಅಧಿಕಾರಿ ಮತ್ತು ಗುತ್ತಿಗೆದಾರರುಗಳ ಮೇಲೆ ಯಾವ ಕ್ರಮಕೈಗೊಳ್ಳಲಾಗಿದೆ? (ಹೆಸರು, ವಿಳಾಸದೊಂದಿಗೆ ಅಧಿಕಾರಿಗಳ ಮತ್ತು ಗುತ್ತಿಗೆದಾರರುಗಳ ವಿವರ ನೀಡುವುದು)

## ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೩೩೫೬ (೪೦೦೯) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿ ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳಲ್ಲಿ ಕಳೆದ ೪ ವರ್ಷಗಳಲ್ಲಿ ಕೈಗೊಂಡ ಅಭಿವೃದ್ಧಿ ಕಾಮಗಾರಿಗಳಾವುವು; (ತಾಲ್ಲೂಕು ಪಂಚಾಯತಿ ಹಾಗೂ ಗ್ರಾಮ ಪಂಚಾಯತಿಗಳ ವಿವರ ನೀಡುವುದು)

(ಆ) ಈ ಅಭಿವೃದ್ಧಿ ಕಾಮಗಾರಿಗಳಿಗೆ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು; (ತಾಲ್ಲೂಕು ಪಂಚಾಯತಿ ಮತ್ತು ಪಂಚಾಯಿತಿಗಳ ವಿವರ ನೀಡುವುದು)

(ಇ) ಈ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆಯೇ; ಅಭಿವೃದ್ಧಿ ಕಾಮಗಾರಿಗಳು ಅಪೂರ್ಣಗೊಂಡಿದ್ದಲ್ಲಿ ಕಾರಣಗಳೇನು; (ವಿವರ ನೀಡುವುದು)

(ಈ) ಈ ಅಭಿವೃದ್ಧಿ ಕಾಮಗಾರಿಗಳಲ್ಲಿ ಭ್ರಷ್ಟಾಚಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತಪ್ಪಿತಸ್ಥರ ವಿರುದ್ಧ ಕೈಗೊಂಡ ಕ್ರಮಗಳಾವುವು; (ಸಂಪೂರ್ಣ ವಿವರ ನೀಡುವುದು)

(ಉ) ಸದರಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಂಡವರ ತಾಲ್ಲೂಕುವಾರು ಗ್ರಾಮಪಂಚಾಯಿತಿಗಳ ವಿಳಾಸದೊಂದಿಗೆ ವಿವರ ನೀಡುವುದು?

## ಸಾರ್ವಜನಿಕ ಉದ್ದಿಮೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೩೩೫೭ (೪೦೧೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸಾರ್ವಜನಿಕ ಉದ್ದಿಮೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಕಳೆದ ನಾಲ್ಕು ವರ್ಷಗಳಲ್ಲಿ ಈ ಉದ್ದಿಮೆಗಳಿಂದ ಕೈಗೊಂಡ ಕಾಮಗಾರಿಗಳಾವುವು; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಕಳೆದ ನಾಲ್ಕು ವರ್ಷಗಳಲ್ಲಿ ಸಾರ್ವಜನಿಕರ ಉದ್ದಿಮೆಗಳಿಗೆ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು; (ವರ್ಷವಾರು ವಿವರ ನೀಡುವುದು)

(ಈ) ಮಂಡ್ಯ ಜಿಲ್ಲೆಯಲ್ಲಿ ಸಾರ್ವಜನಿಕ ಉದ್ದಿಮೆಗಳಿಂದ ಕೈಗೊಂಡ ಕಾಮಗಾರಿಗಳಾವುವು; ಹಾಗಿದ್ದಲ್ಲಿ, ವಿವರ ನೀಡುವುದು;

(ಉ) ಸಾರ್ವಜನಿಕ ಉದ್ದಿಮೆಗಳನ್ನು ಪುನಶ್ಚೇನಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳಾವುವು? (ವಿವರ ನೀಡುವುದು)

## ಮಾನ್ಯ ಮುಖ್ಯಮಂತ್ರಿಗಳ ಪರಿಹಾರ ನಿಧಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೩೩೫೮ (೪೦೧೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ನಾಲ್ಕು ವರ್ಷಗಳಲ್ಲಿ ಮಾನ್ಯ ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ನೀಡಿರುವ ಅನುದಾನದ ಮೊತ್ತವೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಮಂಡ್ಯ ಜಿಲ್ಲೆಯಲ್ಲಿ ಕಳೆದ ನಾಲ್ಕು ವರ್ಷಗಳಲ್ಲಿ ವಿವಿಧ ಖಾಯಿಲೆಗೆ ಮಾನ್ಯ ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ಧನ ಸಹಾಯ ಪಡೆದುಕೊಂಡವರ ಸಂಖ್ಯೆ ಎಷ್ಟು; (ತಾಲ್ಲೂಕುವಾರು, ಖಾಯಿಲೆವಾರು ಧನಸಹಾಯ ಪಡೆದುಕೊಂಡಿರುವವರ ವಿವರ ನೀಡುವುದು)

(ಇ) ಸಾರ್ವಜನಿಕರು ಮಾನ್ಯ ಮುಖ್ಯಮಂತ್ರಿಗಳ ಪರಿಹಾರ ನಿಧಿ ಪಡೆದುಕೊಳ್ಳಲು ಇರುವ ಮಾನದಂಡವೇನು; (ವಿವರ ನೀಡುವುದು)

(ಈ) ಮಾನ್ಯ ಮುಖ್ಯಮಂತ್ರಿಗಳ ಪರಿಹಾರ ನಿಧಿ ಪಡೆಯುವಲ್ಲಿ ಅವ್ಯವಹಾರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಜಿಲ್ಲಾವಾರು ವಿವರ ನೀಡುವುದು?

**ಕರ್ತವ್ಯ ನಿರತ ಅಧಿಕಾರಿ/ನೌಕರರುಗಳ ಅಸಹಜ ಸಾವಿನ ಬಗ್ಗೆ.**

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೩೩೫ (೪೦೨೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ನಾಲ್ಕು ವರ್ಷಗಳಲ್ಲಿ ಗೃಹ ಇಲಾಖೆಯಲ್ಲಿ ಕರ್ತವ್ಯ ನಿರತ ಅಸಹಜ ಸಾವಿಗೀಡಾದ ಅಧಿಕಾರಿ/ನೌಕರರುಗಳ ಸಂಖ್ಯೆ ಎಷ್ಟು;

(ಆ) ದಾಖಲಾದ ಸಾವಿನ ಪ್ರಕರಣಗಳೆಷ್ಟು; (ಇಲಾಖಾವಾರು, ಜಿಲ್ಲಾವಾರು ವಿವರ ನೀಡುವುದು)

(ಇ) ಈ ಪ್ರಕರಣಗಳಲ್ಲಿ ಎಷ್ಟು ಪ್ರಕರಣಗಳು ಇತ್ಯರ್ಥವಾಗಿ ನ್ಯಾಯ ದೊರಕಿದೆ; (ವಿವರ ನೀಡುವುದು)

(ಈ) ಇತ್ಯರ್ಥವಾಗದೆ ಬಾಕಿ ಇರುವ ಪ್ರಕರಣಗಳೆಷ್ಟು; ಹಾಗಿದ್ದಲ್ಲಿ, ಬಾಕಿ ಇರಲು ಕಾರಣಗಳೇನು; (ವಿವರ ನೀಡುವುದು)

(ಉ) ಬಾಕಿ ಉಳಿದಿರುವ ಪ್ರಕರಣಗಳನ್ನು ಎಷ್ಟು ಸಮಯದಲ್ಲಿ ಇತ್ಯರ್ಥ ಮಾಡಲಾಗುವುದು;

(ಊ) ಈ ಮೃತರ ಕುಟುಂಬ ವರ್ಗದವರಿಗೆ ನೀಡಲಾಗಿರುವ ಪರಿಹಾರ ಮೊತ್ತ ಎಷ್ಟು? (ವಿವರ ನೀಡುವುದು)

## ಪೊಲೀಸ್ ಸಿಬ್ಬಂದಿಗಳಿಗೆ ವಸತಿ ಗೃಹಗಳು ಹಾಗೂ ವಾಹನಗಳ ಕೊರತೆ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು)–**

೩೩೬೦ (೩೯೩೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ಪೊಲೀಸ್ ಕಾನ್ಸ್‌ಟೇಬಲ್‌ಗಳ ಹುದ್ದೆಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ಪೊಲೀಸ್ ಕಾನ್ಸ್‌ಟೇಬಲ್‌ಗಳ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರು ಜಿಲ್ಲೆಯಲ್ಲಿ ಕರ್ತವ್ಯ ನಿರತ ಪೊಲೀಸ್ ಸಿಬ್ಬಂದಿಗಳಿಗೆ ವಸತಿ ಗೃಹಗಳ ಕೊರತೆ ನೀಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಮಾನ್ವಿ ತಾಲ್ಲೂಕಿನ ಸಿರವಾರ ಪಟ್ಟಣದಲ್ಲಿ ನೂತನ ಅಗ್ನಿಶಾಮಕ ಠಾಣೆ ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ರಾಯಚೂರು ನಗರದ ಹೃದಯ ಭಾಗದಲ್ಲಿರುವ ಜಿಲ್ಲಾ ಕೇಂದ್ರ ಕಾರ್ಯಗೃಹವನ್ನು ನಗರದ ಹೊರಭಾಗಕ್ಕೆ ಸ್ಥಳಾಂತರಿಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಉ) ರಾಯಚೂರು ಜಿಲ್ಲೆಯಲ್ಲಿ ಪೊಲೀಸ್ ಸಿಬ್ಬಂದಿಗಳಿಗೆ ವಾಹನಗಳ ಕೊರತೆ ನೀಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

# ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳ ಅಭಿವೃದ್ಧಿ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು)–**

೩೩೬೧ (೪೩೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳಿಗೆ SCP/TSP ಯೋಜನೆಯಡಿಯಲ್ಲಿ ನೀಡಿರುವ ಅನುದಾನ ಎಷ್ಟು;

(ಆ) ಮಾನ್ವಿ ತಾಲ್ಲೂಕಿನಲ್ಲಿ ಬರುವ ಸಿರವಾರ, ಕವಿತಾಳ ಪಟ್ಟಣ ಪಂಚಾಯಿತಿಗಳಿಗೆ ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳಾವುವು;

(ಇ) ರಾಯಚೂರು ಹಾಗೂ ಮಾನ್ವಿ ನಗರಗಳಲ್ಲಿ ಶುದ್ಧ ಕುಡಿಯುವ ನೀರು (Filter Water) ಸರಬರಾಜು ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ರಾಯಚೂರು ಜಿಲ್ಲೆಯ ನಗರ ಸಭೆ ಪುರಸಭೆಗಳಲ್ಲಿ ಎಲ್.ಇ.ಡಿ. ದೀಪಗಳನ್ನು ಅಳವಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಉ) ರಾಯಚೂರು ಜಿಲ್ಲೆಯ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳಲ್ಲಿ ಸಿಬ್ಬಂದಿಗಳ ಕೊರತೆ ನೀಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಸರ್ಕಾರಿ ಜನಪರ ಯೋಜನೆಗಳು ಹಾಗೂ ಜಾಹೀರಾತು ಫಲಕಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು)–**

೩೩೬೨ (೪೩೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಿಲ್ಲಾ ಮಟ್ಟದ ಸ್ಥಳೀಯ ಪತ್ರಿಕೆಗಳನ್ನು ಪ್ರೋತ್ಸಾಹಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಜ್ಯಾದ್ಯಂತ ಸರ್ಕಾರಿ ಯೋಜನೆಗಳನ್ನು ಜನರಿಗೆ ಮನವರಿಕೆ ಮಾಡಲು ನಿರ್ಮಿಸಿರುವ ಜಾಹೀರಾತು ಫಲಕಗಳನ್ನು ಸುಸಜ್ಜಿತವಾಗಿ ನಿರ್ವಹಣೆ (Maintenance) ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಕಲಂ ೩೭೧ ಜೆ ಅಡಿಯಲ್ಲಿ ಭರ್ತಿ ಮಾಡಿರುವ ಹಾಗೂ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು)–**

೩೩೬೩ (೪೩೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್–ಕರ್ನಾಟಕ ವಿಶೇಷ ಸ್ಥಾನಮಾನದ ೩೭೧ ಜೆ ಕಲಂ ಮುಖಾಂತರ ವಿವಿಧ ಇಲಾಖೆಗಳಿಗೆ ಭರ್ತಿ ಮಾಡಿರುವ ಹುದ್ದೆಗಳು ಎಷ್ಟು; ಖಾಲಿ ಇರುವ ಹುದ್ದೆಗಳು ಎಷ್ಟು;

(ಆ) ಕೆಲವೊಂದು ನೇಮಕಾತಿಯಲ್ಲಿ ಇರುವ ಗೊಂದಲಗಳನ್ನು ನಿವಾರಣೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಪರಭಾಷಾ ಚಲನಚಿತ್ರಗಳ ಮೇಲೆ ಶೇಕಡಾ ೫ರಷ್ಟು ತೆರಿಗೆ ವಿಧಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೩೩೬೪ (೩೯೮೨) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರದರ್ಶನಗೊಳ್ಳುವ ಪರಭಾಷಾ ಚಲನಚಿತ್ರಗಳ ಮೇಲೆ ಶೇಕಡಾ ೫ರಷ್ಟು ಮೇಲ್ತೆರಿಗೆಯನ್ನು ವಿಧಿಸಲು ಉದ್ದೇಶಿಸಲಾಗಿದೆಯೇ;

(ಆ) ಹಾಗಿದ್ದಲ್ಲಿ, ಈ ಕುರಿತು ಸರಕಾರ ಆದೇಶ ಹೊರಡಿಸಿದೆಯೆ;

(ಇ) ಪರಭಾಷಾ ಚಲನಚಿತ್ರಗಳ ಮೇಲೆ ಮೇಲ್ತೆರಿಗೆ ವಿಧಿಸಿ ಕನ್ನಡ ಭಾಷಾ ಚಲನಚಿತ್ರಗಳ ಪ್ರೋತ್ಸಾಹಕ್ಕೆ ಸರ್ಕಾರ ರೂಪಿಸಿರುವ ನಿಯಮಗಳೇನು;

(ಈ) ಒಟ್ಟಾರೆ ಪರಭಾಷಾ ಚಲನಚಿತ್ರಗಳ ಹಾವಳಿಗಳಿಂದ ಕನ್ನಡ ಚಲನಚಿತ್ರಗಳನ್ನು ಉಳಿಸಿ ಬೆಳೆಸಲು ಸರ್ಕಾರ ಸಮಗ್ರ ಕನ್ನಡ ಭಾಷಾ ಚಲನಚಿತ್ರ ನೀತಿಯನ್ನು ರೂಪಿಸಿದೆಯೆ;

(ಉ) ಹಾಗಿದ್ದಲ್ಲಿ, ಈ ಕುರಿತು ಸರಕಾರ ಹೊರಡಿಸಿದ ಆದೇಶಗಳ ವಿವರ ನೀಡುವುದು?

## ನಗರ ಸ್ಥಳೀಯ ಸಂಸ್ಥೆಗಳ ಗುತ್ತಿಗೆ ಸಿಬ್ಬಂದಿಗಳನ್ನು ಖಾಯಂಗೊಳಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೩೩೬೫ (೩೯೮೩) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ಯೋಜನೆಯನ್ನು ಅನುಷ್ಠಾನಗೊಳಿಸಲು ಜಿಲ್ಲಾಧಿಕಾರಿಗಳಿಂದ ಆಯ್ಕೆಯಾಗಿ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಎಷ್ಟು ವರ್ಷಗಳಿಂದ ಇವರು ಸೇವೆ ಸಲ್ಲಿಸುತ್ತಿದ್ದಾರೆ;

(ಆ) ಸದರಿ ಸಿಬ್ಬಂದಿಗಳು ಕನಿಷ್ಠ ಅರ್ಹತೆಯೊಂದಿಗೆ, ಪದವಿ, ತಾಂತ್ರಿಕ ಪದವಿ ಸ್ನಾತಕೋತ್ತರ ಹಾಗೂ ಸೇವಾ ಅನುಭವ ಹೊಂದಿದವರಾಗಿದ್ದು, ಈ ಸಿಬ್ಬಂದಿಗಳ ಸೇವೆ ಹಾಗೂ ಕುಟುಂಬದ ಭದ್ರತೆಗೆ ಸರ್ಕಾರವು ತೆಗೆದುಕೊಂಡಿರುವ ಕ್ರಮವೇನು;

(ಇ) ಸಮಾನ ಕೆಲಸಕ್ಕೆ ಸಮಾನ ವೇತನ ನಿಯಮಾನುಸಾರ ಪಾವತಿಸಲಾಗುತ್ತಿದೆಯೇ;

(ಈ) ಸದರಿ ಸಿಬ್ಬಂದಿಗಳು ವಯೋಮಿತಿ ಮೀರುವ ಹಂತದಲ್ಲಿದ್ದು, ಇವರನ್ನು ಖಾಯಂಗೊಳಿಸುವ ಕುರಿತು ಸರ್ಕಾರದ ಕ್ರಮವೇನು?

## ಮಹಾಪುರುಷರ ಜಯಂತಿಗಳ ಆಚರಣೆ ಕುರಿತು

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೩೩೬೬ (೩೮೪೦) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರದ ವತಿಯಿಂದ ಎಷ್ಟು ಮಹಾಪುರುಷರ ಜಯಂತಿಗಳನ್ನು ಆಚರಿಸಲಾಗುತ್ತಿದೆ; ಅವು ಯಾವುವು; ಯಾವ ಯಾವ ದಿನಾಂಕಗಳಂದು ಅವುಗಳನ್ನು ಆಚರಿಸಲಾಗುತ್ತಿದೆ;

(ಆ) ಈ ದಿನಾಚರಣೆಗಳ ಆಚರಣೆಗಳ ನಿಮಿತ್ತ ಯಾವ ಯಾವ ಮಹಾಪುರುಷರ ಜಯಂತಿಗಳಿಗೆ ಸರ್ಕಾರಿ ರಜೆ ಘೋಷಿಸಲಾಗಿದೆ; ಯಾವ ಮಹಾಪುರುಷರ ಜಯಂತಿಗಳಿಗೆ ಸರ್ಕಾರಿ ರಜೆ ಘೋಷಿಸಲಾಗಿಲ್ಲ;

(ಇ) ಜಯಂತಿಗಳ ಆಚರಣೆ ಸಮಾರಂಭಗಳಿಗೆ ಸರ್ಕಾರದಿಂದ ಒದಗಿಸಲಾಗುತ್ತಿರುವ ಅನುದಾನ ಎಷ್ಟು; (ಜಯಂತಿವಾರು ಮಾಹಿತಿ ನೀಡುವುದು)

(ಈ) ಮಹಾಪುರುಷರ ಜಯಂತಿಗಳನ್ನು ಧರ್ಮ ಹಾಗೂ ಜಾತಿಗಳಿಗೆ ಸೀಮಿತಗೊಳಿಸಿ ಆಶೀರ್ವದಿಸುವುದರಿಂದ ಅವರನ್ನು ಧರ್ಮ ಹಾಗೂ ಜಾತಿಗಳಿಗೆ ಸೀಮಿತಗೊಳಿಸಿದಂತೆ ಆಗುವುದಿಲ್ಲವೇ;

(ಉ) ಸ್ವಾತಂತ್ರ್ಯೋತ್ಸವ ಗಣರಾಜ್ಯೋತ್ಸವ ಹಾಗೂ ಮಹಾತ್ಮಾಗಾಂಧಿ ಜಯಂತಿಗಳನ್ನು ಹೊರತುಪಡಿಸಿ ಉಳಿದ ಜಯಂತಿಗಳಿಗೆ ಸರ್ಕಾರಿ ರಜೆ ಕೊಡುವುದನ್ನು ರದ್ದುಪಡಿಸಲು ಸರ್ಕಾರ ಚಿಂತನೆ ನಡೆಸಿದೆಯೇ?

## ದೈಹಿಕ ವಿಕಲಚೇತನರಿಗೆ ನೇಮಕಾತಿಯಲ್ಲಿ ಆಗುತ್ತಿರುವ ಅನ್ಯಾಯ ಸರಿಪಡಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೩೩೬೭ (೩೮೩೯) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಗ್ರೂಪ್ ಎ ಹಾಗೂ ಬಿ ಹುದ್ದೆಗಳ ನೇಮಕಾತಿಯಲ್ಲಿ ವಿಕಲಚೇತನರಿಗೆ ಒಟ್ಟು ಎಷ್ಟು ಪ್ರತಿಶತ ಹುದ್ದೆಗಳನ್ನು ಮೀಸಲಿರಿಸಲಾಗಿದೆ;

(ಆ) ವಿಕಲಚೇತನರಿಗೆ ನಿಗದಿಪಡಿಸಿದ ಪ್ರತಿಶತದಲ್ಲಿ ಯಾವ ಯಾವ ವರ್ಗದವರಿಗೆ ಎಷ್ಟು ಪ್ರತಿಶತ ಒಳಮೀಸಲಾತಿ ನಿಗದಿಪಡಿಸಲಾಗಿದೆ;

(ಇ) ಗ್ರೂಪ್ 'ಸಿ' ಹಾಗೂ 'ಡಿ' ಹುದ್ದೆಗಳ ನೇಮಕಾತಿಯಲ್ಲಿ ವಿಕಲಚೇತನರಿಗೆ ಒಟ್ಟು ಎಷ್ಟು ಪ್ರತಿಶತ ಹುದ್ದೆಗಳನ್ನು ಮೀಸಲಿರಿಸಲಾಗಿದೆ;

(ಈ) ಈ ಮೀಸಲಾತಿಯಲ್ಲಿ ಯಾವ ಯಾವ ವರ್ಗದವರಿಗೆ ಎಷ್ಟು ಪ್ರತಿಶತ ಒಳಮೀಸಲಾತಿ ನಿಗದಿಪಡಿಸಲಾಗಿದೆ;

(ಉ) ಇತ್ತೀಚೆಗೆ ಅಧಿಸೂಚಿಸಿದ ನೇಮಕಾತಿಗಳಲ್ಲಿ ನಿಗದಿಪಡಿಸಿದ ಈ ಪ್ರತಿಶತ ಹುದ್ದೆಗಳನ್ನು ಒಳಮೀಸಲಾತಿಯನ್ವಯ ಆಯಾ ವರ್ಗದವರಿಗೆ ಮೀಸಲಿರಿಸಲಾಗಿದೆಯೇ;

(ಊ) ಹಾಗಿದ್ದಲ್ಲಿ, ಮುಂದಿನ ನೇಮಕಾತಿಗಳಲ್ಲಿ ಈ ನ್ಯೂನತೆಯನ್ನು ಸರಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

## ದೇವದುರ್ಗ ಪಟ್ಟಣ Distribution Line ಮಂಜೂರಾತಿ ಬಗ್ಗೆ

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೩೩೬೮ (೩೮೪೩) ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆ ದೇವದುರ್ಗ ಪಟ್ಟಣದ ನೀರು ಪೂರೈಸುವ ೨೪/೭ ಕಾಮಗಾರಿ ಪೂರ್ಣಗೊಂಡಿದೆಯೇ;

(ಆ) ಈ ಕಾಮಗಾರಿಯಲ್ಲಿ ಪಟ್ಟಣಕ್ಕೆ ನೀರು ಸರಬರಾಜು ಮಾಡಲು Distribution Line ಸೇರದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದರೆ, Distribution Line ಕಾಮಗಾರಿಗೆ ಹಣ ಮಂಜೂರಾತಿ ನೀಡಲಾಗುವುದು ಯಾವಾಗ?

## ರಾಜ್ಯದಲ್ಲಿರುವ ನಿಗಮ ಮಂಡಳಿಗಳ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೩೩೬೯ (೩೮೦೮) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಧಿಕಾರ, ಅಭಿವೃದ್ಧಿ ಮಂಡಳಿ ಹಾಗೂ ನಿಗಮ ಮಂಡಳಿಗಳು ಯಾವುವು; ಅವುಗಳ ಉದ್ದೇಶಗಳು ಏನು; (ಅಧ್ಯಕ್ಷರು ಹಾಗೂ ವ್ಯವಸ್ಥಾಪಕರ ಹೆಸರು, ದೂರವಾಣಿ ಸಂಖ್ಯೆ ಮತ್ತು ವಿಳಾಸ ಸಹಿತ ವಿವರ ನೀಡುವುದು)

ಆ) ಪ್ರಾಧಿಕಾರ, ಅಭಿವೃದ್ಧಿ ಮಂಡಳಿ ಹಾಗೂ ನಿಗಮ ಮಂಡಳಿಗಳಿಗೆ ಕಳೆದ ೫ ವರ್ಷಗಳಲ್ಲಿ ಸರ್ಕಾರ ನಿಗದಿಪಡಿಸಿದ ಅನುದಾನ ಎಷ್ಟು; ಅನುದಾನ ನಿಗದಿಗೆ ಇರುವ ಮಾನದಂಡವೇನು; (ಬೈಲಾಗಳು ಇದ್ದರೆ ಅವುಗಳ ಸಂಪೂರ್ಣ ವಿವರ ನೀಡುವುದು)

ಇ) ಪ್ರಾಧಿಕಾರ, ಅಭಿವೃದ್ಧಿ ಮಂಡಳಿ ಹಾಗೂ ನಿಗಮ ಮಂಡಳಿಗಳ ಕಾರ್ಯ ವೈಖರಿ ಕುರಿತು ಸರ್ಕಾರ ತೃಪ್ತಿ ಹೊಂದಿದೆಯೇ; ಇದರಿಂದ ಸರ್ಕಾರಕ್ಕೆ ಮತ್ತು ರಾಜ್ಯದ ಜನತೆಗೆ ಯಾವ ರೀತಿ ಉಪಯೋಗವಾಗಿದೆ; ಇವುಗಳ ಅವಶ್ಯಕತೆ ಕುರಿತು ವಿವರ ನೀಡುವುದು;

ಈ) ಪ್ರಾಧಿಕಾರ, ಅಭಿವೃದ್ಧಿ ಮಂಡಳಿ ಹಾಗೂ ನಿಗಮ ಮಂಡಳಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು? (ವೃಂದವಾರು ವಿವರ ನೀಡುವುದು)

## ಸರ್ಕಾರಿ ಸಮಾರಂಭಗಳಲ್ಲಿ ಜನ ಪ್ರತಿನಿಧಿಗಳ ಆಹ್ವಾನ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೩೩೭೦ (೩೭೮೯) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದ ವಿವಿಧ ಸ್ಥಳೀಯ ಸಂಸ್ಥೆಗಳ ಸದಸ್ಯರು, ಶಾಸಕರು, ಸಂಸದರು, ಆಯ್ಕೆಯಾಗಿ ಸರ್ಕಾರಿ ಸಭೆ ಸಮಾರಂಭ ಭೂಮಿ ಪೂಜೆ, ಸರ್ಕಾರದ ವಿವಿಧ ಕಾರ್ಯಕ್ರಮಗಳ ವೇದಿಕೆಯಲ್ಲಿ ಇವರ ಬದಲಾಗಿ ಈ ಸದಸ್ಯರ ಸಂಬಂಧಿಕರು ಸದಸ್ಯರಂತೆ ಅಧಿಕಾರ ಚಲಾಯಿಸುತ್ತಿದ್ದಾರೆಂಬ ಗಂಭೀರ ಆರೋಪವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಸದಸ್ಯರಾಗಿ ಆಯ್ಕೆಯಾದ ಸದಸ್ಯರ ಸಂಬಂಧಿಗಳು ಅಧಿಕಾರ ಚಲಾಯಿಸುವುದಕ್ಕೆ ಕಡಿವಾಣ ಹಾಕಲು ಸರ್ಕಾರ ಕಟ್ಟುನಿಟ್ಟಿನ ಮಾರ್ಗಸೂಚಿಯನ್ನು ರಚಿಸಿ ಆದೇಶಿಸಲು ಉದ್ದೇಶಿಸಿದೆಯೇ;

ಇ) ಇವರು ಆಯ್ಕೆಯಾದ ಜನಪ್ರತಿನಿಧಿಗಳಿಗೆ ಒದಗಿಸಿದ ಸರ್ಕಾರಿ ವಾಹನವನ್ನು ಬಳಸುತ್ತಿರುವುದಕ್ಕೂ ಕಡಿವಾಣ ಹಾಕಲು ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ ಕ್ರಮ ತೆಗೆದುಕೊಳ್ಳದಿದ್ದರೆ ಯಾವ ಕಾಲಮಿತಿಯೊಳಗೆ ಕ್ರಮ ಜರುಗಿಸಲಾಗುವುದು? (ವಿವರವಾದ ಮಾಹಿತಿ ನೀಡುವುದು)

## ಸರ್ಕಾರದ ವಿವಿಧ ಇಲಾಖೆಗಳಲ್ಲಿ ಉಪಯೋಗಕ್ಕೆ ಬಾರದ ವಾಹನಗಳ ವಿಲೇವಾರಿ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೩೩೭೧ (೩೮೦೦) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದಲ್ಲಿ ವಿವಿಧ ಸರ್ಕಾರಿ ಇಲಾಖೆಗಳಲ್ಲಿ ಉಪಯೋಗಕ್ಕೆ ಬಾರದ ಗುಜರಿಗೆ ಯೋಗ್ಯವಾದ ಒಟ್ಟು ಸರ್ಕಾರಿ ವಾಹನಗಳ ಸಂಖ್ಯೆ ಎಷ್ಟು; ಈ ವಾಹನಗಳನ್ನು ಲಿಲಾವು ಮುಖಾಂತರ ಹರಾಜು ಮಾಡುತ್ತಿಲ್ಲ ಏಕೆ; ವಿವರಣೆ ನೀಡುವುದು:

ಆ) ಚಲಾವಣೆ ಇಲ್ಲದ ವಾಹನಗಳು ತುಕ್ಕು ಹಿಡಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತುಕ್ಕು ಹಿಡಿದ ವಾಹನಗಳನ್ನು ಹರಾಜು ಹಾಕದೆ ಹಾಗೆ ಇಟ್ಟುಕೊಂಡಿರಲು ಕಾರಣಗಳೇನು? (ವಿವರಣೆ ನೀಡುವುದು)

## ಆರ್ಥಿಕ, ಮೂಲಭೂತ ಸೌಕರ್ಯ, ಕೃಷಿ, ಆರೋಗ್ಯ ಹಾಗೂ ಶಿಕ್ಷಣ ಕ್ಷೇತ್ರದಲ್ಲಿ ರಾಜ್ಯದ ರ್‍ಯಾಂಕಿಂಗ್ ಕಡಿಮೆ ಆಗುತ್ತಿರುವ ವರದಿ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ ) –**

೩೩೭೨ (೩೯೬೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರ್ಥಿಕ ಮೂಲಭೂತ ಸೌಕರ್ಯ, ಕೃಷಿ, ಆರೋಗ್ಯ ಹಾಗೂ ಶಿಕ್ಷಣ ಕ್ಷೇತ್ರದಲ್ಲಿ ರಾಷ್ಟ್ರ ಮಟ್ಟದ ರ್‍ಯಾಂಕಿಂಗ್‌ನಲ್ಲಿ ರಾಜ್ಯದ ರ್‍ಯಾಂಕಿಂಗ್ ಕಡಿಮೆ ಆಗುತ್ತಿರುವ ವರದಿಯು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿ ರಾಜ್ಯದ ರ್‍ಯಾಂಕಿಂಗ್ ಕಡಿಮೆ ಆಗಲು ಕಾರಣವೇನು ;

(ಇ) ರಾಜ್ಯದ ಸ್ಥಾನ ಕುಸಿಯದಂತೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ರಾಜ್ಯದಲ್ಲಿ ಸ್ಮಾರ್ಟ್ ಸಿಟಿ ಯೋಜನೆ ಕುರಿತು ಕೈಗೊಂಡ ಕ್ರಮದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ ) –**

೩೩೭೩ (೩೯೬೪) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ನಗರಗಳನ್ನು ಸ್ಮಾರ್ಟ್ ಸಿಟಿ ಯೋಜನೆಯಲ್ಲಿ ಅಭಿವೃದ್ಧಿಪಡಿಸಲು ನಿರ್ಣಯ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಆ) ಈ ಸ್ಮಾರ್ಟ್ ಸಿಟಿಗಳ ಅಭಿವೃದ್ಧಿಗೆ ಇರುವ ಮಾನದಂಡಗಳೇನು;

(ಇ) ಪ್ರತಿ ಸ್ಮಾರ್ಟ್ ಸಿಟಿಗೆ ಖರ್ಚು ಮಾಡಲಾಗುವ ಹಣದ ವಿವರ ನೀಡುವುದು;

(ಈ) ಈ ಯೋಜನೆಗೆ ನಿಗಧಿಪಡಿಸಿರುವ ಕಾಲಮಿತಿ ಎಷ್ಟು; (ವಿವರ ನೀಡುವುದು)

(ಉ) ಸ್ಮಾರ್ಟ್ ಸಿಟಿ ಕಾರ್ಯವನ್ನು ಅನುಷ್ಠಾನಕ್ಕಾಗಿ ರಾಜ್ಯ ಸರ್ಕಾರ ಏನೆಲ್ಲಾ ಕ್ರಮ ಕೈಗೊಂಡಿದೆ? (ವಿವರ ನೀಡುವುದು)

## ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಪೇಪರ್ ಲೆಸ್ ಆಫೀಸ್ ಮಾಡುವ ಪ್ರಕ್ರಿಯೆ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ ) –**

೩೩೭೪ (೩೯೬೩) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಮಾಹಿತಿ ತಂತ್ರಜ್ಞಾನ ಅಳವಡಿಸಿ ಪೇಪರ್‌ಲೆಸ್ ಆಫೀಸ್ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆಯೇ;

(ಆ) ಯಾವ ಯಾವ ಇಲಾಖೆಗಳಲ್ಲಿ ಈ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ ಹಾಗೂ ಈ ಕಾರ್ಯಕ್ರಮಗಳು ಯಾವ ಹಂತಕ್ಕೆ ತಲುಪಿವೆ;

(ಇ) ಗ್ರಾಮೀಣ ಪ್ರದೇಶದಲ್ಲಿ ಜನಸಾಮಾನ್ಯರಿಗೆ ಅವಶ್ಯವಿರುವ ಪಡಿತರ ಚೀಟಿ, ಪಹಣಿ ಪತ್ರ, ವಾಸ್ತವ್ಯ ದೃಢೀಕರಣ ಪತ್ರ, ಆದಾಯ ದೃಢೀಕರಣ ಪತ್ರ ಈ ರೀತಿಯ ಹತ್ತು ಹಲವಾರು ದೃಢೀಕರಣ ಪತ್ರಗಳು ದೈನಂದಿನ ಚಟುವಟಿಕೆಗಳಿಗೆ ಅವಶ್ಯವಿರುವುದರಿಂದ ಈ ದಾಖಲಾತಿಗಳನ್ನು ನೀಡಲು ಯಾವ ಕಾರ್ಯಕ್ರಮ ಕೈಗೊಳ್ಳಲಾಗಿದೆ?

## ಬಾಲ್ಯ–ವಿವಾಹ ಪ್ರಕರಣಗಳ ವಿರುದ್ಧ ಹೊಸ ತಿದ್ದುಪಡಿಯಂತೆ ಕೈಗೊಂಡ ಕ್ರಮದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ ) –**

೩೩೭೫ (೩೯೬೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಲ್ಯವಿವಾಹ ನಿಷೇಧ ಕಾಯಿದೆ ೨೦೦೬ಕ್ಕೆ ಮಹತ್ತರವಾದ ತಿದ್ದುಪಡಿಗಳನ್ನು ಕರ್ನಾಟಕ ಸರ್ಕಾರ ಮಾಡಿದ ಮೇಲೆ ಆ ಕಾಯಿದೆಯ ಕುರಿತು ಸರ್ಕಾರ ಪ್ರಚಾರ ಕಾರ್ಯಗಳನ್ನು ಮಾಡಿದೆಯೇ; (ವಿವರ ನೀಡುವುದು)

(ಆ) ತಿದ್ದುಪಡಿಯಾದ ಕಾಯಿದೆಯಂತೆ ಬಾಲ್ಯವಿವಾಹ ನಡೆಸಿದವರಿಗೆ ಕನಿಷ್ಟ ಒಂದು ವರ್ಷದ ಕಡ್ಡಾಯ ಶಿಕ್ಷೆ ವಿಧಿಸಿರುವ ಪ್ರಕರಣಗಳು ಎಷ್ಟಿವೆ; ಮತ್ತು ಎಲ್ಲೆಲ್ಲಿ ಇಂತಹ ಪ್ರಕರಣಗಳು ಬೆಳಕಿಗೆ ಬಂದಿವೆ; ಎಷ್ಟು ಪ್ರಕರಣಗಳಲ್ಲಿ ಶಿಕ್ಷೆ ಜಾರಿಯಾಗಿವೆ;

(ಇ) ಹೊಸ ತಿದ್ದುಪಡಿಯಂತೆ ಪೋಲೀಸರು ಸ್ವಯಂ ಪ್ರೇರಿತರಾಗಿ (Suo moto) ಬಾಲ್ಯವಿವಾಹ ಪ್ರಕರಣಗಳ ವಿರುದ್ಧ ಪ್ರಕರಣ ದಾಖಲಿಸಲು ಅವಕಾಶವಿರುವುದನ್ನು ಬಳಸಿಕೊಂಡು ಎಷ್ಟು ಕಡೆ ಬಾಲ್ಯವಿವಾಹಗಳನ್ನು ನಿಲ್ಲಿಸಿದ್ದಾರೆ ಅಥವಾ ತಪ್ಪಿತಸ್ಥರ ವಿರುದ್ಧ ಕ್ರಮಕೈಗೊಂಡಿದ್ದಾರೆ ಮತ್ತು ಎಲ್ಲೆಲ್ಲಿ; (ವಿವರ ನೀಡುವುದು)

(ಈ) ಬಾಲ್ಯ–ವಿವಾಹಗಳು ಮೊದಲಿನಿಂದಲೇ ರದ್ದಾದುದು (ವಾಯ್ಡ್ ಅಬ್ ಇನಿಷಿಯೋ) ಎಂದು ರಾಜ್ಯ ಸರ್ಕಾರದ ತಿದ್ದುಪಡಿ ಹೇಳಿರುವುದನ್ನು ಎಷ್ಟು ಪ್ರಕರಣಗಳಲ್ಲಿ ಬಾಲ್ಯವಿವಾಹಕ್ಕೆ ಈಡಾದವರು ಬಳಸಿಕೊಂಡಿದ್ದಾರೆ;

(ಉ) ವಾಯ್ಡ್ ಅಬಿ ಇನಿಷಿಯೋ ಎನ್ನುವುದನ್ನು ಅರ್ಥ ಮಾಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಊ) ವಾಯ್ಡ್ ಅಬ್ ಇನಿಷಿಯೋ ಬಳಸಿದವರಿಗೆ ಸರ್ಕಾರವು ಎಂತಹ ಸಹಾಯ ಮತ್ತು ಸಹಕಾರವನ್ನು ನೀಡಿದೆ?

## ರಾಜ್ಯದಲ್ಲಿ ಅಭಿವೃದ್ಧಿ ಗುರಿಗಳ ಜಾರಿಗಾಗಿ ಸರ್ಕಾರವು ಹಮ್ಮಿಕೊಂಡಿರುವ ಯೋಜನೆಗಳ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ ) –**

೩೩೭೬ (೩೯೬೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಶ್ವಸಂಸ್ಥೆಯ ಸುಸ್ಥಿರ ಅಭಿವೃದ್ಧಿ ಗುರಿಗಳಿಗೆ ಭಾರತ ಸರ್ಕಾರ ಒಪ್ಪಿಕೊಂಡಿದ್ದು, ನೀತಿ ಆಯೋಗದ ಸಲಹೆಯಂತೆ ಅಭಿವೃದ್ಧಿ ಗುರಿಗಳ ಜಾರಿಗಾಗಿ ಕರ್ನಾಟಕ ಸರ್ಕಾರವು ಯಾವ ಯೋಜನೆಗಳನ್ನು ಹಮ್ಮಿಕೊಂಡಿದೆ;

(ಆ) ಇಂತಹ ಯೋಜನೆಗಳನ್ನು ಸಿದ್ಧಪಡಿಸುವಲ್ಲಿ ಸರ್ಕಾರದ ಇಲಾಖೆಗಳು, ಸ್ವಯಂಸೇವಾ ಸಂಘಟನೆಗಳು, ಸಂಶೋಧನಾ ಸಂಸ್ಥೆಗಳು ಮತ್ತು ಶೈಕ್ಷಣಿಕ ಸಂಸ್ಥೆಗಳನ್ನು ಸೇರಿಸಿಕೊಳ್ಳಲಾಗಿದೆಯೇ;

(ಇ) ಇಂತಹ ಯೋಜನೆಯನ್ನು ತಯಾರಿಸುವಾಗ ರಾಜ್ಯದ ಎಲ್ಲಾ ವಿಧಾನಸಭಾ ಕ್ಷೇತ್ರಗಳು, ತಾಲ್ಲೂಕುಗಳು, ಗ್ರಾಮ ಪಂಚಾಯಿತಿಗಳ ಒಟ್ಟಾರೆ ಪರಿಸ್ಥಿತಿಯನ್ನು ಗಮನದಲ್ಲಿ ತೆಗೆದುಕೊಳ್ಳಲಾಗಿದೆಯೇ?

## ಬೆಂಗಳೂರು ಮೆಟ್ರೋ ನಿಗಮದಲ್ಲಿರುವ ಗುತ್ತಿಗೆ ನೌಕರರ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೩೩೭೭ (೪೦೦೫) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೆಂಗಳೂರು ಮೆಟ್ರೊ ರೈಲು ನಿಗಮ (B.M.R.C) ನಲ್ಲಿ ಗುತ್ತಿಗೆ/ ನಿಯೋಜನೆ ಮೇಲೆ ಎಷ್ಟು ಜನ ಸಿಬ್ಬಂದಿ ಕಾರ್ಯನಿರ್ವಹಿಸುತ್ತಿದ್ದಾರೆ; (ವಿವರವಾಗಿ ಹೆಸರು, ಹುದ್ದೆ, ನಿಗಮಕ್ಕೆ ಸೇರಿದ ದಿನಾಂಕ, ಅವರು ಪಡೆಯುತ್ತಿರುವ ವೇತನದೊಂದಿಗೆ ಮಾಹಿತಿ ಕೊಡುವುದು)

ಆ) ಈ ಗುತ್ತಿಗೆ/ನಿಯೋಜನೆ ಮೇಲೆ ನೇಮಕಗೊಂಡಿರುವ ಸಿಬ್ಬಂದಿಗಳು ಇವರ ಅಧೀನದಲ್ಲಿ ಕಾರ್ಯನಿರ್ವಹಿಸುವ ಕನ್ನಡದ ನೌಕರರಿಗೆ ಕಿರುಕುಳ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು;

ಇ) ಅಧಿಕಾರಿಗಳ ಮೇಲೆ ಕೈಗೊಂಡಿರುವ ಕ್ರಮಗಳೇನು;

ಈ) ಇಲ್ಲದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಕ್ರಮಕೈಗೊಳ್ಳಲಾಗುವುದು?

## ಫುಟ್‌ಪಾತ್ ಮತ್ತು ರಸ್ತೆಗಳ ವ್ಯಾಪಾರ ನಿಯಂತ್ರಣ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೩೩೭೮ (೯೭೪) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಫುಟ್‌ಪಾತ್‌ಗಳ ವ್ಯಾಪಾರಿಗಳ ತಾಣವಾಗಿದೆಯಲ್ಲದೆ ರಸ್ತೆಗಳಲ್ಲೂ ಮಾರಾಟ ಮಾಡುತ್ತಿದ್ದರೂ ಮಹಾನಗರ ಪಾಲಿಕೆ ಅಧಿಕಾರಿಗಳು ಕ್ರಮ ಕೈಗೊಳ್ಳದಿರಲು ಕಾರಣವೇನು;

(ಆ) ಅನೇಕ ಪುಟ್‌ಪಾತ್‌ಗಳು ಬೀದಿಬದಿ ವ್ಯಾಪಾರಿಗಳಿಂದ ತುಂಬಿದ್ದರೆ ರಸ್ತೆಯ ಎರಡೂ ಬದಿಗಳಲ್ಲಿ ತಳ್ಳುಗಾಡಿಗಳವರು ಮತ್ತು ಇತರ ಮಾರಾಟಗಾರರು ಆಕ್ರಮಿಸಿಕೊಂಡು ಪಾದಚಾರಿಗಳಿಗೆ ಮಾತ್ರವಲ್ಲದೆ ವಾಹನ ಸವಾರರಿಗೂ ತೊಂದರೆಯಾಗುತ್ತಿರುವ ಬಗ್ಗೆ ಪಾಲಿಕೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವುದೇ;

(ಇ) ಸಂಚಾರಿ ಪೊಲೀಸರ ಸಹಕಾರವನ್ನು ಪಡೆದು ಮಹಾನಗರ ಪಾಲಿಕೆ ಈ ವಿಚಾರದಲ್ಲಿ ಗಂಭೀರವಾಗಿ ಕ್ರಮ ಕೈಗೊಳ್ಳುತ್ತದೆಯೇ?

## ಕನ್ನಡ ಬೆರಳಚ್ಚುಗಾರರು ಮತ್ತು ಶೀಘ್ರಲಿಪಿಗಾರರ ನೇಮಕಾತಿಯಲ್ಲಿ ಬದಲಾವಣೆ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೩೩೭೯ (೩೯೭೫) ಮಾನ್ಯ ಮುಖ್ಯ ಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಂಪ್ಯೂಟರ್ ಬಂದ ಮೇಲೆ ಕನ್ನಡ ಬೆರಳಚ್ಚು ಯಂತ್ರಗಳ ಬಳಕೆ ಸಂಪೂರ್ಣವಾಗಿ ನಿಂತಿದ್ದು, ಬೆರಳಚ್ಚು ಕಲಿಯುವವರ ಸಂಖ್ಯೆಯು ಕಡಿಮೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

(ಆ) ಹೀಗಿರುವಾಗ ಕನ್ನಡ ಬೆರಳಚ್ಚುಗಾರರ ನೇಮಕಾತಿಗೆ ಕನ್ನಡ ಬೆರಳಚ್ಚು ಸೀನಿಯರ್ ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು ಎಂಬ ವಿದ್ಯಾರ್ಹತೆಯನ್ನು ಬದಲಿಸಿ ಕಂಪ್ಯುಟರ್‌ನಲ್ಲಿ ಕನ್ನಡ ಬೆರಳಚ್ಚು ಮಾಡುವ ಸಾಮರ್ಥ್ಯವಿರಬೆಕು ಎಂದು ಮಾಡಲಾಗುವುದೇ;

(ಇ) ಅದೇ ರೀತಿ ಕನ್ನಡ ಶೀಘ್ರಲಿಪಿಗಾರರ ನೇಮಕಾತಿಗೂ ಕನ್ನಡ ಶೀಘ್ರಲಿಪಿ ಸೀನಿಯರ್ ಮತ್ತು ಕನ್ನಡ ಬೆರಳಚ್ಚು ಸೀನಿಯರ್ ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು ಎಂಬುದನ್ನು ಬದಲಿಸಿ ಕನ್ನಡ ಶೀಘ್ರಲಿಪಿ ಸೀನಿಯರ್‌ನಲ್ಲಿ ತೇರ್ಗಡೆಯಾಗಿರಬೇಕು ಮತ್ತು ಕಂಪ್ಯೂಟರ್‌ನಲ್ಲಿ ಕನ್ನಡ ಬೆರಳಚ್ಚು ಮಾಡುವ ಸಾಮರ್ಥ್ಯವಿರಬೇಕು ಎಂದು ಬದಲಾವಣೆ ತರಲಾಗುವುದೇ?

## ಮೈಸೂರು ನಗರದ ರಸ್ತೆಯೊಂದಕ್ಕೆ ಶ್ರೀ ಎನ್. ರಾಚಯ್ಯನವರ ಹೆಸರನ್ನು ನಾಮಕರಣ ಮಾಡುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೩೩೮೦ (೩೯೭೬) ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ನಗರದಲ್ಲಿ ರಸ್ತೆಯೊಂದಕ್ಕೆ ಮಾಜಿ ಮಂತ್ರಿಗಳಾದ ದಿವಂಗತ ಶ್ರೀ ಎನ್. ರಾಚಯ್ಯ ರಸ್ತೆ ಎಂದು ಹೆಸರಿಡಲು ತೀರ್ಮಾನಿಸಲಾಗಿದ್ದು ಯಾವಾಗ; ಇನ್ನೂ ಅದರು ಜಾರಿಗೆ ಬಾರದಿರಲು ಕಾರಣವೇನು;

(ಆ) ಮೈಸೂರು ಮಹಾನಗರ ಪಾಲಿಕೆಯಲ್ಲಿ ಈ ಬಗ್ಗೆ ಯಾವಾಗ ನಿರ್ಣಯ ಕೈಗೊಳ್ಳಲಾಗಿದೆ; ಸರ್ಕಾರಕ್ಕೆ ಕಳುಹಿಸಿಕೊಡಲಾಗಿರುವುದು ಯಾವಾಗ;

(ಇ) ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಎಷ್ಟು ದಿನಗಳಲ್ಲಿ ರಸ್ತೆಗೆ ಅವರ ಹೆಸರನ್ನು ನಾಮಕರಣ ಮಾಡಲಾಗುವುದು?

## ಕೋಮು ಗಲಭೆಯಲ್ಲಿ ಭಾಗವಹಿಸಿರುವವರ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) –**

೩೩೮೧ (೩೮೧೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಕೋಮು ಪ್ರಚೋದನೆ ಭಾಷಣ ಮಾಡಿದ ಬಗ್ಗೆ ರಾಜ್ಯದಲ್ಲಿ ೨೦೧೬–೧೭ ಮತ್ತು ೨೦೧೭–೧೮ನೇ ಸಾಲಿನಲ್ಲಿ ದಾಖಲಾಗಿರುವ ಒಟ್ಟು ಪ್ರಕರಣಗಳೆಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

ಆ) ಕೋಮು ಗಲಭೆಯುಲ್ಲಿ ಭಾಗಿಯಾದ ಆರೋಪಿಗಳನ್ನು ಬಂಧಿಸಲಾಗಿದೆಯೇ; ಬಂದಿಸಲಾಗಿದ್ದರೆ, ವಿವರ ನೀಡುವುದು; (ಇಲ್ಲವಾದಲ್ಲಿ ವಿವರ ನೀಡುವುದು)

ಇ) ಕಲಂ ೧೪೪ ಸಿ.ಆರ್.ಪಿ.ಸಿ ಯನ್ನು ಉಲ್ಲಂಘಿಸಿ ಮೆರವಣಿಗೆ ಮಾಡಿದ ಪ್ರಕರಣದಲ್ಲಿ ಬಂಟ್ವಾಳ ಪೊಲೀಸ್ ಠಾಣೆಯಲ್ಲಿ ಆರೋಪಿಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆಯೇ; ಈ ಪ್ರಕರಣದಲ್ಲಿನ ಆರೋಪಿಗಳು ಯಾರು? (ವಿವರ ನೀಡುವುದು)

## ರಾಜ್ಯದಲ್ಲಿ ಮಾದಕ ದ್ರವ್ಯಗಳ ಸಾಗಾಣಿಕೆಯ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) –**

೩೩೮೨ (೩೮೧೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದಲ್ಲಿ ಮಾದಕ ಪದಾರ್ಥಗಳ ಮಾರಾಟ ಮತ್ತು ಸೇವನೆ ಮಾಡಿದವರ ಮೇಲೆ ಎಷ್ಟು ಪ್ರಕರಣಗಳನ್ನು ದಾಖಲು ಮಾಡಲಾಗಿದೆ; (ಜಿಲ್ಲಾವಾರು ವಿವರ ಒದಗಿಸುವುದು)

ಆ) ಮಾದಕ ದ್ರವ್ಯಗಳ ಸಾಗಾಟ ಮತ್ತು ಮಾರಾಟವನ್ನು ನಿಲ್ಲಿಸಲು ಇಲಾಖೆಯು ಕೈಗೊಂಡಿರುವ ಕ್ರಮಗಳೇನು; ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಕೇಸುಗಳನ್ನು ದಾಖಲಿಸಲಾಗಿದೆ; (ವಿವರ ಒದಗಿಸುವುದು)

ಇ) ಮಾದಕ ದ್ರವ್ಯಗಳು ಶಾಲಾ–ಕಾಲೇಜುಗಳ ವಠಾರದಲ್ಲಿ ಮಾರಾಟ ಆಗುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ; (ವಿವರ ಒದಗಿಸುವುದು)

ಈ) ಕೇರಳ ರಾಜ್ಯದಿಂದ ಮಾದಕ ದ್ರವ್ಯಗಳು ಕರ್ನಾಟಕ ರಾಜ್ಯಕ್ಕೆ ಸಾಗಾಣಿಕೆ ಆಗುತ್ತದೆ ಎಂಬ ದೂರುಗಳಿದ್ದು, ಈ ನಿಟ್ಟಿನಲ್ಲಿ ಇಲಾಖೆ ಕೈಗೊಂಡ ಕ್ರಮಗಳೇನು?

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪೌರಾಡಳಿತ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) –**

೩೩೮೩ (೩೮೧೬) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಕಳೆದ ೩ ವರ್ಷಗಳಲ್ಲಿ ಪೌರಾಡಳಿತ ಇಲಾಖೆಯಿಂದ ಕೈಗೊಂಡ ಅಭಿವೃದ್ಧಿ ಕಾಮಗಾರಿಗಳು ಯಾವುವು; (ವಿವರ ಒದಗಿಸುವುದು)

ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪೌರಾಡಳಿತ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಸಿಬ್ಬಂದಿ ಸಂಖ್ಯೆ ಎಷ್ಟು; (ವಿವರ ಒದಗಿಸುವುದು)

ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪೌರಾಡಳಿತ ಇಲಾಖೆಯಿಂದ ಒಟ್ಟು ಎಷ್ಟು ಅನುದಾನ ಮಂಜೂರಾಗಿದೆ; ಯಾವ ಯಾವ ಸಂಸ್ಥೆಗಳಿಗೆ ಬಿಡುಗಡೆ ಆಗಿದೆ; (ವಿವರ ಒದಗಿಸುವುದು)

ಈ) ಮಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಪಂಪ್‌ವೆಲ್‌ನಲ್ಲಿ ಪ್ರಾರಂಭಿಸಲು ಉದ್ದೇಶಿಸಿದ ಬಸ್ಸು ನಿಲ್ದಾಣ ಪ್ರಾರಂಭಗೊಳ್ಳದಿರಲು ಕಾರಣವೇನು; ಈ ಯೋಜನೆ ಎಂದು ಮಂಜೂರಾಗಿತ್ತು; ಬಿಡುಗಡೆ ಆದ ಅನುದಾನ ಎಷ್ಟು? (ವಿವರ ಒದಗಿಸುವುದು)

## ಸ್ಮಾರ್ಟ್ ಸಿಟಿ ಯೋಜನೆಯ ಅನುಷ್ಠಾನದ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) –**

೩೩೮೪ (೩೮೧೫) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಸ್ಮಾರ್ಟ್ ಸಿಟಿ ಯೋಜನೆಯನ್ವಯ ಮಂಗಳೂರು ಮಹಾನಗರ ಪಾಲಿಕೆಗೆ ಬಿಡುಗಡೆ ಆದ ಅನುದಾನವೆಷ್ಟು; ಈ ಯೋಜನೆಯನ್ವಯ ಕೈಗೊಂಡ ಯೋಜನೆಗಳಾವುವು; (ವಿವರ ಒದಗಿಸುವುದು)

ಆ) ಸ್ಮಾರ್ಟ್ ಸಿಟಿ ಯೋಜನೆಯಿಂದ ಮಹಾನಗರ ಪಾಲಿಕೆಗೆ ಆದ ಹೆಚ್ಚುವರಿ ಅನುದಾನ ಎಷ್ಟು; ಕೇಂದ್ರ ಮತ್ತು ರಾಜ್ಯದ ಅನುದಾನದ ಪಾಲೆಷ್ಟು; (ವಿವರ ಒದಗಿಸುವುದು)

ಇ) ಮುಖ್ಯಮಂತ್ರಿಗಳ ವಿಶೇಷ ಯೋಜನೆಯನ್ವಯ ರೂ.೩೦೦.೦೦ ಕೋಟಿ ಅನುದಾನದ ಯೋಜನೆಗಳಲ್ಲಿ ಮೊದಲ ಹಂತದ ರೂ.೧೦೦.೦೦ ಕೋಟಿಯ ಪ್ರಸ್ತಾವನೆ ಕಾಮಗಾರಿ ಪೂರ್ಣಗೊಂಡಿದೆಯೇ; ಈ ಯೋಜನೆಗಳಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಆರೋಪಿಗಳ ಮೇಲೆ ಗೂಂಡಾ ಕಾಯ್ದೆ ಹಾಕಿರುವ ಕುರಿತು

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) –**

೩೩೮೫ (೩೮೧೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದಲ್ಲಿ ಎಷ್ಟು ಆರೋಪಿಗಳ ಮೇಲೆ ಗೂಂಡಾ ಕಾಯ್ದೆ ಅನ್ವಯ ಕೇಸು ಹಾಕಲಾಗಿದೆ; (ವಿವರ ಒದಗಿಸುವುದು)

ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಮಂದಿ ಆರೋಪಿಗಳ ಮೇಲೆ ಗೂಂಡಾ ಕಾಯ್ದೆ ಹಾಕಲಾಗಿದೆ; ಶಾಂತಿ ಸುವ್ಯವಸ್ಥೆ ಕಾಪಾಡಲು ಎಷ್ಟು ಮಂದಿ ಮೇಲೆ ಕೇಸ್ ದಾಖಲಾಗಿದೆ; (ವಿವರ ಒದಗಿಸುವುದು)

ಇ) ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲ್ಲೂಕಿನಲ್ಲಿ ಕೋಮು ಸಂಘರ್ಷದಿಂದ ೨೦೧೭ರಲ್ಲಿ ಮರಣ ಹೊಂದಿದ ಎರಡು ಪ್ರಕರಣಗಳಲ್ಲಿ ಆರೋಪಿಗಳನ್ನು ಪತ್ತೆ ಹಚ್ಚಲಾಗಿದೆಯೇ; ಅವರು ಯಾವ ಸಂಘಟನೆಗೆ ಸೇರಿದ್ದಾರೆ; (ವಿವರ ಒದಗಿಸುವುದು)

ಈ) ಕೊಲೆ ಪ್ರಕರಣಗಳ ಹಿಂದೆ ಇರುವ ಹಿನ್ನಲೆ ಹಾಗೂ ಆರೋಪಿಗಳ ಹಿನ್ನಲೆ ಬಗ್ಗೆ ತನಿಖೆ ನಡೆಸಲಾಗಿದೆಯೇ? (ವಿವರ ಒದಗಿಸುವುದು)

## ಪೊಲೀಸ್ ಠಾಣೆಗಳ ಎದುರು ಜಪ್ತಿಗೊಂಡ ವಾಹನಗಳ ಹರಾಜು ಪ್ರಕ್ರಿಯೆ ಬಗ್ಗೆ

**ಡಾ॥ ಜಯಮಾಲ ರಾಮಚಂದ್ರ (ನಾಮ ನಿರ್ದೇಶನ ಹೊಂದಿದವರು) –**

೩೩೮೬ (೪೯೫೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿರುವ ಪೊಲೀಸ್ ಠಾಣೆಗಳಲ್ಲಿ ಜಪ್ತಿ ಮಾಡಿಕೊಂಡು ಧೂಳು ಹಿಡಿದ ವಾಹನ/ದ್ವಿಚಕ್ರ ವಾಹನಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಅಂಕಿ ಅಂಶ ನೀಡುವುದು)

(ಆ) ಹರಾಜು ಹಾಕದೆ ಉಳಿದ ವಾಹನಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ವಾಹನಗಳನ್ನು ಕಾನೂನಾತ್ಮಕವಾಗಿ ಹರಾಜು ಹಾಕಲು ಸರ್ಕಾರ ತೆಗೆದುಕೊಂಡ ಕ್ರಮವೇನು?

## GSTಯು ಜಾರಿಯಾದ ದಿನದಿಂದ ಚಿತ್ರೋದ್ಯಮವು ಗೊಂದಲದಲ್ಲಿ ಸಿಲುಕಿರುವ ಬಗ್ಗೆ

**ಡಾ॥ ಜಯಮಾಲ ರಾಮಚಂದ್ರ (ನಾಮ ನಿರ್ದೇಶನ ಹೊಂದಿದವರು) –**

೩೩೮೭ (೪೯೫೮) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಕನ್ನಡ ಚಿತ್ರಗಳಿಗೆ ಇಲ್ಲಿಯವರೆಗೆ ೧೦೦% ತೆರಿಗೆ ವಿನಾಯಿತಿ ಇದ್ದು ಏಕರೂಪ ತೆರಿಗೆ ಪದ್ಧತಿಯಾದ GSTಯು ಬಂದ ಮೇಲೆ ರಾಜ್ಯಕ್ಕೆ ೯% ಮತ್ತು ಕೇಂದ್ರ ಸರ್ಕಾರಕ್ಕೆ ೯% ಮನರಂಜನಾ ತೆರಿಗೆಯನ್ನು ಪಾವತಿ ಮಾಡಲು ಸೂಚಿಸಿರುವುದು ಸರ್ಕಾರದ ಗಮನದಲ್ಲಿ ಇದೆಯೇ;

(ಆ) GSTಯು ಜಾರಿಯಾದ ದಿನದಿಂದ ಚಿತ್ರೋದ್ಯಮವು ಗೊಂದಲಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಚಿತ್ರೋದ್ಯಮದ ಸಮಸ್ಯೆಯನ್ನು ಬಗೆಹರಿಸುವ ನಿಟ್ಟಿನಲ್ಲಿ ಸರ್ಕಾರದ ಮುಂದಿರುವ ಯೋಜನೆಗಳಾವುವು?

## ಚಿತ್ರಮಂದಿರಗಳ ಟಿಕೆಟ್ ದರ ೨೦೦ ರೂ. ಕಡ್ಡಾಯಗೊಳಿಸಲು ಸಿನಿಮಾಟೋಗ್ರಫಿ ಕಾಯಿದೆಯಲ್ಲಿ ಬದಲಾವಣೆ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮ ನಿರ್ದೇಶನ ಹೊಂದಿದವರು) –**

೩೩೮೮ (೩೯೫೭) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :

(ಅ) ರಾಜ್ಯ ಸರ್ಕಾರವು ೨೦೧೭–೧೮ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾದಂತೆ ರಾಜ್ಯದ ಜನತೆಗೆ ಚಲನಚಿತ್ರ ಮಂದಿರಗಳಲ್ಲಿ ಏಕರೂಪದ ಟಿಕೆಟ್ ದರವನ್ನು ೨೦೦.ರೂ. ಗಳಿಗೆ ನಿಗಧಿ ಮಾಡಿದ ಆದೇಶ ಹೊರಡಿಸಿದ್ದರೂ ಚಿತ್ರಮಂದಿರದವರು ಈ ಆದೇಶವನ್ನು ಪಾಲಿಸದೇ ಪ್ರೇಕ್ಷಕರ ಬಳಿ ಹೆಚ್ಚಿನ ಹಣವನ್ನು ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ರೀತಿ ಹೆಚ್ಚಿನ ಹಣ ವಸೂಲಿ ಮಾಡುವುದಕ್ಕೆ ಕಡಿವಾಣ ಹಾಕಲು ಸಿನಿಮಾಟೋಗ್ರಫಿ ಕಾಯಿದೆಯಡಿಯಲ್ಲಿ ಬದಲಾವಣೆ ತರುವ ಸಂಬಂಧ ಸರ್ಕಾರ ಕ್ರಮ ವಹಿಸುವುದೇ?

## ರಾಜ್ಯದಲ್ಲಿ ಮಹಿಳೆ ಮತ್ತು ಮಕ್ಕಳ ಮಾರಾಟ ಜಾಲಗಳನ್ನು ನಿಯಂತ್ರಿಸುವ ಬಗ್ಗೆ

**ಡಾ॥ ಜಯಮಾಲ ರಾಮಚಂದ್ರ (ನಾಮ ನಿರ್ದೇಶನ ಹೊಂದಿದವರು) –**

೩೩೮೯ (೩೯೫೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಹಿಳೆಯರ ಮತ್ತು ಮಕ್ಕಳ ಮಾರಾಟ ಜಾಲಗಳು ಹೆಚ್ಚಾಗುತ್ತಿರುವ ವಿಚಾರವು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕಳೆದ ೩ ವರ್ಷಗಳಿಂದ ಮಹಿಳೆಯರ ಮತ್ತು ಮಕ್ಕಳ ಮಾರಾಟದ ವಿಚಾರವಾಗಿ ದಾಖಲಾದ ಹಾಗೂ ಪತ್ತೆ ಹಚ್ಚಿರುವ ಒಟ್ಟು ಪ್ರಕರಣಗಳ ಸಂಖ್ಯೆಗಳೆಷ್ಟು; ಇದರ ಬಗ್ಗೆ ಸರ್ಕಾರವು ತೆಗೆದುಕೊಂಡ ಕ್ರಮಗಳೇನು;

(ಇ) ಈ ಜಾಲವು ಉತ್ತರ ಕರ್ನಾಟಕ ಭಾಗದಲ್ಲಿ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ; ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಈ) ಎಷ್ಟು ಜಿಲ್ಲೆಗಳಲ್ಲಿ Trafficking cell ಸ್ಥಾಪಿಸಲಾಗಿದೆ; ೩೦ ಜಿಲ್ಲೆಗಳಲ್ಲೂ Trafficking cell ಕಾರ್ಯನಿರ್ವಹಿಸುತ್ತಿದೆಯೇ; ಎಷ್ಟು ಮಹಿಳೆ ಮತ್ತು ಮಕ್ಕಳನ್ನು ಈ Trafficking cell ನಿಂದ ರಕ್ಷಿಸಲಾಗಿದೆ; (ಜಿಲ್ಲಾವಾರು ಅಂಕಿ ಅಂಶ ವಿವರ ನೀಡುವುದು)

(ಉ) ರಾಜ್ಯದ ಪ್ರತಿ ಬಸ್ ಸ್ಟ್ಯಾಂಡ್‌ಗಳಲ್ಲಿ, ಕೆಲ ಸಾರ್ವಜನಿಕ ಸ್ಥಳಗಳಲ್ಲಿ ಮತ್ತು ರೈಲ್ವೆ ನಿಲ್ದಾಣದಲ್ಲಿ ಮಕ್ಕಳ ಮತ್ತು ಮಹಿಳೆಯರ ಮಾರಾಟ ಜಾಲವನ್ನು ತಡೆಗಟ್ಟಲು ಎಚ್ಚರಿಕೆ ಸಂದೇಶವನ್ನು ಕೊಡುವ ಸೂಚನಾ ಫಲಕವನ್ನು ಅಳವಡಿಸಿ ಎಲ್ಲಾ ಸಾರ್ವಜನಿಕರಿಗೆ/ಪ್ರಯಾಣಿಕರಿಗೆ ಗೋಚರಿಸುವ ರೀತಿಯಲ್ಲಿ ಸೂಕ್ತವಾಗಿ ಪ್ರಚಾರ ಮಾಡುವುದಕ್ಕೆ ಸರ್ಕಾರವು ತೆಗೆದುಕೊಂಡ ಕ್ರಮವೇನು?

## ರಾಜ್ಯದಲ್ಲಿ ಖಾಲಿ ಇರುವ ಸರ್ಕಾರಿ ಹುದ್ದೆಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) –**

೩೩೯೦ (೩೮೦೬) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ರಾಜ್ಯದಲ್ಲಿ ಖಾಲಿ ಇರುವ ಸರ್ಕಾರಿ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ವಿವರಣೆ ನೀಡುವುದು)

## ನಗರಾಭಿವೃದ್ಧಿ ಕೋಶದಲ್ಲಿ ಮತ್ತು ಪಾಲಿಕೆಗಳಲ್ಲಿ ಬಡತನ ನಿರ್ಮೂಲನ ಕೋಶದ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) –**

೩೫೯೧ (೩೮೬೨) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದ ಎಲ್ಲಾ ಜಿಲ್ಲೆಯ ಜಿಲ್ಲಾ ನಗರಾಭಿವೃದ್ಧಿ ಕೋಶ, ಮಹಾನಗರ ಪಾಲಿಕೆಗಳಲ್ಲಿ ನಗರ ಬಡತನ ನಿರ್ಮೂಲನ ಕೋಶಗಳು ಕಳೆದ ಎಷ್ಟು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿವೆ;

ಆ) ನಗರ ಬಡತನ ನಿರ್ಮೂಲನ ಕೋಶದಲ್ಲಿ ಗುತ್ತಿಗೆ ಆಧಾರದ ಮೇಲೆ ನೇಮಕಾತಿಗೊಂಡ ವಿಷಯ ತಜ್ಞರು ಮತ್ತು ಕಛೇರಿ ಸಹಾಯಕರುಗಳ ಸೇವೆಯನ್ನು ಖಾಯಂಗೊಳಿಸುವ ಕುರಿತು ಮಾನ್ಯ ಮುಖ್ಯಮಂತ್ರಿಯವರು ತಾತ್ವಿಕ ಒಪ್ಪಿಗೆ ನೀಡಿದ್ದರೂ ಸಹ ಸದರಿ ಕಡತವನ್ನು ಕಳೆದ ೩ ವರ್ಷಗಳಿಂದ ಸಚಿವ ಸಂಪುಟ ಸಭೆಗೆ ಮಂಡಿಸಿಲ್ಲ ಏಕೆ;

ಇ) ವಿಷಯ ತಜ್ಞರು ಡಾಕ್ಟರೇಟ್, ಎಮ್‌ಫಿಲ್., ಎಮ್.ಎಸ್.ಡಬ್ಲ್ಯು., ಎಂ.ಎ., ಸ್ನಾತಕೋತ್ತರ ಪದವಿಯೊಂದಿಗೆ ಸೇವಾ ಅನುಭವವನ್ನು ಹೊಂದಿದ್ದು, ಸದರಿ ವಿಷಯ ತಜ್ಞರ ಸೇವಾ ಭದ್ರತೆ ಒದಗಿಸಲು ಕೈಗೊಂಡ ಕ್ರಮವೇನು;

ಈ) ವಿಷಯ ತಜ್ಞರಿಗೆ ನೀಡುತ್ತಿರುವ ಮಾಸಿಕ ವೇತನವೆಷ್ಟು; ಪ್ರತಿ ವರ್ಷ ನಿಯಮಗಳ ಪ್ರಕಾರ ವೇತನವನ್ನು ಪರಿಷ್ಕರಿಸಲಾಗಿದೆಯೇ; ಇಲ್ಲವಾದಲ್ಲಿ, ಕಾರಣವೇನು;

ಉ) ವಿಷಯ ತಜ್ಞರು ಹಾಗೂ ಕಛೇರಿ ಸಹಾಯಕರಿಗೆ ಕಳೆದ ೯ ತಿಂಗಳಿಂದ ವೇತನ ಪಾವತಿಸದೇ ಇರುವುದಕ್ಕೆ ಕಾರಣವೇನು;

ಊ) ವೇತನ ಪಾವತಿಸಲು ಇಲಾಖೆಯಲ್ಲಿ ಅನುದಾನದ ಕೊರತೆ ಇದೆಯೇ; ಅನುದಾನ ಕೊರತೆಯಿದ್ದಲ್ಲಿ, ಇಲಾಖೆ ತೆಗೆದುಕೊಂಡಿರುವ ಕ್ರಮವೇನು;

ಋ) ಪಾವತಿಸದೇ ಇದ್ದ ವೇತನವನ್ನು ಎಷ್ಟು ದಿನದಲ್ಲಿ ಪಾವತಿಸಲಾಗುವುದು? (ವಿವರ ನೀಡುವುದು)

## ಸಚಿವಾಲಯದ ``ರಾಜಕೀಯ ವಿಶ್ರಾಂತಿ ವೇತನ'' ಇಲಾಖೆಯ ಅಸ್ಥಿತ್ವ, ಅಧಿಕಾರಿ ಮತ್ತು ಸಿಬ್ಬಂದಿಗಳ ಸೇವೆ ಬಗ್ಗೆ

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) –**

೩೩೭ (೩೮೨೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಭಾರತವು ಸ್ವಾತಂತ್ರ್ಯವಾಗಿ ೭೦ ವರ್ಷ ಗತಿಸಿದರೂ ಸಚಿವಾಲಯದ ರಾಜಕೀಯ ವಿಶ್ರಾಂತಿ ವೇತನ ಇಲಾಖೆಯು ಇನ್ನೂ ಅಸ್ತಿತ್ವದಲ್ಲಿ ಇದೆಯೇ; ಇಲ್ಲಿ ಯಾವ ಯಾವ ಅಧಿಕಾರಿಗಳು ಮತ್ತು ಎಷ್ಟು ಜನ ಸಿಬ್ಬಂದಿ ಸೇವೆ ಸಲ್ಲಿಸುತ್ತಿದ್ದಾರೆ; ಗೋವಾ ವಿಭಾಗದಲ್ಲಿ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿ ಎಷ್ಟು;

ಆ) ಈ ಇಲಾಖೆಯಲ್ಲಿ ಈಗ ಎಷ್ಟು ಪ್ರಕರಣಗಳು ಮರು ಮಂಜೂರಾತಿ ಹಂತದಲ್ಲಿ ಬಾಕಿ ಇರುತ್ತವೆ; ಮಂಜೂರಾತಿಗೆ ಅರ್ಹತೆ ಇದ್ದ

ಚಲಾವಣೆಯಲ್ಲಿರುವ ಕಡತಗಳ ಸಂಖ್ಯೆ ಎಷ್ಟು; ಇವುಗಳನ್ನು ಇತ್ಯರ್ಥಪಡಿಸಲು ಸಚಿವಾಲಯದಲ್ಲಿ ಎಷ್ಟು ಸಿಬ್ಬಂದಿ ಕಾರ್ಯನಿರ್ವಹಿಸುತ್ತಿದ್ದಾರೆ;

ಇ) ಬಾಕಿ ಉಳಿದಿರುವ ಪ್ರಕರಣಗಳನ್ನು ಪ್ರಾಧಾನ್ಯತೆ ಮೇರೆಗೆ ಇತ್ಯರ್ಥಪಡಿಸಿ ಈ ಇಲಾಖೆಯನ್ನು ಮುಂದುವರೆಸುವ, ಇಲ್ಲವೇ ಮುಚ್ಚಿ ಹಾಕುವ ಯೋಜನೆ ಸರ್ಕಾರಕ್ಕೆ ಇದೆಯೇ;

ಈ) ರಾಜ್ಯದಲ್ಲಿ ಸ್ವಾತಂತ್ರ್ಯ ಯೋಧರ ಪಿಂಚಣಿ ಮತ್ತು ಗೋವಾ ಯೋಧರ ಪಿಂಚಣಿ ಪಡೆಯುತ್ತಿರುವವರ ಸಂಖ್ಯೆ ಎಷ್ಟು;

ಉ) ಬಾಕಿ ಉಳಿದಿರುವ ಗೋವಾ ಸ್ವಾತಂತ್ರ್ಯ ಯೋಧರ ಪಿಂಚಣಿ ಮಂಜೂರು ಮಾಡಲು ಸರ್ಕಾರವು ಯಾವ ಹೊಸ ಮಾರ್ಗ ಸೂಚಿಯನ್ನು ಅನುಮೋದಿಸುತ್ತದೆ; ಹೊಸದಾಗಿ ಗೋವಾ ಪಿಂಚಣಿದಾರರಿಗೆ ಪಿಂಚಣಿ ಮಂಜೂರು ಮಾಡಲು ಸರ್ಕಾರದಲ್ಲಿ ಅವಕಾಶ ಇರುತ್ತದೆಯೇ?

## ಬೆಳವಣಿಗೆ ಹೊಂದಿರುವ ಗ್ರಾಮ ಪಂಚಾಯತ್‌ಗಳನ್ನು ಉನ್ನತೀಕರಿಸುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೩೯೩ (೩೯೮೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಈಗಾಗಲೇ ಬೆಳವಣಿಗೆ ಹೊಂದಿರುವ, ನಗರ ಪ್ರದೇಶಕ್ಕೆ ಹೊಂದಿಕೊಂಡಿರುವ ಗ್ರಾಮ ಪಂಚಾಯತ್‌ಗಳನ್ನು ಪೌರಾಡಳಿತ ಸಂಸ್ಥೆಗಳಾಗಿ ಉನ್ನತೀಕರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಯಾವ ಯಾವ ಗ್ರಾಮ ಪಂಚಾಯತ್/ ಸ್ಥಳೀಯ ಸಂಸ್ಥೆಗಳನ್ನು ಉನ್ನತೀಕರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆ;

ಇ) ನಗರೀಕರಣಗೊಂಡಿರುವ ಮತ್ತು ನಗರ ಪ್ರದೇಶಕ್ಕೆ ಹೊಂದಿಕೊಂಡು ಬೆಳವಣಿಗೆ ಹೊಂದಿರುವ ಪ್ರದೇಶಗಳು ನಗರ ಸ್ಥಳೀಯ ಸಂಸ್ಥೆಗಳಾಗಿ ಪರಿವರ್ತನೆಯಾಗದೇ ಬಾಕಿ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ;

ಈ) ಗ್ರಾಮ ಪಂಚಾಯತ್‌ಗಳು ಸೇರಿದಂತೆ, ಇತರೆ ಪ್ರದೇಶಗಳನ್ನು ಪಟ್ಟಣ ಪಂಚಾಯತ್/ಪುರ ಸಭೆ/ನಗರ ಸಭೆಗಳಾಗಿ ಉನ್ನತೀಕರಿಸಲು ಇರುವ ಮಾನದಂಡಗಳೇನು?

## ಅಕ್ರಮ ಗೋ ಸಾಗಾಟ ಮತ್ತು ಗೋವು ಕಳವು ಪ್ರಕರಣ ಹೆಚ್ಚುತ್ತಿರುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೩೯೪ (೩೯೮೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದಲ್ಲಿ ಪೊಲೀಸರ ಮೇಲೂ ಅಕ್ರಮ ಗೋ ಸಾಗಾಟಗಾರರಿಂದ ಪದೇ ಪದೇ ಹಲ್ಲೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಕಳೆದ ೫ ವರ್ಷಗಳಲ್ಲಿ ನಡೆದ ಅಕ್ರಮ ಗೋ ಸಾಗಾಣಿಕೆ ಹಾಗೂ ಗೋವುಗಳ ಕಳವು ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ವರ್ಷಾವಾರು ವಿವರ ನೀಡುವುದು)

ಇ) ಅಕ್ರಮ ಗೋ ಸಾಗಾಣಿಕೆ ಮತ್ತು ಗೋವುಗಳ ಕಳವು ಪ್ರಕರಣಗಳು ಬೆಳಕಿಗೆ ಬಂದರೂ ಎಫ್.ಐ.ಆರ್. ದಾಖಲಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

ಈ) ಅಕ್ರಮ  ಕಸಾಯಿಖಾನೆ, ಗೋವುಗಳ ಕಳವು ಹಾಗೂ ಅಕ್ರಮ ಗೋ ಸಾಗಾಣಿಕೆ ತಡೆಗಟ್ಟಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

ಉ) ಅಕ್ರಮ ಗೋ ಸಾಗಾಟ ತಡೆಗಟ್ಟುವ ವೇಳೆ ದುಷ್ಕರ್ಮಿಗಳಿಂದ ಪೋಲೀಸರು ಹಾಗೂ ಮಾಹಿತಿದಾರರಿಗೆ ರಕ್ಷಣೆ ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

## ಆಡರ್ಲಿ ಪದ್ಧತಿ ಸಂಪೂರ್ಣವಾಗಿ ನಿಲ್ಲಿಸುವುದು ಮತ್ತು ಪೊಲೀಸರ ವಿವಿಧ ಬೇಡಿಕೆ ಈಡೇರಿಸುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೩೯೫ (೩೯೮೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಕಳೆದ ವರ್ಷದಲ್ಲಿ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಪೊಲೀಸರು ಪ್ರತಿಭಟನೆ ನಡೆಸಿದ್ದು ಸದರಿ ಪ್ರತಿಭಟನೆಯ ಪ್ರಮುಖ ಬೇಡಿಕೆಗಳಾವುವು;

ಆ) ಪೊಲೀಸರ ವಿವಿಧ ಬೇಡಿಕೆಗಳ ಪರಿಶೀಲನೆಗಾಗಿ ಸರ್ಕಾರ ಸಮಿತಿಯನ್ನು ರಚಿಸಿದೆಯೇ; ಸದರಿ ಸಮಿತಿಯು ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದೆಯೇ; ಸಲ್ಲಿಸಿದ್ದಲ್ಲಿ, ಸಮಿತಿಯ ಶಿಫಾರಸ್ಸುಗಳೇನು: (ವಿವರ ನೀಡುವುದು)

ಇ) ಆ ಬೇಡಿಕೆಗಳ ಪೈಕಿ ಎಷ್ಟು ಬೇಡಿಕೆಗಳನ್ನು ಈಡೇರಿಸಲಾಗಿದೆ; ಉಳಿದ ಬೇಡಿಕೆಗಳನ್ನು ಈಡೇರಿಸಲಾಗುವುದು ಯಾವಾಗ;

ಈ) ಆಡರ್ಲಿ ಪದ್ಧತಿಯನ್ನು ಸಂಪೂರ್ಣವಾಗಿ ನಿಲ್ಲಿಸಿ ಬಾಹ್ಯ ಮೂಲಗಳಿಂದ ಮಾನವ ಸಂಪನ್ಮೂಲ ಪಡೆದು ಕೆಲಸ ನಿರ್ವಹಿಸುವ ಬಗ್ಗೆ ಸರ್ಕಾರದ ನಿಲುವೇನು; ಈ ಬಗ್ಗೆ ಸರ್ಕಾರ  ಯಾವ ಕ್ರಮ ಕೈಗೊಳ್ಳಲಿದೆ;

ಉ) ಗೃಹ ಇಲಾಖೆಯನ್ನು ಆಧುನೀಕರಣಗೊಳಿಸಿ ಸಾರ್ವಜನಿಕ ಸ್ನೇಹಿಯಾಗಿ ಬದಲಾವಣೆ ತರಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? (ಸಂಪೂರ್ಣ ವಿವರ ನೀಡುವುದು)

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಬೃಹತ್ ಬೆಂಗಳೂರು ನಗರ ಪಾಲಿಕೆ ವ್ಯಾಪ್ತಿಯಲ್ಲಿ ವಸತಿ ನಿವೇಶನ ಒದಗಿಸುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೩೯ (೩೮೮) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಕಳೆದ ೩ ವರ್ಷಗಳಲ್ಲಿ ಸಾರ್ವಜನಿಕರಿಗೆ ವಿತರಿಸಿರುವ ನಿವೇಶನಗಳೆಷ್ಟು;

ಆ) ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು; ಹಾಗೂ ವಿತರಿಸಿರುವ ನಿವೇಶನಗಳ ಸಂಖ್ಯೆ ಎಷ್ಟು;

ಇ) ನಿವೇಶನಕ್ಕಾಗಿ ಇರುವ ಬೇಡಿಕೆ ಹಾಗೂ ಲಭ್ಯವಿರುವ ಮತ್ತು ವಿತರಿಸಿರುವ ನಿವೇಶನಗಳ ಸಂಖ್ಯೆಗಳಲ್ಲಿ ವಿಪರೀತ ವ್ಯತ್ಯಾಸವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಪ್ರಸಕ್ತ ಸಾಲಿನಲ್ಲಿ ನಿವೇಶನ ವಿತರಣೆಗಾಗಿ ಅರ್ಜಿಯನ್ನು ಯಾವಾಗ ಸ್ವೀಕರಿಸಲಾಗುವುದು; (ವಿವರ ನೀಡುವುದು)

ಉ) ಸಾರ್ವಜನಿಕರ ಬೇಡಿಕೆಗೆ ತಕ್ಕಂತೆ ನಿವೇಶನಗಳನ್ನು ಒದಗಿಸಲು ಆರ್ಥಿಕ ದುರ್ಬಲ ವರ್ಗದವರಿಗೆ ರಿಯಾಯಿತಿ ದರದಲ್ಲಿ ನಿವೇಶನ ಒದಗಿಸಲು ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ? (ವಿವರ ನೀಡುವುದು)

## ಪಾಲಿಕೆಗೆ ಮಂಜೂರಾದ ಹುದ್ದೆಗಳು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೩೯೭ (೩೯೮೭) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದಲ್ಲಿರುವ ಒಟ್ಟು ಮಹಾನಗರ ಪಾಲಿಕೆಗಳ ಸಂಖ್ಯೆ ಎಷ್ಟು; ಅವು ಯಾವುವು;

ಆ) ಮಹಾನಗರ ಪಾಲಿಕೆಯಲ್ಲಿನ ಒಟ್ಟು ಜನ ಪ್ರತಿನಿಧಿಗಳೆಷ್ಟು; ಅವರಿಗೆ ನೀಡುತ್ತಿರುವ ಗೌರವ ಧನ/ ಇತರೆ ಸೌಲಭ್ಯಗಳೆಷ್ಟು;

ಇ) ಮಹಾನಗರ ಪಾಲಿಕೆಯಲ್ಲಿನ ಒಟ್ಟು ಮಂಜೂರಾದ ಮತ್ತು ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು;

ಈ) ಖಾಲಿ ಹುದ್ದೆ ಭರ್ತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ಹಜ್ಜ್ ಯಾತ್ರೆ ವಿವರ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೩೯೮ (೩೮೯೨) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ೨೦೧೭–೧೮ರಲ್ಲಿ ರಾಜ್ಯದಿಂದ ಹಜ್ಜ್ ಯಾತ್ರೆಯನ್ನು ಕೈಗೊಳ್ಳಲು ಬಂದ ಅರ್ಜಿಗಳ ಸಂಖ್ಯೆ ಎಷ್ಟು; ( ಜಿಲ್ಲಾವಾರು ಮಾಹಿತಿ ನೀಡುವುದು)

ಆ) ಬಂದಿದ್ದ ಅರ್ಜಿಗಳಲ್ಲಿ ಎಷ್ಟು ಜನ ಯಾತ್ರಾರ್ಥಿಗಳಿಗೆ ಅವಕಾಶ ಮಾಡಿಕೊಡಲಾಗಿದೆ; (ಈ ಬಗ್ಗೆ ಜಿಲ್ಲಾವಾರು ಮಾಹಿತಿ ನೀಡುವುದು)

ಇ) ಬಾಕಿ ಉಳಿದ ಯಾತ್ರಾರ್ಥಿಗಳಿಗೆ ಸದರಿ ಯಾತ್ರೆಯನ್ನು ಕೈಗೊಳ್ಳಲು ಅವಕಾಶ ನೀಡಲಾಗುವುದು ಯಾವಾಗ; (ವಿವರ ನೀಡುವುದು)

ಈ) ಈ ಯಾತ್ರೆಗಾಗಿ ರಾಜ್ಯ ಸರ್ಕಾರ ಖರ್ಚು ಮಾಡುತ್ತಿರುವ ಹಣವೆಷ್ಟು; (ವಿವರ ನೀಡುವುದು)

ಉ) ಹಾಗೇಯೇ ತುಮಕೂರು ಜಿಲ್ಲೆಯಿಂದ ೨೦೧೭–೧೮ನೇ ಸಾಲಿನಲ್ಲಿ ಹಜ್ ಯಾತ್ರೆಗೆ ಬಂದ ಅರ್ಜಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

ಊ) ಬಂದ ಅರ್ಜಿಗಳಲ್ಲಿ ಈ ಜಿಲ್ಲೆಯ ಎಷ್ಟು ಜನ ಹಜ್ಜ್ ಯಾತ್ರಾರ್ಥಿಗಳನ್ನು ಹಜ್ಜ್ ಯಾತ್ರೆಗೆ ಕಳುಹಿಸಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

ಋ) ಇನ್ನುಳಿದ ಯಾತ್ರಾರ್ಥಿಗಳನ್ನು ಹಜ್ಜ್ ಯಾತ್ರೆಗೆ ಯಾವಾಗ ಕಳುಹಿಸಿಕೊಡಲಾಗುವುದು? (ಮಾಹಿತಿ ನೀಡುವುದು)

## ತುಮಕೂರು ಸ್ಮಾರ್ಟ್ ಸಿಟಿ ಕಾಮಗಾರಿಗಳ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೯ (೩೮೩೪) ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ನಗರವನ್ನು ಸ್ಮಾರ್ಟ್ ಸಿಟಿಯನ್ನಾಗಿ ಘೋಷಣೆ ಮಾಡಿದ್ದು ಯಾವಾಗ;

(ಆ) ಘೋಷಣೆ ಮಾಡಿದ ನಂತರದಿಂದ ಈವರೆವಿಗಿನ ಸ್ಮಾರ್ಟ್ ಸಿಟಿಯ ಕಾರ್ಯ ಚಟುವಟಿಕೆಗಳೇನು; ಹಾಗೂ ಈ ಸ್ಮಾರ್ಟ್ ಸಿಟಿಯ ಕಛೇರಿಯಲ್ಲಿರುವ ಅಧಿಕಾರಿ ಸಿಬ್ಬಂದಿ ವರ್ಗದವರ ವಿವರ ನೀಡುವುದು;

(ಇ) ಸ್ಮಾರ್ಟ್ ಸಿಟಿಯ ಯೋಜನೆ ಕಾರ್ಯಾರಂಭ ಮಾಡಿದ ನಂತರ ಇಲ್ಲಿಯತನಕ ಯಾವ ಯಾವ ಕಾಮಗಾರಿಗಳನ್ನು ಪ್ರಾರಂಭ ಮಾಡಲಾಗಿದೆ;

(ಈ) ಈ ಕಾಮಗಾರಿಗಳಿಗೆ ಮತ್ತು ಇತರೆ ಯೋಜನೆಗಳಿಗೆ ಅನುಮೋದನೆ ನೀಡಲು ಸಮಿತಿಯನ್ನು ರಚನೆ ಮಾಡಲಾಗಿದೆಯೇ; ಹಾಗಿದ್ದಲ್ಲಿ, ಈ ಸಮಿತಿ ಸದಸ್ಯರ ಬಗ್ಗೆ ವಿವರ ನೀಡುವುದು;

(ಉ) ಈವರೆವಿಗೆ ಸರ್ಕಾರದಿಂದ ಬಂದ ಅನುದಾನವೆಷ್ಟು; ಸದರಿ ಅನುದಾನದ ಪೈಕಿ ಯಾವ ಯಾವ ಕಾಮಗಾರಿಗಳಿಗೆ ಎಷ್ಟೆಷ್ಟು ಹಣವನ್ನು ಒದಗಿಸಲಾಗಿದೆ; (ವಿವರ ನೀಡುವುದು)

(ಊ) ಈ ಸ್ಮಾರ್ಟ್ ಸಿಟಿ ಯೋಜನೆಯ ಕಾಮಗಾರಿಗಳನ್ನು ಕೈಗೊಳ್ಳಲು ಮತ್ತು ಇವುಗಳಿಗೆ ಅನುಮೋದನೆ ನೀಡಲು ಸರ್ಕಾರದಿಂದ ಹೊರಡಿಸಿರುವ ಸುತ್ತೋಲೆ/ಆದೇಶಗಳ ಪ್ರತಿಯನ್ನು ನೀಡುವುದು?

## ರಾಜ್ಯದಲ್ಲಿರುವ ಅಬಕಾರಿ ವೈನ್‌ಶಾಪ್‌ಗಳ ಸಂಖ್ಯೆ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೦೦ (೩೮೨೮) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದಲ್ಲಿರುವ ಎಲ್ಲಾ ಬಗೆಯ ವೈನ್‌ಶಾಪ್ ಮತ್ತು ಬಾರ್‌ಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು ಸಿ.ಎಲ್–೯, ಸಿ.ಎಲ್–೨, ಸಿಎಲ್–೭ ಇತ್ಯಾದಿ ಸೇರಿ)

ಆ) ಇವುಗಳಿಗೆ ವಾರ್ಷಿಕವಾಗಿ ಸರ್ಕಾರವು ವಿಧಿಸಿರುವ ಪರವಾನಗಿ ಶುಲ್ಕವೆಷ್ಟು;

ಇ) ಪರವಾನಿಗೆಗಾಗಿ ನಿಗಧಿಪಡಿಸಿರುವ ಶುಲ್ಕ, ಗ್ರಾಮೀಣ ಪ್ರದೇಶಕ್ಕೆ, ನಗರ ಪ್ರದೇಶಕ್ಕೆ, ಜಿಲ್ಲಾ ಕೇಂದ್ರಗಳಿಗೆ ಮತ್ತು ತಾಲ್ಲೂಕು ಕೇಂದ್ರಗಳಿಗೆ ಪ್ರತ್ಯೇಕವಾಗಿದೆಯೇ; (ವಿವರವಾದ ಮಾಹಿತಿ ನೀಡುವುದು)

ಈ) ಈ ಪರವಾನಗಿಯ ಶುಲ್ಕದಿಂದ ರಾಜ್ಯ ಸರ್ಕಾರಕ್ಕೆ ಬರುತ್ತಿರುವ ವಾರ್ಷಿಕ ಆದಾಯವೆಷ್ಟು; (ವಿವರ ನೀಡುವುದು)

ಉ) ೨೦೧೭–೧೮ರಲ್ಲಿ ರಾಜ್ಯ ಅಬಕಾರಿ ಇಲಾಖೆಗೆ ನಿಗದಿಪಡಿಸಿರುವ ಒಟ್ಟು ಮೊತ್ತವೆಷ್ಟು; ಹಾಗಿದ್ದಲ್ಲಿ, ಅಕ್ಟೋಬರ್ ೨೦೧೭ರ ಅಂತ್ಯಕ್ಕೆ ಸಂಗ್ರಹಣೆಯಾಗಿರುವ ಮೊತ್ತವೆಷ್ಟು; (ಮಾಹಿತಿ ನೀಡುವುದು)

ಊ) ಅಬಕಾರಿ ಇಲಾಖೆಗೆ ಇಲ್ಲಿಯತನಕ ಡಿಸ್ಟಲರಿಸ್‌ಗಳಿಂದ ಮತ್ತು ಇತರೆ ಕಡೆಯಿಂದ ಬರಬೇಕಾಗಿರುವ ಬಾಕಿ ಮೊತ್ತವೆಷ್ಟು; ಈ ಮೊತ್ತವನ್ನು ಎಷ್ಟು ವರ್ಷಗಳಿಂದ ವಸೂಲು ಮಾಡದೆ ಇರಲು ಕಾರಣವೇನು; (ವಿವರ ನೀಡುವುದು)

ಎ) ಹಾಲಿ ಎಂ.ಎಸ್.ಐ.ಎಲ್ ಮೂಲಕ ನಡೆಯುತ್ತಿರುವ ವೈನ್‌ಶಾಪ್‌ಗಳ ಸಂಖ್ಯೆ ಎಷ್ಟು; ಈ ಸಂಸ್ಥೆ ವತಿಯಿಂದ ಸರ್ಕಾರ ಹೊಸದಾಗಿ ಎಷ್ಟು ವೈನ್‌ಶಾಪ್‌ಗಳ ಪರವಾನಗಿ ನೀಡುತ್ತಿದೆ? (ವಿವರ ನೀಡುವುದು)

## ತುಮಕೂರು ಜಿಲ್ಲೆಯಲ್ಲಿ ಅಪರಾಧ ಪ್ರಕರಗಣಗಳಲ್ಲಿ ವಾಹನಗಳನ್ನು ವಶಪಡಿಸಿಕೊಂಡಿರುವ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೦೧ (೩೮೩೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ತುಮಕೂರು ನಗರ ಮತ್ತು ತುಮಕೂರು ಜಿಲ್ಲೆಯಲ್ಲಿ ಅಪರಾಧ ಪ್ರಕರಣಗಳಲ್ಲಿ ವಶಪಡಿಸಿಕೊಂಡಿರುವ ವಾಹನಗಳ ಸಂಖ್ಯೆ ಎಷ್ಟು; (ಜಿಲ್ಲೆಯಲ್ಲಿನ ಆರಕ್ಷಕ ಠಾಣೆವಾರು ಮಾಹಿತಿ ನೀಡುವುದು)

(ಆ) ಅಪರಾಧ ಪ್ರಕರಣಗಳಲ್ಲಿ ವಶಪಡಿಸಿಕೊಂಡಿರುವ ವಾಹನಗಳ ಸಂಖ್ಯೆ ಎಷ್ಟು; (ವರ್ಷವಾರು, ಪ್ರಕರಣವಾರು ಮಾಹಿತಿ ನೀಡುವುದು)

(ಇ) ಕೊಲೆ ಸೇರಿದಂತೆ ಗಂಭೀರ ಅಪರಾಧ ಪ್ರಕರಣಗಳಲ್ಲಿ ವಾಹನವೂ ಸಾಕ್ಷ್ಯಾಧಾರವಾಗಿದ್ದ ವಾಹನಗಳನ್ನು ಬಿಟ್ಟು ಇತರೆ ಪ್ರಕರಣದ ವಾಹನಗಳನ್ನು ನ್ಯಾಯಾಲಯದ ಆದೇಶ ಪಡೆದು ಹರಾಜು ಹಾಕಲು ಅಥವಾ ವಿಲೇವಾರಿ ಮಾಡಲು ಸರ್ಕಾರಕ್ಕಿರುವ ತೊಂದರೆ ಏನು; (ವಿವರ ನೀಡುವುದು)

(ಈ) ಪೊಲೀಸ್ ಠಾಣೆಗಳಲ್ಲಿ ಹತ್ತಾರು ವರ್ಷಗಳಿಂದ ತುಕ್ಕು ಹಿಡಿಯುತ್ತಿರುವ ವಾಹನಗಳ ಹರಾಜು ಪ್ರಕ್ರಿಯೆಯನ್ನು ಕೂಡಲೇ ಪ್ರಾರಂಭಿಸಿ ಬೆಂಗಳೂರು ನಗರ ಪೊಲೀಸ್ ಠಾಣೆಗಳ ಮಾದರಿಯಲ್ಲಿ ಸ್ವಚ್ಛ ಪೊಲೀಸ್ ಠಾಣೆ ಅಭಿಯಾನ ಕೈಗೊಳ್ಳುವ ಬಗ್ಗೆ ರಾಜ್ಯದ ಎಲ್ಲಾ ಪೊಲೀಸ್ ಠಾಣೆಗಳಿಗೆ ಸರ್ಕಾರ ತಕ್ಷಣವೇ ಆದೇಶ ನೀಡಲು ಕ್ರಮ ವಹಿಸುವುದೇ;

(ಉ) ಈ ರೀತಿ ತುಕ್ಕು ಹಿಡಿದ ವಾಹನಗಳು ಠಾಣೆಯ ಸುತ್ತ–ಮುತ್ತ ಮತ್ತು ಠಾಣೆಯ ಮುಂದಿನ ರಸ್ತೆಗಳಲ್ಲಿ ಕೊಳೆಯುತ್ತಿರುವುದು ಮತ್ತು ಇದರಿಂದ ಪರಿಸರ ಮಾಲಿನ್ಯದ ಜೊತೆಗೆ ಸ್ವಚ್ಛತೆಗೆ ನೈರ್ಮಲ್ಯತೆಗೆ ಧಕ್ಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ಬಂದಿದ್ದಲ್ಲಿ, ಸರ್ಕಾರ ಅಂತಹ ವಾಹನಗಳ ವಿಲೇವಾರಿಗೆ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ರಾಜ್ಯ ಸರ್ಕಾರಿ ಅಧಿಕಾರಿ/ನೌಕರರ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೦೨ (೩೮೩೮) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದಿಂದ ಮಂಜೂರಾಗಿರುವ ಸರ್ಕಾರಿ ಅಧಿಕಾರಿ/ನೌಕರರ ಸಂಖ್ಯೆ ಎಷ್ಟು; ಹಾಲಿ ಕೆಲಸ ಮಾಡುತ್ತಿರುವ ಅಧಿಕಾರಿ ನೌಕರರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ೨೦೧೭–೧೮ರ ಅಂತ್ಯಕ್ಕೆ ವಿವಿಧ ಇಲಾಖೆಗಳಲ್ಲಿ ರಾಜ್ಯ ಸರ್ಕಾರದಲ್ಲಿ ಖಾಲಿ ಇರುವ ಸರ್ಕಾರಿ ಅಧಿಕಾರಿ/ನೌಕರರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ಕ್ರಮ ವಹಿಸುವುದೇ;

(ಈ) ಖಾಲಿ ಇರುವ ಹುದ್ದೆಗಳಿಂದ ವಾರ್ಷಿಕವಾಗಿ ಸರ್ಕಾರಕ್ಕೆ ಕಳೆದ ೪ ವರ್ಷಗಳಿಂದ ಉಳಿತಾಯವಾಗಿರುವ ಹಣ ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಶ್ರೀ ಹಾರ್ನಳ್ಳಿ ರಾಮಸ್ವಾಮಿ ಆಡಳಿತ ಸುಧಾರಣಾ ಆಯೋಗದ ವರದಿಯಂತೆ ಅನಾವಶ್ಯಕವಾಗಿರುವ ಯಾವ ಯಾವ ವೃಂದದ ಎಷ್ಟು ಹುದ್ದೆಗಳನ್ನು ರದ್ದು ಮಾಡಲಾಗಿದೆ; (ವಿವರ ನೀಡುವುದು)

(ಊ) ಆಯೋಗದ ವರದಿಯಂತೆ ಪ್ರಾದೇಶಿಕ ಆಯುಕ್ತರ ಕಛೇರಿ ಎಂದು ವಿಭಾಗ ಮಟ್ಟದಲ್ಲಿ ತಂದಿರುವುದು ಸರಿಯೇ; (ವಿವರ ನೀಡುವುದು)

(ಋ) ನಿರುಪಯುಕ್ತ ಉಪ ವಿಭಾಗಾಧಿಕಾರಿಗಳ ಕಛೇರಿಯನ್ನು ರದ್ದುಪಡಿಸಲು ಸರ್ಕಾರ ಯಾವ ಕ್ರಮ ವಹಿಸಿದೆ?

## ಬೆಳಗಾವಿ ಮಹಾನಗರ ಸ್ಮಾರ್ಟ್ ಸಿಟಿಯಾಗಿದ್ದರೂ ಯೋಜನೆಯ ಅನುಷ್ಠಾನವು ವಿಳಂಭವಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೦೩ (೩೯೩೮) ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಸ್ಮಾರ್ಟ್ ಸಿಟಿ ಯೋಜನೆಯಡಿ ಬೆಳಗಾವಿ ಮಹಾನಗರ ಆಯ್ಕೆಯಾಗಿದ್ದರೂ, ಸ್ಮಾರ್ಟ್ ಸಿಟಿ ಯೋಜನೆಯ ಅನುಷ್ಠಾನವು ವಿಳಂಬವಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸ್ಮಾರ್ಟ್ ಸಿಟಿ ಯೋಜನೆಯಡಿ ಬೆಳಗಾವಿ ಮಹಾನಗರವನ್ನು ಅಭಿವೃದ್ಧಿಪಡಿಸುವ ಕುರಿತು ನೀಲಿ ನಕ್ಷೆ ಸಿದ್ದಪಡಿಸಲಾಗಿದೆಯೇ;

ಇ) ಸ್ಮಾರ್ಟ್ ಸಿಟಿ ಯೋಜನೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಯಾವ ಅನುಪಾತದಲ್ಲಿ ಎಷ್ಟೆಷ್ಟು ಅನುದಾನ ನಿಗಧಿಪಡಿಸಿವೆ; ಈಗಾಗಲೇ ಬಿಡುಗಡೆಯಾಗಿರುವ ಅನುದಾನವೆಷ್ಟು; (ವಿವರ ನೀಡುವುದು)

ಈ) ಅದರಲ್ಲಿ ಖರ್ಚು ಮಾಡಲಾಗಿರುವ ಅನುದಾನವೆಷ್ಟು; ಈ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; (ವಿವರ ನೀಡುವುದು)

ಉ) ಬಾಕಿ ಕಾಮಗಾರಿಗಳನ್ನು ಯಾವ ಕಾಲಮಿತಿಯಲ್ಲಿ ಆರಂಭಿಸಿ ಪೂರ್ಣಗೊಳಿಸುವಿರಿ; (ವಿವರ ನೀಡುವುದು)

ಊ) ಸದರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಬಂಧ ವಿಶೇಷಾಧಿಕಾರಿಗಳನ್ನು ನೇಮಿಸಲಾಗಿದೆಯೇ?

## ರಾಜ್ಯದಲ್ಲಿ ಮಹಿಳೆಯರು ಮತ್ತು ಮಕ್ಕಳು ಮುಕ್ತವಾಗಿ ಕಳ್ಳ ಸಾಗಾಣಿಕೆಯಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೦೪ (೩೯೩೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಕರ್ನಾಟಕದಲ್ಲಿ ಮಹಿಳೆಯರು ಮತ್ತು ಮಕ್ಕಳು ಮುಕ್ತವಾಗಿ ಕಳ್ಳಸಾಗಾಣಿಕೆಯಾಗುತ್ತಿರುವ ಮತ್ತು ಮಾರಾಟವಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸದರಿ ವ್ಯವಸ್ಥಿತ ಮಾನವ ಕಳ್ಳಸಾಗಾಣಿಕೆ ದಂಧೆಯನ್ನು ನಿಯಂತ್ರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

ಇ) ಕಳೆದ ಮೂರು ವರ್ಷಗಳಲ್ಲಿ ಇಂತಹ ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ; ಎಷ್ಟು ಮಂದಿ ಅಮಾಯಕರನ್ನು ರಕ್ಷಿಸಲಾಗಿದೆ;

ಈ) ಮಾನವ ಕಳ್ಳಸಾಗಾಣಿಕೆ ಜಾಲದ ಎಷ್ಟು ಮಂದಿ ಕಿಂಗ್‌ಪಿನ್‌ಗಳನ್ನು ಬಂಧಿಸಲಾಗಿದೆ? (ವಿವರ ನೀಡುವುದು)

## ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ವಿವಿಧ ಯೋಜನೆಗಳಡಿ ನೀಡಿರುವ ಅನುದಾನದ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೦೫ (೩೯೩೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ವಿವಿಧ ಯೋಜನೆಗಳಡಿ ಅನುದಾನ/ಸಹಾಯಧನ ನೀಡಲಾಗುತ್ತಿದೆಯೇ;

ಆ) ಹಾಗಿದ್ದಲ್ಲಿ, ೨೦೧೫–೧೬, ೨೦೧೬–೧೭ ಮತ್ತು ೨೦೧೭–೧೮ನೇ ಸಾಲಿಗೆ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಯಾವ ಯಾವ ಯೋಜನೆಗಳಿಗೆ ಎಷ್ಟೆಷ್ಟು ಅನುದಾನ ನೀಡಲಾಗಿದೆ; (ವಿವರ ನೀಡುವುದು)

ಇ) ಹಾಗೆ ನೀಡಿದ ಅನುದಾನ ಸಮರ್ಪಕವಾಗಿ ಬಳಸಲಾಗಿದೆಯೇ; ವಿವಿಧ ಯೋಜನೆಗಳಡಿ ಬಳಸದೇ ಉಳಿದ ಅನುದಾನವೆಷ್ಟು?( ಕಳೆದ ಮೂರು ವರ್ಷಗಳ ಮಾಹಿತಿ ನೀಡುವುದು)

# ಬೆಂಗಳೂರು ಮಹಾನಗರದಲ್ಲಿ ರಾಜಕಾಲುವೆಗಳಲ್ಲಿ ಒತ್ತುವರಿ ಮಾಡಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) – ಮತ್ತು**

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)**

೩೪೦೬ (೩೯೩೭+೩೮೫೬) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಇರುವ ರಾಜಕಾಲುವೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಬೆಂಗಳೂರು ಮಹಾನಗರದಲ್ಲಿ ರಾಜಕಾಲುವೆಯ ಒತ್ತುವರಿ ಪರಿಣಾಮದಿಂದಾಗಿ ಮಳೆಯ ನೀರು ಮನೆಗಳಿಗೆ ನುಗ್ಗಿ ಅವಾಂತರ ಸೃಷ್ಠಿಸಿರುವುದರ ಜೊತೆಗೆ ಅಪಾರ ಸಾವು ನೋವು ತಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ರಾಜ ಕಾಲುವೆಯ ಅಕ್ರಮ ಒತ್ತುವರಿ ತೆರವುಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ರಾಜಕಾಲುವೆ ಅಕ್ರಮ ಒತ್ತುವರಿದಾರರ ವಿರುದ್ಧ ಸರ್ಕಾರವು ಯಾವ ಕಾನೂನು ಕ್ರಮಗಳನ್ನು ಕೈಗೊಂಡಿದೆ;

(ಉ) ಈವರೆಗೆ ಎಷ್ಟು ವಿಸ್ತೀರ್ಣದ ರಾಜಕಾಲುವೆಯನ್ನು ಒತ್ತುವರಿಯಿಂದ ತೆರವುಗೊಳಿಸಲಾಗಿದೆ; ಇನ್ನೂ ಎಷ್ಟು ವಿಸ್ತೀರ್ಣದ ರಾಜಕಾಲುವೆಯು ಒತ್ತುವರಿಯಾಗಿದೆ ಎಂದು ಅಂದಾಜಿಸಲಾಗಿದೆ; ಇದನ್ನು ಯಾವ ಕಾಲಮಿತಿಯಲ್ಲಿ ತೆರವುಗೊಳಿಸಲಾಗುವುದು; ಇದಕ್ಕೆ ತೆಗೆದುಕೊಂಡ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು)

(ಊ) ಕಳೆದ ೩ ವರ್ಷಗಳಲ್ಲಿ ರಾಜಕಾಲುವೆಗಳ ಹೂಳು ತೆಗೆಯಲು ಬಿಡುಗಡೆಯಾಗಿರುವ ಅನುದಾನವೆಷ್ಟು; ಈ ೩ ವರ್ಷಗಳಲ್ಲಿ ರಾಜಕಾಲುವೆಗಳಲ್ಲಿ ಮೃತಪಟ್ಟವರ ಸಂಖ್ಯೆ ಎಷ್ಟು? (ಸ್ಪಷ್ಟ ಮಾಹಿತಿ ನೀಡುವುದು)

## ಅಲ್ಪಸಂಖ್ಯಾತರಿಗೆ ವಿವಿಧ ಯೋಜನೆಗಳಲ್ಲಿ ನೀಡಿರುವ ಸೌಲಭ್ಯಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೩೪೦೭ (೪೦೨೦) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಅತೀ ಹೆಚ್ಚು ಅಲ್ಪಸಂಖ್ಯಾತರು ಬೇರೆ ಬೇರೆ ವೃತ್ತಿಯಲ್ಲಿ ನಿರತರಾಗಿರುವುದು ಸರ್ಕಾರ ಗಮನಿಸಿದೆಯೇ;

(ಆ) ಕಳೆದ ೫ ವರ್ಷಗಳಲ್ಲಿ ಈ ಕ್ಷೇತ್ರದ ಅಲ್ಪಸಂಖ್ಯಾತರಿಗೆ ಹಮ್ಮಿಕೊಂಡಿರುವ ವಿವಿಧ ಯೋಜನೆಗಳಾವುವು; (ವಿವರ ನೀಡುವುದು)

(ಇ) ಈ ಕ್ಷೇತ್ರದಲ್ಲಿ ಇರುವ ಶಾದಿಮಹಲ್‌ಗಳು, ಸಮುದಾಯ ಭವನಗಳು ಎಷ್ಟು; ಎಷ್ಟು ಹಣ ನೀಡಲಾಗಿದೆ;

(ಈ) ಕ್ಷೇತ್ರದಲ್ಲಿರುವ ಒಟ್ಟು ಮಸೀದಿಗಳ ಸಂಖ್ಯೆ ಎಷ್ಟು; ಮಸೀದಿಗಳ ಅಭಿವೃದ್ಧಿಗೆ ನೀಡಿರುವ ಸಹಾಯಧನ ಎಷ್ಟು? (ವಿವರ ನೀಡುವುದು)

## ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿರುವ ಠಾಣೆಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೩೪೦೮ (೪೦೧೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಬರುವ ಠಾಣೆಗಳು ಎಷ್ಟು; ಅವು ಯಾವುವು; (ಹುದ್ದೆಗಳ ಸಮೇತ ವಿವರ ನೀಡುವುದು)

(ಆ) ಕ್ಷೇತ್ರದಲ್ಲಿ ಬರುವ ಠಾಣೆಗಳಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು; ತುಂಬದಿರಲು ಕಾರಣವೇನು; ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು;

(ಇ) ಪ್ರಸಕ್ತ ಸಾಲಿನಲ್ಲಿ ಕೆಲವು ಕಡೆ ಹೊಸ ಠಾಣೆ ತೆರೆಯಲು ಸರ್ಕಾರ ಯೋಚಿಸಿರುವುದೆ;

(ಈ) ರಾತ್ರಿ ಗಸ್ತು ಕಾಯಲು ವಿಶೇಷ ಪಡೆ ಮಾಡಲಾಗಿದೆಯೇ; ಎಲ್ಲೆಲ್ಲಿ ಮಾಡಲಾಗಿದೆ? (ವಿವರ ನೀಡುವುದು)

## ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಪಾಲಿಕೆಗೆ ಬಿಡುಗಡೆ ಮಾಡಿರುವ ಅನುದಾನದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೩೪೬೯ (೪೦೧೮) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ನಗರ ವ್ಯಾಪ್ತಿಗೆ ಬರುವ ವಾರ್ಡ್‌ಗಳ ಸಂಖ್ಯೆ ಎಷ್ಟು; ಅವು ಯಾವುವು; (ವಿವರ ನೀಡುವುದು)

(ಆ) ಕೆಲವು ವಾರ್ಡ್‌ಗಳಲ್ಲಿ ರಸ್ತೆ ಹಾಳಾಗಿರುವುದನ್ನು ಪಾಲಿಕೆ ಗಮನಿಸಿದೆಯೇ;

(ಇ) ಪ್ರಸಕ್ತ ಸಾಲಿನಲ್ಲಿ ಅನುದಾನ ಬಿಡುಗಡೆ ಮಾಡಿ ಕಾಮಗಾರಿ ಮಾಡಲಾಗುವುದೆ;

(ಈ) ಒಳ ಚರಂಡಿ ಯೋಜನೆ ಸಮರ್ಪಕವಾಗಿ ಕೆಲಸ ನಿರ್ವಹಿಸುತ್ತಿದೆಯೇ; ಸಾರ್ವಜನಿಕ ಶೌಚಾಲಯಗಳನ್ನು ಎಲ್ಲೆಲ್ಲಿ ನಿರ್ಮಿಸಲಾಗಿದೆ; ಹೊಸದಾಗಿ ಜಾಗ ಗುರುತಿಸಲಾಗಿದೆಯೇ?

## ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ನಗರಾಭಿವೃದ್ಧಿ ಇಲಾಖೆಯಿಂದ ಕಳೆದ ೫ ವರ್ಷಗಳಿಂದ ತೆಗೆದುಕೊಂಡ ಕಾರ್ಯಕ್ರಮಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೩೪೧೦ (೪೦೨೧) ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಅಭಿವೃದ್ಧಿಗೆ ಕಳೆದ ೫ ವರ್ಷಗಳಲ್ಲಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳಾವುವು;

(ಆ) ಆ ಯೋಜನೆಗಳ ಪೈಕಿ ಬಾಕಿ ಇರುವ ಕಾಮಗಾರಿಗಳಾವುವು; ಬಾಕಿ ಇರಲು ಕಾರಣಗಳೇನು; ಯಾವ ಕಾಲಮಿತಿಯೊಳಗೆ ಮುಕ್ತಾಯಗೊಳಿಸಲು ಉದ್ದೇಶಿಸಲಾಗಿದೆ; (ಕಾಮಗಾರಿವಾರು ವಿವರ ನೀಡುವುದು)

(ಇ) ಪ್ರಸಕ್ತ ಸಾಲಿನಲ್ಲಿ ವಿಶೇಷ ಅನುದಾನ ನೀಡಲಾಗಿದೆಯೇ; ಹಾಗಿದ್ದಲ್ಲಿ, ತೆಗೆದುಕೊಳ್ಳುವ ಕಾರ್ಯಕ್ರಮಗಳೇನು;

(ಈ) ಕ್ಷೇತ್ರದಲ್ಲಿ ಕುಡಿಯುವ ನೀರಿನ ಸಮಸ್ಯೆಗೆ ತೆಗೆದುಕೊಂಡ ಕ್ರಮಗಳೇನು;

(ಉ) ಶುದ್ಧ ಕುಡಿಯುವ ನೀರಿನ ಘಟಕಗಳು ಎಲ್ಲೆಲ್ಲಿ ತೆರೆಯಲಾಗಿದೆ?

## ಸರ್ಕಾರಿ ಜಮೀನು ಆಕ್ರಮಿಸಿರುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೧೧ (೩೭೫) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ಬೇಗೂರು ಗ್ರಾಮ ಸರ್ವೆ ನಂ. ೩೫೨ ರಿಂದ ೩೬೨ ರವರೆಗಿನ ಪ್ರದೇಶದಲ್ಲಿ M/s. Annabel Builders & Developers Pvt. Ltd., ಸಂಸ್ಥೆ ಮತ್ತು DLF Westend Heights ಸಂಸ್ಥೆಯವರಿಗೆ ಸೇರಿದ ೬೦ ಎಕರೆ ಜಮೀನಿನಲ್ಲಿ 'ಎ' ಮತ್ತು 'ಬಿ' ಖರಾಬ್, ಗೋಮಾಳ, ಸರ್ಕಾರಿ ಗುಂಡು ತೋಪು, ಸರ್ಕಾರಿ ಸ್ಮಶಾನ, ಮೀಸಲು ಅರಣ್ಯ ಪ್ರದೇಶ ಸೇರಿರುವುದು ನಿಜವೇ; ಹಾಗೂ ಇಲ್ಲಿ ಬೃಹತ್ ವಸತಿ ಸಮುಚ್ಛಯ ನಿರ್ಮಾಣ ಮಾಡುತ್ತಿರುವುದು ನಿಜವೇ;

(ಆ) ಹಾಗಿದ್ದರೆ, ವಸತಿ ಸಮುಚ್ಛಯ ಕಟ್ಟಡಕ್ಕೆ ನಕ್ಷೆ ಮಂಜೂರು ಆಗಿದೆಯೇ; ಮಂಜೂರಾತಿಯಂತೆ ಕಟ್ಟಡ ನಿರ್ಮಿಸಲಾಗುತ್ತಿದೆಯೇ; ನಕ್ಷೆಗೆ ಡಿವಿಯೇಷನ್ ಇದೆಯೇ; (ಪೂರ್ಣ ವಿವರ ಒದಗಿಸುವುದು)

(ಇ) ಒತ್ತುವರಿ ಮಾಡಿರುವ 'ಎ' ಮತ್ತು 'ಬಿ' ಖರಾಬ್, ಗೋಮಾಳ ಇತ್ಯಾದಿ ಸರ್ಕಾರಿ ಜಮೀನನ್ನು ಆಕ್ರಮಿಸಿಕೊಂಡಿರುವವರ ವಿರುದ್ಧ ತೆಗೆದುಕೊಂಡಿರುವ ಕ್ರಮಗಳೇನು? (ವಿವರ ಒದಗಿಸುವುದು)

## ಬದಲಿ ನಿವೇಶನ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೧೨ (೩೭೮) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ವಿವಿಧ ಬಡಾವಣೆಗಳಲ್ಲಿ ಬದಲಿ ನಿವೇಶನಗಳನ್ನು ನೀಡಿರುವುದು ನಿಜವೇ;

ಆ) ಹಾಗಿದ್ದರೆ, ೨೦೧೩–೧೪ ರಿಂದ ೨೦೧೭–೧೮ ರವರೆಗೆ ಎಷ್ಟು ಬದಲಿ ನಿವೇಶನ ನೀಡಲಾಗಿದೆ; ನಿವೇಶನ ಪಡೆದವರ, ಮೊದಲು ಹಂಚಿಕೆಯಾದ ಬಡಾವಣೆ ಮತ್ತು ಪ್ರಸ್ತುತ ಬದಲಿ ನಿವೇಶನ ನೀಡಿರುವ ಬಡಾವಣೆ ಇವುಗಳ ಪೂರ್ಣ ವಿವರವನ್ನು ನೀಡುವುದು?

## ಬಿಡಿಎಯಿಂದ ಸ್ವಾಧೀನಪಡಿಸಿಕೊಂಡ ಜಮೀನು ಕೈಬಿಟ್ಟಿರುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು –**

೩೪೧೩ (೩೭೮೭) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಬಡಾವಣೆ ನಿರ್ಮಾಣಕ್ಕೆ ಮತ್ತು ಇತರ ಉದ್ದೇಶಗಳಿಗೆ ಸ್ವಾಧೀನಪಡಿಸಿಕೊಂಡಿರುವ ರೈತರ ಜಮೀನನ್ನು ಸ್ವಾಧೀನದಿಂದ (Denotification or Redo) ಕೈಬಿಟ್ಟಿರುವುದು ನಿಜವೇ;

(ಆ) ಹಾಗಿದ್ದರೆ, ೨೦೧೩–೧೪ ರಿಂದ ಇದುವರೆವಿಗೆ ಸ್ವಾಧೀನದಿಂದ (Denotification or Redo) ಕೈಬಿಟ್ಟಿರುವ ಒಟ್ಟು ಜಮೀನು ಎಷ್ಟು; ಯಾವ ಯಾವ ಸಂಸ್ಥೆಗಳ ಮತ್ತು ರೈತರ ಜಮೀನನ್ನು ಸ್ವಾಧೀನದಿಂದ ಕೈ ಬಿಡಲಾಗಿದೆ? (ಹೆಸರುವಾರು, ಕೈಬಿಟ್ಟ ಜಮೀನಿನ ವಿಸ್ತೀರ್ಣ, ಕಾರಣಗಳ ಸಹಿತ ವಿವರಗಳನ್ನು ಒದಗಿಸುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಅಧಿಕಾರಿಗಳು ಮತ್ತು ಗುತ್ತಿದಾರರು ವಂಚಿಸಿರುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೧೪ (೩೭೯೬) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಿಗಳು ಮತ್ತು ಗುತ್ತಿಗೆದಾರರು ಸೇರಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಸಾವಿರಾರು ಪೌರ ಕಾರ್ಮಿಕರು ನಕಲಿ ದಾಖಲೆ ಸೃಷ್ಟಿಸಿ ಕೋಟ್ಯಾಂತರ ರೂಪಾಯಿಗಳನ್ನು ಪಾಲಿಕೆಗೆ ವಂಚಿಸಿರುವುದು ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದರೆ, ಎಷ್ಟು ಪೌರ ಕಾರ್ಮಿಕರು ನಕಲಿ ದಾಖಲೆ ಸೃಷ್ಟಿಸಿ ಎಷ್ಟು ಹಣ ಪಾಲಿಕೆಗೆ ವಂಚಿಸಿದ್ದಾರೆ; (ವಿವರ ನೀಡುವುದು)

ಇ) ಪಾಲಿಕೆಗೆ ವಂಚಿಸಿರುವ ಅಧಿಕಾರಿಗಳ ಮತ್ತು ಗುತ್ತಿಗೆದಾರರ ವಿರುದ್ಧ ಪಾಲಿಕೆ ತೆಗೆದುಕೊಂಡಿರುವ ಕ್ರಮವೇನು? (ವಿವರ ನೀಡುವುದು)

## ಬೆಂಗಳೂರು ನಗರ ವ್ಯಾಪ್ತಿಯಲ್ಲಿ ನೆಡಲಾಗಿರುವ ಗಿಡಗಳ ಮಾಹಿತಿ ನೀಡುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೧೫ (೩೯೪೭) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವತಿಯಿಂದ ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರು ನಗರ ವ್ಯಾಪ್ತಿಯ ರಸ್ತೆ ಬದಿಯಲ್ಲಿ ಎಷ್ಟು ಗಿಡಗಳನ್ನು ನೆಡಲಾಗಿರುತ್ತದೆ; (ವಿಧಾನಸಭಾ ಕ್ಷೇತ್ರವಾರು ಮಾಹಿತಿಯನ್ನು ನೀಡುವುದು)

(ಆ) ಪ್ರತಿ ಗಿಡಗಳನ್ನು ನೆಡಲು ಎಷ್ಟು ಹಣವನ್ನು ಪಾವತಿ ಮಾಡಲಾಗಿರುತ್ತದೆ;

(ಇ) ನೆಡಲಾಗಿರುವ ಗಿಡಗಳ ರಕ್ಷಣೆಗಾಗಿ ಅಳವಡಿಸಿರುವ ಟ್ರೀಗಾರ್ಡ್‌ಗಳ ಸಂಖ್ಯೆ ಎಷ್ಟು ಇದಕ್ಕಾಗಿ ವೆಚ್ಚ ಮಾಡಲಾದ ಹಣ ಎಷ್ಟು; (ವಿವರ ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಸಾರ್ವಜನಿಕರಿಂದ ಬಂದಂತಹ ಅರ್ಜಿಗಳ ಮೇರೆಗೆ ಯಾವ ಯಾವ ಸ್ಥಳಗಳಲ್ಲಿ ಮರಗಳನ್ನು ಕಡಿಯಲಾಗಿರುತ್ತದೆ?

## ಮುಖ್ಯಮಂತ್ರಿಗಳ ಪರಿಹಾರ ನಿಧಿಯ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೧೬ (೩೮೩೬) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ಇತರ ಗಂಭೀರ ಖಾಯಿಲೆಗಳಿಗೂ ಪರಿಹಾರ ನೀಡುತ್ತೇವೆಂದು ಮುಖ್ಯಮಂತ್ರಿಗಳು ಭರವಸೆ ನೀಡಿದ್ದರೂ, ಅದು ಕಾರ್ಯಗತವಾಗದೆ ಆರು ಖಾಯಿಲೆಗಳಿಗೆ ಮಾತ್ರ ಪರಿಹಾರ ವಿತರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಮುಖ್ಯಮಂತ್ರಿಗಳ ಭರವಸೆ ಆದೇಶವಾಗಿ ಮಾರ್ಪಾಡಾಗುವುದು ಯಾವಾಗ; ಯಾವ ಯಾವ ಗಂಭೀರ ಖಾಯಿಲೆಗೆ ಪರಿಹಾರ ವಿತರಿಸಲಾಗುವುದು;

(ಇ) ಮುಖ್ಯಮಂತ್ರಿಗಳ ಪರಿಹಾರ ನಿಧಿ ಶಾಖೆಯಲ್ಲಿ ಪರಿಹಾರ ವಿತರಣೆಯಲ್ಲಿ ತೀರ ವಿಳಂಬವಾಗುತ್ತಿದ್ದು, ಅರ್ಜಿಗಳ ಶೀಘ್ರ ವಿಲೇವಾರಿಗೆ ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಈ) ಫಲಾನುಭವಿಯು ಪರಿಹಾರಕ್ಕಾಗಿ ಅರ್ಜಿ ಸಲ್ಲಿಸಿದಾಗ, ಪರಿಹಾರದ ವಿತರಣೆಗೆ ಮತ್ತು ಅದರ ಪ್ರಕ್ರಿಯೆಗೆ ಬೇಕಾಗುವ ಕಾಲಾವಕಾಶವೆಷ್ಟು?

## ಶಿಥಿಲಗೊಂಡ ಮನೆಗಳಲ್ಲಿ ವಾಸಿಸುತ್ತಿರುವ ಜನತೆಯನ್ನು ತೆರವುಗೊಳಿಸುವ ಬಗ್ಗೆ

**ಶ್ರೀ ಕೆ.ವಿ ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೧೭ (೪೦೦೪) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಜನತೆ ಶಿಥಿಲಗೊಂಡ ಮನೆಗಳಲ್ಲಿ ವಾಸಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಸದರಿ ಶಿಥಿಲಗೊಂಡ ಮನೆಗಳಲ್ಲಿ ವಾಸಿಸುತ್ತಿರುವ ಕುಟುಂಬಗಳಿಗೆ ನೋಟೀಸ್ ನೀಡಿ ಅವುಗಳನ್ನು ತೆರವುಗೊಳಿಸುವ ಅಧಿಕಾರ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಇದೆಯೇ;

ಇ) ಇದ್ದರೆ, ಶಿಥಿಲಗೊಂಡ ಮನೆಗಳಲ್ಲಿ ವಾಸಿಸುತ್ತಿರುವ ಎಷ್ಟು ಕುಟುಂಬಗಳಿಗೆ ನೋಟೀಸ್ ನೀಡಲಾಗಿದೆ ಮತ್ತು ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗಿದೆ;

ಈ) ನೋಟೀಸ್ ನೀಡದೇ ಇದ್ದಲ್ಲಿ, ನೋಟೀಸ್ ನೀಡದೆ ಕರ್ತವ್ಯ ಲೋಪ ಎಸಗಿದ ಅಧಿಕಾರಿ/ಸಿಬ್ಬಂದಿ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು?

## ವೈನ್‌ಶಾಪ್, ಬಾರ್ ಮತ್ತು ಎಂ.ಎಸ್.ಐ.ಎಲ್ ಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೧೮ (೩೯೯೪) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೆಂಗಳೂರು ನಗರದಲ್ಲಿರುವ ಸನ್ನದುಗಳೆಷ್ಟು;

ಆ) ವೈನ್‌ಶಾಪ್ ಮತ್ತು ಬಾರ್‌ಗಳನ್ನು ತೆರೆಯಲು ಶಾಲಾ, ಕಾಲೇಜು ಮತ್ತು ದೇವಸ್ಥಾನದಿಂದ ದೂರವಿರಬೇಕೆಂದು ನಿಯಮವಿದ್ದರೂ ಪಕ್ಕದಲ್ಲೇ ರಾಜರೋಷವಾಗಿ ಅವುಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದರೆ, ಏಕೆ ಕ್ರಮ ಕೈಗೊಂಡಿಲ್ಲ;

ಈ) ಎಂ.ಎಸ್.ಐ.ಎಲ್ ಮಳಿಗೆಗಳನ್ನು ತೆರೆಯಲು ಇರುವ ಮಾನದಂಡಗಳೇನು;

ಉ) ಎಂ.ಎಸ್.ಐ.ಎಲ್ ಮಳಿಗೆಗಳನ್ನು ಖಾಸಗಿಯವರಿಗೆ ಗುತ್ತಿಗೆ ಆಧಾರದ ಮೇಲೆ ನೀಡಲಾಗುವುದೆ; ಅಥವಾ ನೌಕರನ್ನು ತೆಗೆದು ಕೊಳ್ಳಲಾಗುವುದೇ;

ಊ) ರಾಷ್ಟ್ರೀಯ ಹೆದ್ದಾರಿಯಿಂದ ತೆರವುಗೊಳಿಸಿದ ಮೇಲೆ ಸಾರ್ವಜನಿಕರು ವಾಸಿಸುವ ಗ್ರಾಮ, ಬಡಾವಣೆಯ ಮನೆಗಳ ಅಕ್ಕಪಕ್ಕದಲ್ಲೆ ಸ್ಥಾಪಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಈ ನಿಟ್ಟಿನಲ್ಲಿ ಇಲಾಖೆಯು ಕೈಗೊಂಡ ಕ್ರಮವೇನು?

## ಮಂಜೂರು ಮಾಡಿದ ಅನುದಾನದ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೮೯ (೩೯೯೩) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಿಗೆ ಕಳೆದ ೩ ವರ್ಷಗಳಲ್ಲಿ ಮಂಜೂರು ಮಾಡಿದ ಅನುದಾನವೆಷ್ಟು; ಖರ್ಚಾಗದೆ ಉಳಿದ ಹಣವೆಷ್ಟು;

ಆ) ರಾಜ್ಯದಲ್ಲಿರುವ ಎಲ್ಲಾ ಸ್ಥಳೀಯ ಸಂಸ್ಥೆಗಳಿಗೂ ಏಕರೂಪ ಅನುದಾನವನ್ನು ನೀಡಲಾಗುವುದೆ;

ಇ) ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆ ಆಧಾರಿತ ನೌಕರರ ಸಂಖ್ಯೆ ಎಷ್ಟು;

ಈ) ಅವರನ್ನು ಖಾಯಂ ಮಾಡಲಾಗುವುದು ಯಾವಾಗ?

**ಬಡವರಿಗೆ ನಿವೇಶನ ನೀಡುವ ಬಗ್ಗೆ**

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೨೦ (೩೯೯೦) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದ ಪ್ರಮುಖ ನಗರಗಳಲ್ಲಿ ಸ್ಥಳೀಯ ಸಂಸ್ಥೆಗಳ ಮೂಲಕ ಬಡವರಿಗೆ ನಿವೇಶನ ನೀಡುವ ಕಾರ್ಯಕ್ರಮವಿದೆಯೇ;

ಆ) ಹಾಗಿದ್ದರೆ, ಯಾವ ಯಾವ ನಗರಗಳಲ್ಲಿ ನಿವೇಶನಗಳನ್ನು ನೀಡಲಾಗುತ್ತಿದೆ;

ಇ) ನಿವೇಶನಗಳನ್ನು ನೀಡಲು ಸರ್ಕಾರದ (ಸ್ಥಳೀಯ ಸಂಸ್ಥೆಗಳ) ಮಾನದಂಡವೇನು;

ಈ) ಬೆಂಗಳೂರು ನಗರವನ್ನು ಹೊರತುಪಡಿಸಿ ಬೇರೆ ಬೇರೆ ನಗರಗಳಲ್ಲಿ ವೈಜ್ಞಾನಿಕವಾಗಿ ಕಸ ವಿಲೇವಾರಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು;

ಉ) ಈಗ ಕಸ ವಿಲೇವಾರಿ ಮಾಡುತ್ತಿರುವ ಗುತ್ತಿಗೆದಾರರು ಸರಿಯಾದ ರೀತಿಯಲ್ಲಿ ಕಸ ವಿಲೇವಾರಿ ಮಾಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಊ) ಬಂದಿದ್ದರೆ, ಅವರ ವಿರುದ್ಧ ಏನು ಕ್ರಮ ಕೈಗೊಳ್ಳಲಾಗಿದೆ?

## ಬಿ.ಎಂ.ಆರ್.ಸಿ.ಎಲ್ ಕಾಮಗಾರಿಯ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೨೧ (೩೯೯೧) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೆಂಗಳೂರು ನಗರದಲ್ಲಿ ಬಿ.ಎಂ.ಆರ್.ಸಿ.ಎಲ್ ನ ಕೆಲಸ ಪ್ರಗತಿಯಲ್ಲಿದ್ದು ಸಾರ್ವಜನಿಕ ರಸ್ತೆಗಳೆಲ್ಲಾ ಹಾಳಾಗಿ ಟ್ರಾಫಿಕ್ ಜಾಮ್ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಿ.ಎಂ.ಆರ್.ಸಿ.ಎಲ್ ಕಾಮಗಾರಿ ಮುಗಿದಿರುವ ೧ನೇ ಹಂತದ ಭಾಗಗಳಲ್ಲಿ ಕಂಬಗಳ ಮಧ್ಯ ಇರುವ ಮಿಡಿಯನ್ ಒಳಗಡೆ ಕಟ್ಟಡದ ತ್ಯಾಜ್ಯಗಳನ್ನು ಸುರಿದು ಹಾಳು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದರೆ, ಬಿ.ಎಂ.ಆರ್.ಸಿ.ಎಲ್ ವಿರುದ್ಧ ಏಕೆ ಕ್ರಮ ಕೈಗೊಂಡಿಲ್ಲ?

## ರಾಜ್ಯದಲ್ಲಿ ಮಹಿಳೆಯರ ಕೊಲೆಗಳು ಮತ್ತು ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಮತ್ತು ಸಂತ್ರಸ್ಥೆಯರಿಗೆ ಪರಿಹಾರ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು)–**

**ಮತ್ತು ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೩೪೨೨ (೩೮೦೨+೩೭೮೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪ ರಿಂದ ೨೦೧೭–೧೮ರವರೆಗೆ ರಾಜ್ಯದಲ್ಲಿ ಮಹಿಳೆಯರ ಮೇಲೆ ನಡೆದಿದೆ ಎನ್ನಲಾದ ಲೈಂಗಿಕ ಮತ್ತು ಇನ್ನಿತರೆ ದೌರ್ಜನ್ಯ ಪ್ರಕರಣಗಳ ಸಂಖ್ಯೆ ಎಷ್ಟು; ಅಂತಹ ಎಷ್ಟು ಪ್ರಕರಣಗಳಲ್ಲಿ ಕ್ರಿಮಿನಲ್ ಕೇಸನ್ನು ದಾಖಲು ಮಾಡಲಾಗಿದೆ; (ಪ್ರಕರಣವಾರು ವಿವರಗಳನ್ನು ನೀಡುವುದು)

(ಆ) ಲೈಂಗಿಕ ದೌರ್ಜನ್ಯಕ್ಕೊಳ್ಳಗಾದ ಎಷ್ಟು ಜನ ಸಂತ್ರಸ್ತೆಯರಿಗೆ ಎಷ್ಟೆಷ್ಟು ಪರಿಹಾರವನ್ನು ನೀಡಲಾಗಿದೆ; (ಪ್ರಕರಣವಾರು ವಿವರ ನೀಡುವುದು)

(ಇ) ಸಂತ್ರಸ್ಥೆಯರಿಗೆ ಪರಿಹಾರ ನೀಡಲು ಕೇಂದ್ರ ಸರ್ಕಾರ ರೂಪಿಸಿರುವ "ನಿರ್ಭಯ ನಿಧಿ" ಯಿಂದ ಎಷ್ಟು ಹಣವನ್ನು ಪಡೆದುಕೊಳ್ಳಲಾಗಿದೆ ಮತ್ತು ಎಷ್ಟು ಹಣವನ್ನು ವಿತರಿಸಲಾಗಿದೆ; (ವರ್ಷವಾರು ಮತ್ತು ಪ್ರಕರಣವಾರು ಮಾಹಿತಿ ನೀಡುವುದು)

(ಉ) ಹಾಗಿದ್ದರೆ, ಕೊಲೆಯಾದ ಪ್ರಕರಣಗಳ ಸಂಖ್ಯೆ ಎಷ್ಟು; ಆ ಪೈಕಿ ಅಪರಾಧಿಗಳನ್ನು ಪತ್ತೆ ಹಚ್ಚಿ ಬಂಧಿಸಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಬಂಧನಕ್ಕೆ ಬಾಕಿಯಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಕೊಲೆಯಾದವರ ಕುಟುಂಬಕ್ಕೆ ಪರಿಹಾರಧನ ನೀಡಲಾಗಿದೆಯೇ; ಪರಿಹಾರಧನ ಎಷ್ಟು ಜನರಿಗೆ, ಕುಟುಂಬಗಳಿಗೆ ನೀಡಲಾಗಿದೆ; ಬಾಕಿ ಇರುವ ಸಂಖ್ಯೆ ಎಷ್ಟು? (ಜಿಲ್ಲಾವಾರು, ಪ್ರಕರಣವಾರು ವಿವರ ನೀಡುವುದು)

## ಭ್ರಷ್ಟಾಚಾರ ನಿಗ್ರಹದಳ ಸಂಸ್ಥೆಯಲ್ಲಿನ ದೂರುಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು)–**

೩೪೨೩ (೩೮೦೩) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಭಷ್ಟಾಚಾರ ನಿಗ್ರಹದಳ ಸಂಸ್ಥೆಯಲ್ಲಿ ಮುಖ್ಯಮಂತ್ರಿ, ಮಂತ್ರಿಗಳು ಮತ್ತು ಶಾಸಕರುಗಳ ಹಾಗೂ ಇತರರ ವಿರುದ್ಧ ದೂರುಗಳು ದಾಖಲಾಗಿರುವುದು ನಿಜವೇ;

ಆ) ಹಾಗಿದ್ದರೆ, ಒಟ್ಟು ದೂರುಗಳ ಸಂಖ್ಯೆ ಮತ್ತು ಅಂತಹ ದೂರುಗಳ ವಿವರಗಳ ಪಟ್ಟಿ ಹಾಗೂ ವಿಚಾರಣೆಯ ಹಂತ ಇವುಗಳನ್ನೊಳಗೊಂಡ ಸಂಪೂರ್ಣ ವಿವರ ನೀಡುವುದು;

ಇ) ಈ ದೂರುಗಳಲ್ಲಿ ಎಫ್‌ಐಆರ್ ಆದ ದೂರುಗಳ ಸಂಖ್ಯೆ ಎಷ್ಟು; ಇತ್ಯರ್ಥವಾದ ಪ್ರಕರಣಗಳ ಸಂಖ್ಯೆ ಎಷ್ಟು; ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು? (ಪೂರ್ಣ ವಿವರ ನೀಡುವುದು)

## ಕೇಂದ್ರ ಸರ್ಕಾರದ ವಿವಿಧ ಯೋಜನೆಗಳಿಗೆ ಹಣ ನೀಡುತ್ತಿರುವ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು)–**

೩೪೨೪ (೩೮೦೪) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಕೇಂದ್ರ ಸರ್ಕಾರದಿಂದ ವಿವಿಧ ಯೋಜನೆಗಳಿಗೆ ಹಣ ಬರುತ್ತಿರುವುದು ನಿಜವೇ;

ಆ) ಹಾಗಿದ್ದರೆ, ಆ ಯೋಜನೆಗಳು ಯಾವುವು; ಯಾವ ಯಾವ ಯೋಜನೆಗಳಿಗೆ ಎಷ್ಟು ಹಣ ಕೇಂದ್ರ ಸರ್ಕಾರದಿಂದ ಬಂದಿದೆ; (೨೦೧೩–೧೪ ರಿಂದ ೨೦೧೭–೧೮ ರವರೆಗಿನ ವರ್ಷಾವಾರು ವಿವರ ನೀಡುವುದು)

ಇ) ಕೇಂದ್ರ ಸರ್ಕಾರ ನೀಡಿದ ಹಣವನ್ನು ಸಕಾಲದಲ್ಲಿ ಸದರಿ ಯೋಜನೆಗಳಿಗೆ ವಿತರಣೆ ಮಾಡಲಾಗಿದೆಯೇ? (ವರ್ಷಾವಾರು ವಿವರ ನೀಡುವುದು)

## ವಿವಿಧ ಮೂಲಗಳಿಂದ ಸರ್ಕಾರಕ್ಕೆ ಬರುವ ಆದಾಯದ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು)–**

೩೪೨೫ (೩೮೦೧) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಸಂಪನ್ಮೂಲ ಕ್ರೋಢೀಕರಿಸಿ ವಿವಿಧ ಮೂಲಗಳಿಂದ ಸರ್ಕಾರಕ್ಕೆ ಆದಾಯ ಬರುತ್ತಿರುವುದು ನಿಜವೇ;

ಆ) ಹಾಗಿದ್ದರೆ, ಯಾವ ಮೂಲಗಳಿಂದ ಎಷ್ಟು ಹಣ ಸಂಗ್ರಹವಾಗುತ್ತಿದೆ; ಆಯವ್ಯಯದಲ್ಲಿ ಅಂದಾಜಿಸಿದ ಹಣ ಎಷ್ಟು; ಭೌತಿಕವಾಗಿ ಬಂದಿರುವ ಹಣ ಎಷ್ಟು? (೨೦೧೩–೧೪ ರಿಂದ ೨೦೧೭–೧೮ ರವರೆಗಿನ ವರ್ಷಾವಾರು ವಿವರ ನೀಡುವುದು)

## ಗಾಂಜಾ, ಅಫೀಮು, ಮಾದಕ ವಸ್ತುಗಳ ಮಾಫಿಯಾ ನಿಯಂತ್ರಣದ ಬಗ್ಗೆ

**ಶ್ರೀ ಕೆ. ಪ್ರತಾಪ ಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೨೬ (೪೦೧೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೩ ವರ್ಷದಲ್ಲಿ ಪತ್ತೆ ಹಚ್ಚಲಾದ ಗಾಂಜಾ, ಅಫೀಮು, ಮಾದಕ ವಸ್ತುಗಳ ಮಾಫಿಯಾವನ್ನು ಪತ್ತೆ ಹಚ್ಚಲಾದ ಪ್ರಕರಣಗಳ ಸಂಖ್ಯೆ ಎಷ್ಟು; (ವರ್ಷವಾರು, ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

(ಆ) ಈ ಗಾಂಜಾ, ಅಫೀಮುಗಳು ಹೊರರಾಜ್ಯಗಳಿಂದ ಸಾಗಾಟವಾಗುತ್ತಿದೆಯೇ ಅಥವಾ ಇದೇ ರಾಜ್ಯದಲ್ಲಿ ಉತ್ಪಾದನೆಯಾಗಿ ಸಾಗಾಟವಾಗುತ್ತಿದೆಯೇ;

(ಇ) ಈ ಮಾದಕ ವಸ್ತುಗಳ ಮಾಫಿಯಾವನ್ನು ನಿಯಂತ್ರಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು?

## ರಾಜ್ಯದಲ್ಲಿ ವಾಹನ ಕಳ್ಳತನ ಪ್ರಕರಣಗಳನ್ನು ತಡೆಗಟ್ಟುವ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೨೭ (೪೦೧೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ದಾಖಲಾದ ವಾಹನ ಕಳ್ಳತನ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

ಆ) ಕಳೆದ ಮೂರು ವರ್ಷಗಳಲ್ಲಿ ಉಡುಪಿ ಜಿಲ್ಲೆಯಲ್ಲಿ ದಾಖಲಾದ ವಾಹನ ಕಳ್ಳತನ ಪ್ರಕರಣಗಳಲ್ಲಿ ಪತ್ತೆ ಹಚ್ಚಲಾದ ಪ್ರಕರಣಗಳ ಸಂಖ್ಯೆ ಎಷ್ಟು; ಬಾಕಿ ಇರುವ ಪ್ರಕರಣಗಳಲ್ಲಿ ಕೈಗೊಂಡ ಕ್ರಮಗಳೇನು; (ಠಾಣಾವಾರು ವಿವರ ನೀಡುವುದು)

ಇ) ಈ ವಾಹನ ಕಳ್ಳತನ ಪ್ರಕರಣಗಳನ್ನು ಪತ್ತೆಹಚ್ಚಲು ವಿಶೇಷ ತನಿಖಾ ತಂಡವನ್ನು ರಚಿಸುವ ಉದ್ದೇಶ ಸರ್ಕಾರದ ಮುಂದಿದೆಯೇ; ಇಲ್ಲವಾದಲ್ಲಿ, ಕಾರಣವೇನು?

## ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಪತ್ರಿಕೆಗಳ ನೋಂದಣಿ ಹಾಗೂ ವ್ಯಾಜ್ಯ ಪರಿಹಾರದ ನ್ಯಾಯಾಲಯ ವ್ಯಾಪ್ತಿಯ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೨೮ (೪೦೧೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಕಟವಾಗುತ್ತಿರುವ ಸಾಕ್ಷಿಕ, ಸಾಪ್ತಾಹಿಕ ಮತ್ತು ಮಾಸಿಕ, ತ್ರೈಮಾಸಿಕ ಪತ್ರಿಕೆಗಳು ಯಾವುವು; ಅವುಗಳ ಮಾಲೀಕರು, ಸಂಪಾದಕರು ಯಾರು; ಅವುಗಳು

ನೋಂದಣಿಯಾದ ವರ್ಷ ಯಾವುದು; ಅವುಗಳಲ್ಲಿ ನಿರಂತರವಾಗಿ ನೋಂದಣಿ ನವೀಕರಣವಾಗುತ್ತಿರುವ ಪತ್ರಿಕೆಗಳು ಯಾವುವು; (ಪತ್ರಿಕೆವಾರು, ನೋಂದಣಿವಾರು ವಿವರ ನೀಡುವುದು)

ಆ) ಮಾರುಕಟ್ಟೆಯಲ್ಲಿ ಅನಧಿಕೃತವಾಗಿ ಪತ್ರಿಕೆಗಳು ಪ್ರಕಟವಾಗಿ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕೆಲವು ಪತ್ರಿಕೆಗಳು ಹಫ್ತಾ ವಸೂಲಿಯ ಉದ್ದೇಶವಾಗಿರಿಸಿ ಪ್ರಕಟಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಪತ್ರಿಕೆಗಳ ನಿಯಂತ್ರಣಕ್ಕೆ ಇಲಾಖೆಯು ಕೈಗೊಂಡ ಕ್ರಮಗಳಾವುವು;

ಇ) ಪತ್ರಿಕೆಗಳ ವರದಿಗಳಿಗೆ ಸಂಬಂಧಿಸಿದ ವ್ಯಾಜ್ಯಗಳನ್ನು ಸೀಮಿತ ನ್ಯಾಯಾಲಯ ವ್ಯಾಪ್ತಿಯಲ್ಲಿ ಮಾತ್ರ ಪ್ರಶ್ನಿಸಬಹುದೆನ್ನುವ ಷರತ್ತು ವಿಧಿಸಲು ಅವಕಾಶವಿದೆಯೇ; ಇದ್ದರೆ, ಕಾರಣವೇನು; ಈ ರೀತಿ ಷರತ್ತುಗಳನ್ನು ವಿಧಿಸಿರುವ ಪತ್ರಿಕೆಗಳು ಯಾವುವು ಮತ್ತು ಷರತ್ತು ವಿಧಿಸಲು ಅನುಮತಿ ಪಡೆಯಲಾಗಿದೆಯೇ? (ವಿವರ ನೀಡುವುದು)

## ಸಾರ್ವಜನಿಕ ಉದ್ದಿಮೆಗಳ ಪುನಃಶ್ಚೇತನ ಮತ್ತು ಆಡಳಿತ ಮಂಡಳಿ ರಚನೆ

**ಶ್ರೀ ಕೆ. ಪ್ರತಾಪ ಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೨೯ (೪೦೧೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಪ್ರಸ್ತುತ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ಎಷ್ಟು ಸಾರ್ವಜನಿಕ ಉದ್ದಿಮೆಗಳ ಆಡಳಿತ ಮಂಡಳಿಯನ್ನು ಪುನರ್ ರಚಿಸಲಾಗಿದೆ; ಅವರಿಗೆ ನೀಡಲಾಗುವ ಸೌಲಭ್ಯಗಳು ಯಾವುವು; (ಮಂಡಳಿವಾರು, ಹೆಸರುವಾರು, ಹುದ್ದೆವಾರು ವಿವರ ನೀಡುವುದು)

ಆ) ಈ ಸಾರ್ವಜನಿಕ ಉದ್ದಿಮೆಗಳಲ್ಲಿ ಲಾಭದಲ್ಲಿರುವ ಉದ್ದಿಮೆಗಳು ಯಾವುವು; ನಷ್ಟದಲ್ಲಿರುವ ಉದ್ದಿಮೆಗಳು ಯಾವುವು; ನಷ್ಟದಲ್ಲಿರುವ ಉದ್ದಿಮೆಗಳ ಪುನಃಶ್ಚೇತನಕ್ಕೆ ಸರ್ಕಾರದ ಕ್ರಮವೇನು;

ಇ) ಈ ಉದ್ದಿಮೆಗಳು ಆಡಳಿತ ಮಂಡಳಿಯ ರಚನೆ ಮತ್ತು ಸೌಲಭ್ಯವನ್ನು ಒದಗಿಸಲು ತಗಲುವ ವಾರ್ಷಿಕ ವೆಚ್ಚವೆಷ್ಟು; ನಷ್ಟದಲ್ಲಿರುವ ಉದ್ದಿಮೆಗಳಿಗೆ ಈ ಆಡಳಿತ ಮಂಡಳಿಯನ್ನು ರಚಿಸುವ ಉದ್ದೇಶವೇನು? (ಉದ್ದಿಮೆವಾರು ವಿವರ ನೀಡುವುದು)

## ನಗರಾಭಿವೃದ್ಧಿ ಪ್ರಾಧಿಕಾರವು ಸಂಘ–ಸಂಸ್ಥೆಗಳಿಗೆ ನಿವೇಶನ ನೀಡಿರುವ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೩೦ (೩೮೩೨) ಮಾನ್ಯ ನಗರಾಭಿವೃದ್ಧಿ ಹಾಗೂ ಹಚ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ಸಂಘ–ಸಂಸ್ಥೆಗಳಿಗೆ ನೀಡುವ ನಿವೇಶನದ ಲೀಜ್ಡ್ ಅವಧಿ ಎಷ್ಟು;

ಆ) ಲೀಜ್ಡ್ ಅವಧಿ ಮುಗಿದ ನಂತರ ಪುನರ್ ನವೀಕರಣ ಮಾಡಲು ಇರುವ ಮಾನದಂಡಗಳೇನು;

ಇ) ಹೆಚ್ಚಿನ ಮೊತ್ತವನ್ನು ಪಾವತಿಸಿ ಲೀಜ್ಡ್ ಅವಧಿಯನ್ನು ಮುಂದುವರೆಸಿಕೊಳ್ಳಲು ಸಂಘ–ಸಂಸ್ಥೆಗಳಿಗೆ ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದಲ್ಲಿ, ೩೦ ವರ್ಷಗಳ ಬದಲಾಗಿ ೯೯ ವರ್ಷಗಳವರೆಗೆ ಲೀಜ್ಡ್ ಅವಧಿಯನ್ನು ಮುಂದುವರೆಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಸರ್ಕಾರ ಯಾವ ಕ್ರಮಕೈಗೊಳ್ಳಲಿದೆ?

## ವಿವಿಧ ಮೂಲಗಳಿಂದ ಸಂಗ್ರಹವಾದ ಸೆಸ್‌ಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೩೧ (೩೮೨೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ವಿವಿಧ ಮೂಲಗಳಿಂದ ಸಂಗ್ರಹವಾದ ಒಟ್ಟು ಕರ (ಸೆಸ್) ಎಷ್ಟು; ಅವುಗಳು ಯಾವುವು; (ವರ್ಷಾವಾರು ಸಂಪೂರ್ಣ ವಿವರ ನೀಡುವುದು)

ಆ) ಸಂಗ್ರಹವಾದ ಕರದಲ್ಲಿ ಕಳೆದ ಮೂರು ವರ್ಷಗಳಲ್ಲಿ ಕೇಂದ್ರ ಸರಕಾರಕ್ಕೆ ಪಾವತಿ ಮಾಡಿರುವ ಹಣ ಎಷ್ಟು; (ವರ್ಷಾವಾರು ಸಂಪೂರ್ಣ ವಿವರ ನೀಡುವುದು)

ಇ) ಬಾಕಿ ಇದ್ದಲ್ಲಿ, ಪಾವತಿಸಬೇಕಾದ ಹಣ ಎಷ್ಟು? (ವರ್ಷಾವಾರು ವಿವರ ನೀಡುವುದು)

## ಧಾರವಾಡದಲ್ಲಿನ ಪೆಪ್ಸಿ ಕಂಪನಿಗೆ ನೀರು ಸರಬರಾಜಾಗುತ್ತಿರುವ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೩೨ (೩೮೨೩) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಧಾರವಾಡದಲ್ಲಿರುವ ಪೆಪ್ಸಿ ಕಂಪನಿಗೆ ಯಾವ ಮೂಲದಿಂದ ನೀರು ಸರಬರಾಜು ಮಾಡಲಾಗುತ್ತಿದೆ;

ಆ) ಸಾರ್ವಜನಿಕ ಅನುಕೂಲಕ್ಕೆ ಕುಡಿಯುವ ನೀರು ಸರಬರಾಜು ಮಾಡಿಕೊಡುವ ಬದಲು ಪೆಪ್ಸಿ ಕಂಪನಿಗೆ ಕರ್ನಾಟಕ ಜಲ ಮಂಡಳಿಯಿಂದ ನೀರು ಸರಬರಾಜು ಮಾಡುತ್ತಿರುವುದು ನಿಜವೇ;

ಇ) ಹಾಗಿದ್ದಲ್ಲಿ, ಯಾವ ಮಾನದಂಡದ ಆಧಾರದ ಮೇಲೆ ಈ ಕಂಪನಿಗೆ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ;

ಈ) ಹುಬ್ಬಳ್ಳಿ ಹಾಗೂ ಧಾರವಾಡದಲ್ಲಿ ಸಾರ್ವಜನಿಕರಿಗೆ ೬–೮ ದಿನಕ್ಕೊಮ್ಮೆ ಕುಡಿಯುವ ನೀರು ಸರಬರಾಜು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಬಂದಿದ್ದಲ್ಲಿ, ಸಾರ್ವಜನಿಕರಿಗೆ ಸಮರ್ಪಕವಾಗಿ ಕುಡಿಯುವ ನೀರಿನ ಸರಬರಾಜು ಮಾಡಲು ಕೈಗೊಂಡಿರುವ ಕ್ರಮಗಳೇನು?

## ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಯೋಜನೆಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೩೨(ಎ) (೩೮೨೭) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಕಳೆದ ೩ ವರ್ಷಗಳಿಂದ ಈವರೆಗೆ ಯಾವ ಯಾವ ಯೋಜನೆಗಳಿಗೆ ಎಷ್ಟೆಷ್ಟು ಹಣ ಬಿಡುಗಡೆ ಮಾಡಲಾಗಿದೆ; (ವರ್ಷಾವಾರು, ಯೋಜನೆವಾರು ಸಂಪೂರ್ಣ ವಿವರ ನೀಡುವುದು)

ಆ) ಸದರಿ ಯೋಜನೆಗಳ ಪ್ರಗತಿ ಯಾವ ಹಂತದಲ್ಲಿವೆ? (ಯೋಜನೆವಾರು ಸಂಪೂರ್ಣ ವಿವರ ನೀಡುವುದು)

## ನಗರೋತ್ಥಾನ ಯೋಜನೆಯಡಿ ಕೈಗೊಂಡ ಕಾರ್ಯಕ್ರಮಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೩೩ (೩೮೨೬) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಕಳೆದ ೨ ವರ್ಷಗಳಿಂದ ನಗರೋತ್ಥಾನ ಯೋಜನೆಯಡಿ ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಕೈಗೊಳ್ಳಲಾದ ಕಾಮಗಾರಿಗಳು ಯಾವುವು; (ವರ್ಷಾವಾರು ಹಾಗೂ ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

ಆ) ಸದರಿ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು; (ವರ್ಷಾವಾರು, ಜಿಲ್ಲಾವಾರು, ಕಾಮಗಾರಿವಾರು ಸಂಪೂರ್ಣ ಮಾಹಿತಿ ನೀಡುವುದು)

ಇ) ಈ ಯೋಜನೆಯಡಿ ಪೂರ್ಣಗೊಳಿಸಿರುವ ಕಾಮಗಾರಿಗಳು ಯಾವುವು; ಇದನ್ನು ಪೂರೈಸಲು ಖರ್ಚು ಮಾಡಲಾದ ಮೊತ್ತವೆಷ್ಟು; ಬಾಕಿ ಉಳಿದ ಮೊತ್ತವೆಷ್ಟು;

ಈ) ಈ ಕಾಮಗಾರಿಗಳನ್ನು ಪೂರ್ಣಗೊಳಿಸಲು ನಿಗದಿಗೊಳಿಸಲಾಗಿರುವ ಕಾಲಮಿತಿ ಎಷ್ಟು; ಪ್ರಸ್ತುತ ಕಾಮಗಾರಿಗಳ ಪ್ರಗತಿ ಯಾವ ಹಂತದಲ್ಲಿವೆ? (ಸಂಪೂರ್ಣ ಮಾಹಿತಿ ನೀಡುವುದು)

## ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳಾಗಿ ಮೇಲ್ದರ್ಜೆಗೇರಿಸುವ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೩೪ (೩೮೨೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿನ ಪಟ್ಟಣ ಪಂಚಾಯಿತಿಗಳನ್ನಾಗಿ ಮೇಲ್ದರ್ಜೆಗೇರಿಸಿರುವ ಗ್ರಾಮ ಪಂಚಾಯಿತಿಗಳಾವುವು; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

ಆ) ಪೌರಾಡಳಿತ ಇಲಾಖೆಯಿಂದ ಸದರಿ ಪಟ್ಟಣ ಪಂಚಾಯಿತಿಗಳಿಗೆ ಒದಗಿಸಿರುವ ಸಿಬ್ಬಂದಿಗಳೆಷ್ಟು; (ಹುದ್ದೆವಾರು ಹಾಗೂ ಪಂಚಾಯಿತಿವಾರು ವಿವರ ನೀಡುವುದು)

ಇ) ಕಳೆದ ಮೂರು ವರ್ಷಗಳಲ್ಲಿ ಈ ಮೂರು ಜಿಲ್ಲೆಗಳ ವ್ಯಾಪ್ತಿಯ ಪಟ್ಟಣ ಪಂಚಾಯಿತಿಗಳಿಗೆ ಒದಗಿಸಿರುವ ಅನುದಾನ ಎಷ್ಟು? (ಪಂಚಾಯಿತಿವಾರು ಸಂಪೂರ್ಣ ವಿವರ ನೀಡುವುದು)

## ೬ನೇ ವೇತನ ಆಯೋಗದ ವರದಿ ಜಾರಿಗೊಳಿಸುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ ) –**

೩೪೩೫ (೩೮೬೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯ ಸರ್ಕಾರಿ ನೌಕರರಿಗೆ ವೇತನ ತಾರತಮ್ಯ ಸಂಬಂಧ ವೇತನ ಆಯೋಗವನ್ನು ರಚಿಸಲಾಗಿದೆಯೇ; (ವಿವರ ನೀಡುವುದು)

ಆ) ಕೇಂದ್ರ ಸರ್ಕಾರಿ ನೌಕರರಿಗೂ ರಾಜ್ಯ ಸರ್ಕಾರಿ ನೌಕರರಿಗೂ ವೇತನದಲ್ಲಿ ಎಷ್ಟು ವ್ಯತ್ಯಾಸವಾಗಿದೆ; (ವಿವರ ನೀಡುವುದು)

ಇ) ವೇತನ ತಾರತಮ್ಯ ಸಂಬಂಧ ರಚಿಸಲಾಗಿರುವ ವೇತನ ಆಯೋಗಕ್ಕೆ ವರದಿ ನೀಡಲು ಸರ್ಕಾರವು ಸಮಯ ನಿಗಧಿಪಡಿಸಲಾಗಿದೆಯೇ; (ವಿವರ ನೀಡುವುದು)

ಈ) ರಾಜ್ಯ ಸರ್ಕಾರವು ವೇತನ ಆಯೋಗದಿಂದ ವರದಿ ಪಡೆದು ಜಾರಿಗೊಳಿಸಲು ತೀರ್ಮಾನಿಸಿದೆಯೇ; (ವಿವರ ನೀಡುವುದು)

ಉ) ಯಾವ ಕಾಲಮಿತಿಯೊಳಗೆ ಆಯೋಗದ ವರದಿಯನ್ನು ಜಾರಿಗೊಳಿಸಲಾಗುತ್ತದೆ? (ವಿವರ ನೀಡುವುದು)

## ಸಂಚಾರಿ ನಿಯಮಗಳಿಗೋಸ್ಕರ ಕೈಗೊಂಡ ಕಾಮಗಾರಿಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೩೬ (೩೮೫೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೀದರ್ ನಗರ ಸಂಚಾರಿ ನಿಯಮಗಳಿಗೋಸ್ಕರ ಪೊಲೀಸ್ ಇಲಾಖೆಯು ಯಾವ ಯಾವ ಇತರೆ ಇಲಾಖೆಗಳಿಂದ ವಿವಿಧ ಲೆಕ್ಕಶೀರ್ಷಿಕೆಯಡಿಯಲ್ಲಿ ಕಳೆದ ಮೂರು ವರ್ಷಗಳಿಂದ ಅನುದಾನವನ್ನು ಪಡೆದಿದೆ; (ವರ್ಷಾವಾರು, ಇಲಾಖೆವಾರು ಸಂಪೂರ್ಣ ವಿವರ ನೀಡುವುದು)

ಆ) ಪಡೆದಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ? (ಕೈಗೊಂಡ ಕಾಮಗಾರಿಗಳ ವಿವರ, ವ್ಯಯವಾಗಿರುವ ಹಣವೆಷ್ಟು ಮತ್ತು ಗುತ್ತಿಗೆದಾರರ ಸಂಪೂರ್ಣ ವಿವರ ನೀಡುವುದು)

## ಕಸ ವಿಲೇವಾರಿ ಘಟಕದಿಂದ ಸುತ್ತಲಿನ ಜನರ ಮೇಲೆ ದುಷ್ಪರಿಣಾಮದ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೩೭ (೩೮೫೨) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೀದರ್ ನಗರದ ನಗರಸಭೆ ವ್ಯಾಪ್ತಿಯಲ್ಲಿ ಘನತ್ಯಾಜ್ಯ ವಿಲೇವಾರಿ ಘಟಕವನ್ನು ಸ್ಥಾಪಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಕಸ ವಿಲೇವಾರಿ ಘಟಕದಿಂದ ಸುತ್ತಮುತ್ತಲಿನ ಜನರ ಮೇಲೆ ದುಷ್ಪರಿಣಾಮ ಬೀರುತ್ತಿರುವುದು ನಿಜವಲ್ಲವೇ; ಈ ದುಷ್ಪರಿಣಾಮವನ್ನು ತಡೆಗಟ್ಟಲು ಕೈಗೊಂಡ ಕ್ರಮಗಳಾವುವು ; (ಸಂಪೂರ್ಣ ಮಾಹಿತಿ ನೀಡುವುದು)

ಇ) ಈ ಕಸ ವಿಲೇವಾರಿ ಯಂತ್ರವನ್ನು ಯಾವ ವರ್ಷ ಎಷ್ಟು ವೆಚ್ಚದಲ್ಲಿ ಖರೀದಿಸಲಾಗಿದೆ; ಯಾವ ಕಂಪನಿಯಿಂದ ಈ ಯಂತ್ರವನ್ನು ಖರೀದಿಸಲಾಗಿದೆ; (ಸ್ಪಷ್ಟ ಮಾಹಿತಿ ಒದಗಿಸುವುದು)

ಈ) ಈ ಯಂತ್ರವನ್ನು ಖರೀದಿಸುವಾಗ Tender ನಿಯಮಗಳನ್ನು (K.T.P.P. Act) ಪಾಲಿಸಲಾಗಿದೆಯೇ; ಹಾಗಿದ್ದಲ್ಲಿ, ಯಾವ ಯಾವ ಕಂಪನಿಗಳು/ ಸಂಸ್ಥೆಗಳು Tender ನಲ್ಲಿ ಭಾಗಿಯಾಗಿರುತ್ತವೆ; (ಸಂಪೂರ್ಣ ವಿವರ ನೀಡುವುದು)

ಉ) ಈ ಯಂತ್ರದಿಂದ ಪ್ರತಿನಿತ್ಯ ಎಷ್ಟು ಘನ ತ್ಯಾಜ್ಯವನ್ನು ನಿರ್ವಹಿಸಲಾಗುತ್ತಿದೆ ; (ಮಾಹಿತಿ ನೀಡುವುದು)

ಊ) ಈ ಯಂತ್ರವು ಪ್ರತಿನಿತ್ಯ ಎಷ್ಟು ಟನ್ ಗೊಬ್ಬರ ತಯಾರಿಸುತ್ತಿದೆ ಹಾಗೂ ಇಲ್ಲಿಯವರೆಗೂ ಎಷ್ಟು ಟನ್ ತಯಾರಿಸಲಾಗಿದೆ; ತಯಾರಿಸಿದ ಗೊಬ್ಬರವನ್ನು ಯಾವ ಉದ್ದೇಶಕ್ಕೆ ಬಳಸಿಕೊಳ್ಳಲಾಗಿದೆ? (ಸ್ಪಷ್ಟ ಮಾಹಿತಿ ನೀಡುವುದು)

## ಗುಪ್ತ ವಾರ್ತೆ ಇಲಾಖೆಯಲ್ಲಿ ಓ.ಓ.ಡಿ. ಆಧಾರದ ಮೇಲೆ ಕೆಲಸ ಮಾಡುತ್ತಿರುವವರ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

ಖಳಖಲ (ಖಲಜಳ) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಗುಪ್ತವಾರ್ತೆ ಇಲಾಖೆಯಲ್ಲಿ ಓ.ಓ.ಡಿ. ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ಪಿ.ಸಿ., ಡಬ್ಲ್ಯೂ.ಪಿ.ಸಿ., ಹೆಚ್.ಸಿ ಇತರೆ ನೌಕರರು ಸುಮಾರು ವರ್ಷಗಳಿಂದ ಒಂದೇ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸುಮಾರು ಸಿಬ್ಬಂದಿಗಳು ಬಡ್ತಿ ಹೊಂದಿ ಮತ್ತೇ ಅದೆ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ರೀತಿ ಓ.ಓ.ಡಿ. ಆಧಾರದ ಮೇಲೆ ಎಷ್ಟು ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ; (ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಇದಕ್ಕೆ ಅನುಸರಿಸಿರುವ ಮಾನದಂಡಗಳೇನು ಹಾಗೂ ಇಂತಹವರುಗಳ ಸೇವೆಯನ್ನು ಮೂಲ ಸ್ಥಳಕ್ಕೆ ಹಿಂತಿರುಗಿಸದೇ ಇರಲು ಕಾರಣಗಳೇನು?

**ಅನ್ಯ ಇಲಾಖೆಯವರನ್ನು ಮಾತೃ ಇಲಾಖೆಗೆ ಹಿಂದಿರುಗಿಸುವ ಬಗ್ಗೆ**

**ಶ್ರೀ ರಘುನಾಥ ರಾವ್ ಮುಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)**

ಃಳಝಃ (ಃಲಱಱ) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಪೌರಾಡಳಿತ ಇಲಾಖೆಯ Chief Office Grade-1 ಮತ್ತು Grade-2 ವೃಂದದಲ್ಲಿ ಹುದ್ದೆಗಳಲ್ಲಿ ಬೇರೆ ಬೇರೆ ಇಲಾಖೆಗಳಿಂದ ನಿಯೋಜನೆ ಮೇಲೆ ಬಂದು ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳ ಸಂಖ್ಯೆ ಎಷ್ಟು;

ಆ) ಇಲಾಖೆಯಲ್ಲಿ ಖಾಲಿ ಇರುವ C.O ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳಾವುವು;

ಇ) ಅನ್ಯ ಇಲಾಖೆಯಿಂದ ಬಂದು ಹಲವು ವರ್ಷಗಳಿಂದ ಒಂದೇ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳನ್ನು ಮಾತ್ರ ಇಲಾಖೆಗೆ ಹಿಂದಿರುಗಿಸಲು ಯಾವ ಕ್ರಮ ಕೈಗೊಳ್ಳಲಾಗುವುದು? (ವಿವರ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ವಸತಿ/ವಸತಿಯೇತರ ಪ್ರದೇಶ/ಕಟ್ಟಡಗಳು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೩೪೪೦ (೩೯೫೩) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ನಗರದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಗೆ ಸೇರಿದ ಪ್ರದೇಶದ ವಿಸ್ತೀರ್ಣವೆಷ್ಟು;

ಆ) ಈ ಪ್ರದೇಶದಲ್ಲಿ ಸರ್ಕಾರದ ಸಂಸ್ಥೆಗಳು ಮತ್ತು ಸರ್ಕಾರೇತರ ಸಂಸ್ಥೆಗಳು ವಸತಿ ಉದ್ದೇಶಕ್ಕಾಗಿ ನಿರ್ಮಾಣ ಮಾಡಿರುವ ಬಡಾವಣೆಗಳೆಷ್ಟು; ಅವು ಯಾವುವು;

ಇ) ಆ ಬಡಾವಣೆಗಳಲ್ಲಿ ವಸತಿ ಮತ್ತು ವಸತಿಯೇತರ ಉದ್ದೇಶಕ್ಕಾಗಿ ಮೀಸಲಿಡಲಾದ ನಿವೇಶನಗಳೆಷ್ಟು; (ನಿವೇಶನವಾರು ಮತ್ತು ಬಡಾವಣೆವಾರು ವಿವರ ನೀಡುವುದು)

ಈ) ನಿಯಮಗಳಿಗೆ ವಿರುದ್ಧವಾಗಿ ಕಟ್ಟಡಗಳನ್ನು (ವಸತಿ/ವಸತಿಯೇತರ) ನಿರ್ಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಎಷ್ಟು ಕಟ್ಟಡಗಳನ್ನು ಆ ರೀತಿ ನಿರ್ಮಿಸಲಾಗಿದೆ; ಇದುವರೆಗೆ ಎಷ್ಟು ಕಟ್ಟಡಗಳ ಮಾಲೀಕರ ವಿರುದ್ಧ ಸರ್ಕಾರ ಕ್ರಮಗಳನ್ನು ತೆಗೆದುಕೊಂಡಿದೆ? (ಬಡಾವಣೆವಾರು/ಮಾಲಿಕರ ಹೆಸರು, ವಿಳಾಸ ಸಮೇತ ವಿವರ ನೀಡುವುದು)

## ಇಂದಿರಾ ಕ್ಯಾಂಟೀನ್ ಮತ್ತು ಆಹಾರ ಪೂರೈಕೆ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೩೪೪೧ (೪೦೧೭) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೆಂಗಳೂರು ನಗರದಲ್ಲಿ ಎಷ್ಟು ಇಂದಿರಾ ಕ್ಯಾಂಟೀನ್‌ಗಳನ್ನು ತೆರೆಯಲಾಗಿದೆ; ಎಲ್ಲೆಲ್ಲಿ ತೆರೆಯಲಾಗಿದೆ; (ಪೂರ್ಣ ವಿವರ ನೀಡುವುದು)

ಆ) ನಾಗರಿಕರಿಗೆ ದಿನದ ಯಾವ ಸಮಯದಲ್ಲಿ, ಯಾವ ದರದಲ್ಲಿ, ಯಾವ ಯಾವ ಆಹಾರ ಪದಾರ್ಥಗಳನ್ನು ಪೂರೈಸಲಾಗುತ್ತಿದೆ; (ಕ್ಯಾಂಟೀನ್‌ವಾರು ವಿವರ ನೀಡುವುದು)

ಇ) ಇಂದಿರಾ ಕ್ಯಾಂಟೀನ್‌ಗಳನ್ನು ನಗರದ ಇತರೆ ಭಾಗಗಳಲ್ಲಿ ತೆರೆಯುವ ಉದ್ದೇಶವನ್ನು ಸರ್ಕಾರ ಹೊಂದಿದೆಯೇ; ಹಾಗಿದ್ದಲ್ಲಿ, ಯಾವ ಯಾವ ಸ್ಥಳಗಳಲ್ಲಿ ತೆರೆಯಲಾಗುವುದು ಹಾಗೂ ಯಾವಾಗ ಪ್ರಾರಂಭಿಸಲಾಗುವುದು?

## ವಿವಿಧ ಇಲಾಖೆಗಳಲ್ಲಿ ವಿವಿಧ ಶ್ರೇಣಿಯ ಹುದ್ದೆಗಳು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೩೪೪೨ (೩೭೮೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಯಾವ ಯಾವ ಇಲಾಖೆಗಳಲ್ಲಿ ಎಷ್ಟೆಷ್ಟು ಎ.ಬಿ.ಸಿ. ಮತ್ತು ಡಿ ವರ್ಗದ ಹುದ್ದೆಗಳನ್ನು ಸೃಜಿಸಲಾಗಿದೆ; ಆ ಹುದ್ದೆಗಳಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ೨ಎ, ೨ಬಿ, ಹಾಗೂ ಇನ್ನಿತರೆ ವರ್ಗಗಳಿಗೆ ಮೀಸಲಿಟ್ಟಿರುವ ಹುದ್ದೆಗಳು ಎಷ್ಟು; (ವರ್ಗವಾರು ವಿವರ ನೀಡುವುದು)

ಆ) ಆ ಪೈಕಿ ಖಾಲಿಯಿರುವ ಹುದ್ದೆಗಳೆಷ್ಟು; ಅವು ಯಾವುವು; (ವರ್ಗವಾರು ವಿವರ ನೀಡುವುದು)

ಇ) ಖಾಲಿಯಿರುವ ಹುದ್ದೆಗಳನ್ನು ತುಂಬಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

## ಮಾನ್ಯತಾ ಟೆಕ್ ಪಾರ್ಕ್ ಆವರಣದ ನಿವಾಸಿಗಳಿಗೆ ಉಂಟಾಗುತ್ತಿರುವ ಸಂಚಾರ ಸಮಸ್ಯೆ ಹಾಗೂ ವಾಯುಮಾಲಿನ್ಯ ಕುರಿತು

**ಶ್ರೀ ರಾಮಚಂದ್ರ ಗೌಡ (ಪದವೀಧರರ ಕ್ಷೇತ್ರ) –**

೩೪೪೪ (೩೮೪೨) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಾನ್ಯತಾ ಟೆಕ್ ಪಾರ್ಕ್‌ನಲ್ಲಿರುವ ಉದ್ಯೋಗಿಗಳ ಹಾಗೂ ಸಾರ್ವಜನಿಕರ ಸಂಚಾರಕ್ಕೆ ಪ್ರತ್ಯೇಕ ಮಾರ್ಗ ಕಲ್ಪಿಸುವಂತೆ ಆಗ್ರಹಿಸಿ ಅಲ್ಲಿನ ನಿವಾಸಿಗಳು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಬೇಡಿಕೆ ಸಲ್ಲಿಸಿರುವುದು ನಿಜವೇ; (ವಿವರ ನೀಡುವುದು)

(ಆ) ಸದರಿ ಟೆಕ್ ಪಾರ್ಕ್ ಆವರಣದಲ್ಲಿ ನೆಲಸಿರುವ ಸುಮಾರು ೪೦೦ ಕುಟುಂಬಗಳು, ಅಲ್ಲಿನ ಕಂಪನಿಯ ಉದ್ಯೋಗಿಗಳು ಹಾಗೂ ಸಾರ್ವಜನಿಕರ ವಾಹನಗಳ ಸಂಚಾರಕ್ಕೆ ಒಂದೇ ಪ್ರವೇಶ ದ್ವಾರದ ವ್ಯವಸ್ಥೆ ಕಲ್ಪಿಸಲಾಗಿದ್ದು, ಮಾನ್ಯತಾ ಟೆಕ್ ಪಾರ್ಕ್ ನಿಂದ ಹಾದು ಹೆಬ್ಬಾಳ ರಸ್ತೆಗೆ ತೆರಳುವ ಮಾರ್ಗದ ಬಲ ತಿರುವು ನಿರ್ಬಂಧಿಸಿದ್ದು, ಇದರಿಂದಾಗಿ, ಎಲ್ಲಾ ವಾಹನಗಳು ಟೆಕ್ ಪಾರ್ಕ್‌ನ ಜನವಸತಿ ಪ್ರದೇಶದ ಕಡೆಯಿಂದ ನಾಗವಾರ ಕಡೆಗೆ ತೆರಳುತ್ತಿರುವುದರಿಂದ ಸಂಚಾರ ಸಮಸ್ಯೆ ಹಾಗೂ ವಾಯು ಮಾಲಿನ್ಯ ಸಮಸ್ಯೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಸದರಿ ಸಮಸ್ಯೆಯನ್ನು ಪರಿಹರಿಸಲು ಯಾವ ರೀತಿಯ ತುರ್ತು ಕ್ರಮ ಕೈಗೊಳ್ಳಲಾಗುವುದು? (ವಿವರ ನೀಡುವುದು)

## ಬೆಂಗಳೂರು ನಗರದ “ನಮ್ಮ ಮೆಟ್ರೋ” ಕಾಮಗಾರಿಗಳ ವಿಳಂಬದ ಬಗ್ಗೆ

**ಶ್ರೀ ರಾಮಚಂದ್ರ ಗೌಡ (ಪದವೀಧರರ ಕ್ಷೇತ್ರ) –**

೩೪೪೫ (೩೮೪೧) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು/ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಯಾವ ಯಾವ ಮೆಟ್ರೋ ಕಾಮಗಾರಿಗಳು ನಿಗಧಿತ ಅವಧಿಯೊಳಗೆ ಮುಕ್ತಾಯಗೊಳ್ಳದೆ ವಿಳಂಬವಾಗಿರುವುದಕ್ಕೆ ಕಾರಣಗಳೇನು;

(ಆ) ಪ್ರಸ್ತುತ ನಿಗದಿತ ಕಾಲಾವಧಿಯೊಳಗೆ ಎಷ್ಟು ಪ್ರಮಾಣದ ಕಾಮಗಾರಿ ಪೂರ್ಣಗೊಂಡಿದೆ; ಕಾಮಗಾರಿವಾರು ವಿವರ ನೀಡುವುದು;

(ಇ) ಕಾಮಗಾರಿಗಳು ವಿಳಂಬವಾಗಲು ಪ್ರಮುಖ ಕಾರಣಗಳೇನು; ವಿಳಂಬವಾಗಿರುವ ಕಾಮಗಾರಿಗಳನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು?

## ಮಾರಣಾಂತಿಕ ರಸ್ತೆ ಗುಂಡಿಗಳು

**ಶ್ರೀ ರಾಮಚಂದ್ರ ಗೌಡ (ಪದವೀಧರರ ಕ್ಷೇತ್ರ) –**

೩೪೪೬ (೩೯೪೪) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಇತ್ತೀಚೆಗೆ ಬೆಂಗಳೂರು ನಗರದಲ್ಲಿ ಬಿದ್ದ ಭಾರಿ ಮಳೆಯಿಂದಾಗಿ ಹಾಗೂ ಇನ್ನಿತರ ಕಾರಣಗಳಿಂದಾಗಿ ಮಾರಣಾಂತಿಕ ರಸ್ತೆ ಗುಂಡಿಗಳು ನಿರ್ಮಾಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ವಿವರ ನೀಡುವುದು;

ಆ) ಸದರಿ ಗುಂಡಿಗಳನ್ನು ಮುಚ್ಚಲು ಸೆಪ್ಟೆಂಬರ್ ೨೦೧೭ ರಿಂದ ಯಾವ ರೀತಿಯ ತುರ್ತು ಕ್ರಮ ಕೈಗೊಳ್ಳಲಾಗಿದೆ;

ಇ) ಇದಕ್ಕಾಗಿ ಬಿಡುಗಡೆಯಾದ ಹಣವೆಷ್ಟು; ವಿನಿಯೋಗಿಸಿದ ಹಣವೆಷ್ಟು; ಎಷ್ಟು ಪ್ರಮಾಣದ ರಸ್ತೆ ಗುಂಡಿಗಳನ್ನು ಮುಚ್ಚಲಾಗಿದೆ; (ವಿವರ ನೀಡುವುದು)

ಈ) ರಸ್ತೆ ಗುಂಡಿಗಳನ್ನು ಮುಚ್ಚುವಲ್ಲಿ ಎಷ್ಟು ಪ್ರಮಾಣದ ಕಾಮಗಾರಿ ಬಾಕಿ ಉಳಿದಿದೆ? (ವಿವರ ನೀಡುವುದು)

## ವಿವಿಧ ಯೋಜನೆಗಳ ಅನುಷ್ಠಾನ

**ಶ್ರೀ ರಾಮಚಂದ್ರ ಗೌಡ (ಪದವೀಧರರ ಕ್ಷೇತ್ರ) –**

೩೪೪೭ (೩೯೪೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯ ಸರ್ಕಾರ ಘೋಷಿಸಿದ ವಿವಿಧ ಯೋಜನೆಗಳನ್ನು ಅನುಷ್ಠಾನಕ್ಕೆ ತರುವಲ್ಲಿ ಸೂಕ್ತ ಅನುದಾನ ಬಿಡುಗಡೆ ಮಾಡಲು ಹಣದ ಕೊರತೆ ಎದುರಿಸುತ್ತಿರುವುದು ನಿಜವೇ; (ವಿವರ ನೀಡುವುದು)

ಆ) ವಿವಿಧ ಯೋಜನೆಗಳಿಗೆ ಅನುದಾನ ಬಿಡುಗಡೆ ಮಾಡುವ ಸಲುವಾಗಿ, ವಿವಿಧ ಇಲಾಖೆಗಳ ಠೇವಣಿ ಹಣವನ್ನು ಅವಧಿ ಪೂರ್ವದಲ್ಲಿ ಹಿಂಪಡೆಯುವುದು ಹಾಗೂ ವಿವಿಧ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಲ್ಲಿನ ಹೂಡಿಕೆ ಹೆಚ್ಚುವರಿ ಮೊತ್ತವನ್ನು (ಇನ್ವೆಸ್ಟೆಬಲ್ ಸರ್ಪ್ಲಸ್) ಉಪಯೋಗಿಸಲು ಸರ್ಕಾರ ಮುಂದಾಗಿರುವುದು ನಿಜವೇ? (ವಿವರ ನೀಡುವುದು)

## ಮದ್ಯದ ಅಂಗಡಿಗಳಿಗೆ ಅನುಮತಿ ನೀಡುವ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೩೪೪೮ (೩೭೯೪) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರವು ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗೆ ಹೊಂದಿಕೊಂಡಿರುವ ಎಷ್ಟು ಬಾರ್ ಅಂಡ್ ರೆಸ್ಟೋರೆಂಟ್‌ಗಳಿಗೆ ೨೦೧೭–೧೮ನೇ ಸಾಲಿನಲ್ಲಿ ಅನುಮತಿ ನೀಡಿರುತ್ತದೆ; ಸುಪ್ರೀಂ ಕೋರ್ಟ್ ಆದೇಶಕ್ಕೆ ಅನುಗುಣವಾಗಿ ನಗರ ಮತ್ತು ಪಟ್ಟಣ ಪ್ರದೇಶಗಳಿಗೆ ಹೊಂದಿಕೊಂಡಿರುವ ಎಷ್ಟು ಮದ್ಯದ ಅಂಗಡಿಗಳಿಗೆ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಯಲ್ಲಿ ಮುಂದುವರೆಯಲು ರಾಜ್ಯ ಸರ್ಕಾರ ಅನುಮತಿ ನೀಡಿರುತ್ತದೆ;

(ಆ) ಕಳೆದ ೨ ವರ್ಷಗಳಲ್ಲಿ ರಾಜ್ಯ ಸರ್ಕಾರವು ಪ್ರವಾಸೋದ್ಯಮ ಇಲಾಖೆಯ ಯೋಜನೆಗಳ ಅಡಿಯಲ್ಲಿ ಎಷ್ಟು ಮದ್ಯದ ಅಂಗಡಿಗಳಿಗೆ ರಾಜ್ಯದಲ್ಲಿ ಅನುಮತಿಯನ್ನು ನೀಡಿರುತ್ತದೆ; (ವಿವರ ನೀಡುವುದು)

(ಇ) ತುಮಕೂರು ಜಿಲ್ಲೆಯ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಎಷ್ಟು ಮದ್ಯದ ಅಂಗಡಿಗಳಿಗೆ ಅಬಕಾರಿ ಇಲಾಖೆಯು ಅನುಮತಿಯನ್ನು ನೀಡಿರುತ್ತದೆ; (ವಿವರಗಳನ್ನು ನೀಡುವುದು) ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಮದ್ಯದ ಅಂಗಡಿಗಳ ಮುಖಾಂತರ ಅಬಕಾರಿ ಇಲಾಖೆಗೆ ಎಷ್ಟು ಆದಾಯ ಬಂದಿರುತ್ತದೆ;

(ಈ) ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ, ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಯಲ್ಲಿ ಹೊಂದಿಕೊಂಡಿರುವಂತೆ ಎಷ್ಟು ಮದ್ಯದ ಅಂಗಡಿಗಳಿಗೆ ರಾಜ್ಯ ಸರ್ಕಾರ

ಅನುಮತಿ/ಲೈಸೆನ್ಸ್ ನೀಡಿರುತ್ತದೆ; ಇವುಗಳ ವಿವರಗಳನ್ನು ನೀಡುವುದು ಮತ್ತು ಸದರಿ ಜಿಲ್ಲೆಗಳಲ್ಲಿ ಲೈಸೆನ್ಸ್ ಕೋರಿ ಎಷ್ಟು ಅರ್ಜಿಗಳು ಬಂದಿರುತ್ತವೆ? (ಜಿಲ್ಲಾವಾರು ವಿವರ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕಾಮಗಾರಿ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೩೪೪೯ (೩೭೯೨) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ೨೦೧೫–೧೬ ಹಾಗೂ ೨೦೧೬–೧೭ರಲ್ಲಿ ಎಷ್ಟು ಟೆಂಡರ್ ಶ್ಯೂರ್ ಕಾಮಗಾರಿಗಳನ್ನು ಕೈಗೊಂಡಿರುತ್ತದೆ; ಅವುಗಳಿಗೆ ಬಿಡುಗಡೆ ಮಾಡಿರುವ ಹಣವೆಷ್ಟು; (ವಿವರವಾದ ಮಾಹಿತಿಯನ್ನು ನೀಡುವುದು)

ಆ) ೧೫ನೇ ಆಗಸ್ಟ್, ೨೦೧೭ರಿಂದ ಬೆಂಗಳೂರಿನಲ್ಲಿ ಸುರಿದ ಮಳೆಗೆ ಎಷ್ಟು ಟೆಂಡರ್ ಶ್ಯೂರ್ ರಸ್ತೆಗಳು ಹಾಳಾಗಿರುತ್ತವೆ; ಇವುಗಳ ದುರಸ್ಥಿಗೆ ಏನು ಕ್ರಮ ಕೈಗೊಳ್ಳಲಾಗಿದೆ;

ಇ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ಜೆ.ಪಿ ನಗರದ ೪ನೇ ಹಂತದ ಡಾಲರ್ಸ್ ಕಾಲೋನಿಯಲ್ಲಿ ವಾರ್ಡ್ ಕಾಮಗಾರಿಯ ಹೆಸರಿನಲ್ಲಿ ನೀಡಿರುವ ಮೊತ್ತವೆಷ್ಟು; ಸದರಿ ಕಾಮಗಾರಿಯ ವಿಫಲತೆಯಿಂದ ದಿನಾಂಕ:೧೫.೦೮.೨೦೧೭ರಂದು ಮನೆಗಳಿಗೆ ನೀರು ನುಗ್ಗಿ ಸ್ಥಳೀಯರಿಗೆ ನಷ್ಟವಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ; ಸದರಿ ಕಾಮಗಾರಿಯ ವೈಫಲ್ಯದ ಕಾರಣಕ್ಕಾಗಿ ಇಲ್ಲಿನ ಇಂಜಿನೀಯರ್ ಮತ್ತು ಗುತ್ತಿಗೆದಾರರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ;

ಈ) ಜೆ.ಪಿ ನಗರದ ಡಾಲರ್ಸ್ ಕಾಲೋನಿಯ ೯ನೇ ಮುಖ್ಯ ರಸ್ತೆಯಿಂದ ಬನ್ನೇರುಘಟ್ಟ ರಸ್ತೆಗೆ ಹೋಗುವ ಮಾರ್ಗದಲ್ಲಿ ಖಾಸಗಿಯವರು ಕಾಲುವೆ/ಮೋರಿಯ ಮೇಲೆ ವಾಹನ ನಿಲುಗಡೆ ವ್ಯವಸ್ಥೆ ಮಾಡಿ ನೀರು ಹರಿಯಲು ಅಡ್ಡಿ ಉಂಟು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದನ್ನು ತೆರವುಗೊಳಿಸಲು ಹಾಗೂ ಇವರ ಮೇಲೆ ಕ್ರಿಮಿನಲ್ ಮೊಕದ್ದಮೆ ಹೂಡಲು ಸರ್ಕಾರ ಏನು ಕ್ರಮ ಕೈಗೊಂಡಿದೆ;

ಉ) ಜೆ.ಪಿ. ನಗರದ ಡಾಲರ್ಸ್ ಕಾಲೋನಿಯ ೯ನೇ ಮುಖ್ಯ ರಸ್ತೆಯಿಂದ ಬನ್ನೇರುಘಟ್ಟ ರಸ್ತೆಗೆ ಹೋಗುವ ಮಾರ್ಗದಲ್ಲಿ ಸ್ಯಾನಿಟರಿ ಪೈಪ್‌ಲೈನ್ ಮುಚ್ಚಿ ಹೋಗಿದ್ದು, ಸದರಿ ಪೈಪ್‌ಲೈನನ್ನು ಹೊಸದಾಗಿ ನಿರ್ಮಿಸಲು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (B.W.S.S.B) ಏನು ಕ್ರಮ ಕೈಗೊಂಡಿರುತ್ತದೆ?

## ತೆರಿಗೆ ಸಂಗ್ರಹ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೩೪೩೦ (೩೭೯೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಕೇಂದ್ರ ಸರ್ಕಾರದ ಜಿ.ಎಸ್.ಟಿ. ತೆರಿಗೆ ಸಂಗ್ರಹ ಯೋಜನೆ ಜಾರಿಗೆ ಬಂದ ನಂತರ ಕರ್ನಾಟಕದಲ್ಲಿ ವಾಣಿಜ್ಯ ತೆರಿಗೆ, ಮೋಟಾರು ತೆರಿಗೆ ಹಾಗೂ ಅಬಕಾರಿ ತೆರಿಗೆಯಲ್ಲಿ ಕುಸಿತ ಉಂಟಾಗಿರುತ್ತದೆಯೇ; ಹಾಗಿದ್ದಲ್ಲಿ, ಪ್ರಸಕ್ತ ಆರ್ಥಿಕ ವರ್ಷದಲ್ಲಿ ರಾಜ್ಯ ಸರ್ಕಾರಕ್ಕೆ ಎಷ್ಟು ಪ್ರಮಾಣದ ತೆರಿಗೆ ಕುಸಿತ ಆಗಿರುತ್ತದೆ;

ಆ) ರಾಜ್ಯದ ವಾಣಿಜ್ಯ ತೆರಿಗೆ ಇಲಾಖೆಗೆ ಮಂಜೂರಾಗಿರುವ ಒಟ್ಟು ಸಿಬ್ಬಂದಿ ಎಷ್ಟು; ಸಿಬ್ಬಂದಿ ಕೊರತೆ ಹಾಗೂ ವಾಹನಗಳಿಗೆ ಕೊರತೆಯಿಂದ ವಾಣಿಜ್ಯ ಇಲಾಖೆಯ ತೆರಿಗೆ ಸಂಗ್ರಹಕ್ಕೆ ತೊಂದರೆ ಆಗಿದೆಯೇ; ಜಿ.ಎಸ್.ಟಿ. ಜಾರಿಗೆ ಬಂದ ನಂತರ ವಾಣಿಜ್ಯ ತೆರಿಗೆ ಇಲಾಖೆಯಲ್ಲಿ ಇರುವ ಅಧಿಕಾರಿಗಳಿಗೆ ಸೂಕ್ತ ಪ್ರಮಾಣದಲ್ಲಿ ಕಾರ್ಯ ಹಂಚಿಕೆ ಮಾಡಲಾಗಿದೆಯೇ; ಇಲಾಖೆಗೆ ಜಿ.ಎಸ್.ಟಿ ಜಾರಿಗೆ ಬಂದಿರುವುದರಿಂದ ಪೂರ್ಣ ಪ್ರಮಾಣದ ಸಿಬ್ಬಂದಿ ಅವಶ್ಯಕತೆ ಇರುತ್ತದೆಯೇ;

ಇ) ಪ್ರಸಕ್ತ ಸಾಲಿನಲ್ಲಿ ಇಲ್ಲಿಯವರೆಗೆ ರಾಜ್ಯ ಸರ್ಕಾರಕ್ಕೆ ಎಷ್ಟು ಪ್ರಮಾಣದ ಅಬಕಾರಿ ತೆರಿಗೆ ಸಂಗ್ರಹವಾಗಿರುತ್ತದೆ; ರಾಜ್ಯ ಸರ್ಕಾರವು ಪೆಟ್ರೋಲಿಯಂ ಉತ್ಪನ್ನಗಳ ಮೇಲೆ ಸೆಸ್ ಕಡಿಮೆಗೊಳಿಸುವ ಉದ್ದೇಶವನ್ನು ಹೊಂದಿರುತ್ತದೆಯೇ;

ಈ) ಗುಡಿ ಕೈಗಾರಿಕೆಯ ಉತ್ಪನ್ನಗಳಿಗೆ, ಕುಶಲ ಕರ್ಮಿಗಳು ತಯಾರಿಸಿದ ಉತ್ಪನ್ನಗಳಗೆ ಹಾಗೂ ಖಾದಿ ಉತ್ಪನ್ನಗಳಿಗೆ ಜಿ.ಎಸ್.ಟಿ ಯಲ್ಲಿ ತೆರಿಗೆ ವಿನಾಯಿತಿ ಇಲ್ಲದೇ ಇರುವುದರಿಂದ ರಾಜ್ಯ ಸರ್ಕಾರವು ಇವರಿಗೆ ಉತ್ತೇಜನದ ರೂಪದಲ್ಲಿ ತೆರಿಗೆ ಹಿಂಪಾವತಿ ಮಾಡುವ ಯೋಜನೆಯನ್ನು ಜಾರಿಗೊಳಿಸುವುದೇ?

## ನಗರಾಭಿವೃದ್ಧಿ ಸಂಸ್ಥೆಗಳ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೩೪೫೧ (೩೭೯೩) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಕಳೆದ ೨ ವರ್ಷಗಳಲ್ಲಿ ಕರ್ನಾಟಕ ಸಮಗ್ರ ಮತ್ತು ನಗರ ಜಲ ನಿರ್ವಹಣೆ ಬಂಡವಾಳ ಹೂಡಿಕೆ ಯೋಜನೆ ಅಡಿಯಲ್ಲಿ ರಾಜ್ಯದ ಎಷ್ಟು ಪಟ್ಟಣಗಳಲ್ಲಿ ನೀರು ಸರಬರಾಜು ಮತ್ತು ಒಳ ಚರಂಡಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಇವುಗಳಿಗೆ ಬಿಡುಗಡೆಯಾಗಿರುವ ಹಣ ಎಷ್ಟು; ಎಷ್ಟು ಕಾಮಗಾರಿಗಳು ಪೂರ್ಣಗೊಂಡಿರುತ್ತವೆ ಮತ್ತು ಎಷ್ಟು ಬಾಕಿಯಿರುತ್ತವೆ;

ಆ) ಸ್ಮಾರ್ಟ್ ಸಿಟಿ ಅಭಿಯಾನದ ಅಡಿಯಲ್ಲಿ ಕರ್ನಾಟಕ ನಗರ ಮೂಲಭೂತ ಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮದ ವತಿಯಿಂದ ತುಮಕೂರು ಮತ್ತು ದಾವಣಗೆರೆ ನಗರಗಳಿಗೆ ಎಷ್ಟು ಕಾಮಗಾರಿ ನೀಡಲಾಗಿರುತ್ತದೆ; ಇಲ್ಲಿಯವರೆಗೆ ಎಷ್ಟು ಹಣ ಬಿಡುಗಡೆ ಆಗಿರುತ್ತದೆ; ಬಾಕಿ ಇರುವ ಕಾಮಗಾರಿಗಳು ಎಷ್ಟು;

ಇ) ರಾಜ್ಯದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರಗಳ ಮೂಲಕ ಇಲ್ಲಿಯವರೆಗೆ ಎಷ್ಟು ನಾಗರಿಕರಿಗೆ ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ; ನಿವೇಶನ ಕೋರಿ ಬಾಕಿ ಇರುವ ಅರ್ಜಿಗಳು ಎಷ್ಟು;

ಈ) ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರದ ಮೂಲಕ ಎಷ್ಟು ನಾಗರಿಕರಿಗೆ ನಿವೇಶನಗಳನ್ನು ಹಂಚಲಾಗಿದೆ; ನಿವೇಶನ ಕೋರಿ ಬಾಕಿ ಇರುವ ಅರ್ಜಿಗಳೆಷ್ಟು; ನಿವೇಶನ ಹಂಚಿಕೆಗೆ ಸದರಿ ಪ್ರಾಧಿಕಾರ ಪ್ರಸ್ತುತ ಎಷ್ಟು ಯೋಜನೆಗಳನ್ನು ಕೈಗೆತ್ತಿಕೊಂಡಿರುತ್ತದೆ; ತುಮಕೂರು ನಗರದಲ್ಲಿ ನಿವೇಶನಗಳಿಗೆ ಇರುವ ಬೇಡಿಕೆ ಎಷ್ಟು;

ಉ) ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಮೂಲ ಸೌಕರ್ಯ ಒದಗಿಸಲು ಎಷ್ಟು ಕಾಮಗಾರಿಗಳನ್ನು ಕಳೆದ ೨ ವರ್ಷಗಳಲ್ಲಿ ಕೈಗೊಳ್ಳಲಾಗಿದೆ; ಇದಕ್ಕೆ ಬಿಡುಗಡೆ ಮಾಡಿರುವ ಹಣವೆಷ್ಟು?

## ಅಗ್ನಿಶಾಮಕ ಕೇಂದ್ರಗಳ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೩೪೫೨ (೩೭೯೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದಲ್ಲಿರುವ ಅಗ್ನಿಶಾಮಕ ಕೇಂದ್ರಗಳ ಸಂಖ್ಯೆ ಎಷ್ಟು; ಬೆಂಗಳೂರು ನಗರ ಜಿಲ್ಲೆಯಲ್ಲಿರುವ ಅಗ್ನಿ ಶಾಮಕ ಕೇಂದ್ರಗಳ ಸಂಖ್ಯೆ ಎಷ್ಟು; ಅಲ್ಲಿ ಕಾರ್ಯನಿರ್ವಹಿಸುತ್ತಿರುವ ಅಗ್ನಿ ಶಾಮಕ ವಾಹನಗಳು ಮತ್ತು ಅಗ್ನಿ ಶಾಮಕ ಸಿಬ್ಬಂದಿಗಳು ಎಷ್ಟು; ನಗರದಲ್ಲಿ ತುರ್ತು ಸಂದರ್ಭದಲ್ಲಿ ಈಗಿರುವ ಸಿಬ್ಬಂದಿಯ ಸಂಖ್ಯೆಯು ನಿರ್ವಹಣೆಗೆ ಸಾಕಾಗುತ್ತದೆಯೇ;

ಆ) ರಾಜ್ಯದ ಪೋಲೀಸ್ ಠಾಣೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಸಿಬ್ಬಂದಿಗಳಿಗೆ ಎಲ್ಲಾ ಠಾಣೆಗಳಲ್ಲಿ ಮಹಿಳಾ ಶೌಚಾಲಯಗಳನ್ನು ವ್ಯವಸ್ಥೆ ಮಾಡಲಾಗಿರುತ್ತದೆಯೇ; ಇಲ್ಲದೇ ಹೋದಲ್ಲಿ ಎಷ್ಟು ದಿನಗಳ ಒಳಗೆ ಶೌಚಾಲಯಗಳನ್ನು ಒದಗಿಸಲಾಗುವುದು;

ಇ) ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ತುರ್ತು ಸಂಖ್ಯೆ ೧೦೦ರ ಸೌಲಭ್ಯವನ್ನು ಒದಗಿಸಲಾಗಿದೆಯೇ; ಈ ಸೌಲಭ್ಯವನ್ನು ರಾಜ್ಯದ ಎಲ್ಲಾ ಪೋಲೀಸ್ ಠಾಣೆಗಳಿಗೆ ವಿಸ್ತರಿಸಲಾಗುವುದೇ;

ಈ) ರಾಜ್ಯದಲ್ಲಿ ಎಷ್ಟು ವಿಧಿವಿಜ್ಞಾನ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ; ಇವುಗಳಲ್ಲಿ ಪೂರ್ಣ ಪ್ರಮಾಣದ ಸಿಬ್ಬಂದಿ ಇರುತ್ತದೆಯೇ; ಖಾಲಿ ಇರುವ ವಿಧಿವಿಜ್ಞಾನ ಕೇಂದ್ರದ ಸಿಬ್ಬಂದಿಯನ್ನು ತುಂಬಲು ಸರ್ಕಾರ ಯಾವ ಪ್ರಯತ್ನವನ್ನು ಕೈಗೊಂಡಿರುತ್ತದೆ; ಪ್ರತಿ ಜಿಲ್ಲಾ ಕೇಂದ್ರಗಳಲ್ಲಿ ವಿಧಿವಿಜ್ಞಾನ ಕೇಂದ್ರಗಳನ್ನು ತೆರೆಯಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿರುತ್ತದೆ;

ಉ) ಗೃಹ ಇಲಾಖೆಯು ಪ್ರತಿ ತಾಲ್ಲೂಕು ಕೇಂದ್ರಗಳಲ್ಲಿ ಕಾರಾಗೃಹಗಳನ್ನು ತೆರೆಯಲು ಮತ್ತು ನಿರ್ವಹಣೆ ಮಾಡಲು ಯೋಜನೆಗಳನ್ನು ರೂಪಿಸಿರುತ್ತದೆಯೇ; ಪ್ರಸಕ್ತ ಸಾಲಿನಲ್ಲಿ ಎಷ್ಟು ಹೊಸ ಕಾರಾಗೃಹಗಳನ್ನು ತೆರೆಯಲಾಗಿದೆ;

ಊ) ರಾಜ್ಯದಲ್ಲಿರುವ ಹೋಂ ಗಾರ್ಡ್ಸ್‌ಗಳಿಗೆ ನೀಡುವ ದಿನಭತ್ಯೆಯನ್ನು ಹೆಚ್ಚಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

## ಪೊಲೀಸ್ ಠಾಣೆ ಸಿಬ್ಬಂದಿಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೫೩ (೩೮೨೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಗಳಲ್ಲಿರುವ ಆರಕ್ಷಕ ಠಾಣೆಗಳ ಸಂಖ್ಯೆ ಎಷ್ಟು;

ಆ) ಈ ಠಾಣೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು;

ಇ) ಸದರಿ ಠಾಣೆಗಳಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು;

ಈ) ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ? (ಮಾಹಿತಿಯನ್ನು ನೀಡುವುದು)

## ನಗರದಿಂದ ಅಂತರ ರಾಷ್ಟ್ರೀಯ ವಿಮಾನ ನಿಲ್ದಾಣದ ವರೆಗೆ ಮೆಟ್ರೊ ರೈಲು ಸಂಪರ್ಕ ಒದಗಿಸುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೫೪ (೩೮೨೧) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಬೆಂಗಳೂರು ನಗರದಿಂದ ಅಂತರ ರಾಷ್ಟ್ರೀಯ ವಿಮಾನ ನಿಲ್ದಾಣದವರೆವಿಗೂ ಮೆಟ್ರೊ ರೈಲು ಸಂಪರ್ಕವನ್ನು ಒದಗಿಸಲಾಗುವುದೇ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮಗಳಾವುವು? (ಸಂಪೂರ್ಣ ಮಾಹಿತಿಯನ್ನು ನೀಡುವುದು)

## ಮಾದಕ ವಸ್ತು ಕಳ್ಳ ಸಾಗಾಣಿಕೆ ತಡೆಗಟ್ಟುವ ಬಗ್ಗೆ

**ಶ್ರೀ ರಿಜ್ವಾನ್ ಅರ್ಷದ್ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೫೫ (೪೦೦೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ೨೦೧೮ನೇ ಸಾಲಿನಲ್ಲಿ ಈವರೆಗೆ ಮಾದಕವಸ್ತು ಕಳ್ಳ ಸಾಗಾಣಿಕೆ ಬಗ್ಗೆ ದಾಖಲಾಗಿರುವ ಪ್ರಕರಣಗಳೆಷ್ಟು; ಈ ಸಂಬಂಧ ಶಿಕ್ಷೆ ವಿಧಿಸಿರುವ ಪ್ರಕರಣಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

ಆ) ಇಂತಹ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಲು ವಿಶೇಷ ನ್ಯಾಯಾಲಯಗಳನ್ನು ತೆರೆಯಲಾಗಿದೆಯೇ; ಇಲ್ಲದಿದ್ದಲ್ಲಿ, ವಿಶೇಷ ನ್ಯಾಯಾಲಯಗಳನ್ನು ತೆರೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ; (ವಿವರ ನೀಡುವುದು)

ಇ) ಹೆಚ್ಚಾಗಿ ನಗರ ಪ್ರದೇಶ, ಯುವ ಸಮೂಹ ಸೇರುವ ಕಡೆ ಹಾಗೂ ಕಾಲೇಜುಗಳ ಹತ್ತಿರವೇ ತನ್ನ ಜಾಲವನ್ನು ಕೇಂದ್ರಿಕರಿಸಿಕೊಂಡಿರುವುದರಿಂದ ಅಪರಾಧವನ್ನು ತಡೆಗಟ್ಟಲು ಕೈಗೊಂಡಿರುವ ಸುಧಾರಣಾ ಕ್ರಮಗಳೇನು;

ಈ) ಅಪರಾಧ ಪ್ರಕರಣಗಳಲ್ಲಿ ಹೆಚ್ಚಾಗಿ ವಿದೇಶಿ ವಿದ್ಯಾರ್ಥಿಗಳು ಹಾಗೂ ವಿದೇಶ ಪ್ರಜೆಗಳು ತೊಡಗಿಸಿಕೊಂಡಿರುವುದು ವರದಿಯಾಗುತ್ತಿದ್ದು, ಈ ಬಗ್ಗೆ ಸರ್ಕಾರದ ಸ್ಪಷ್ಟ ಅಭಿಪ್ರಾಯವೇನು?

## ಮೆಟ್ರೋ ಮಾರ್ಗಗಳ ವಿಸ್ತರಣೆ ಮತ್ತು ಹೊಸ ಮಾರ್ಗಗಳ ಬಗ್ಗೆ

**ಶ್ರೀ ರಿಜ್ವಾನ್ ಅರ್ಷದ್ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೫೬ (೪೦೦೭) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಮ್ಮ ಮೆಟ್ರೋದ ಹಸಿರು ಮತ್ತು ನೇರಳೆ ಮಾರ್ಗಗಳು ಸಾರ್ವಜನಿಕ ಬಳಕೆಗೆ ಮುಕ್ತವಾಗಿದ್ದು, ಈ ಎರಡೂ ಮಾರ್ಗಗಳನ್ನು ಮುಂದೆ ವಿಸ್ತರಿಸಲು ಕ್ರಮ ಕೈಗೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ಯಾವ ಯಾವ ಮಾರ್ಗಗಳಲ್ಲಿ ಎಲ್ಲಿಯವರೆಗೆ ವಿಸ್ತರಿಸಲು ನಿರ್ಧರಿಸಲಾಗಿದೆ; ಯಾವ ಕಾಲಮಿತಿಯೊಳಗೆ ಸಾರ್ವಜನಿಕರಿಗೆ ಬಳಕೆ ಮಾಡಲು ತೀರ್ಮಾನಿಸಲಾಗಿದೆ;

(ಆ) ಹಸಿರು ಮತ್ತು ನೇರಳೆ ಮಾರ್ಗಗಳನ್ನು ಹೊರತುಪಡಿಸಿ ಬೇರೆ ಯಾವ ಯಾವ ಹೊಸ ಮಾರ್ಗಗಳನ್ನು ಗುರುತಿಸಲಾಗಿದೆ; ಅವುಗಳ ಈವರೆಗಿನ ಪ್ರಗತಿಯ ವಿವರ ನೀಡುವುದು ಹಾಗೂ ಯಾವ ಕಾಲಮಿತಿಯೊಳಗೆ ಸಾರ್ವಜನಿಕ ಸೇವೆಗೆ ಅವಕಾಶ ಕಲ್ಪಿಸಲಾಗುವುದು ;

(ಇ) ಈಗ ಎಷ್ಟು ಹಂತಗಳಲ್ಲಿ ಎಷ್ಟು ಕಿ.ಮೀ. ವ್ಯಾಪ್ತಿಯ ಮಾರ್ಗಗಳನ್ನು ನಿರ್ಮಾಣ ಮಾಡಲಾಗಿದೆ; ಮುಂದಿನ ಎಷ್ಟು ಹಂತಗಳಲ್ಲಿ ಎಷ್ಟು ಕಿ.ಮೀ. ವ್ಯಾಪ್ತಿಯ ಮಾರ್ಗಗಳ ನಿರ್ಮಾಣ ಗುರಿಯನ್ನು ಹೊಂದಲಾಗಿದೆ ;

(ಈ) ವೈಟ್‌ಫೀಲ್ಡ್ ಮತ್ತು ನಾಗವಾರ ಪ್ರದೇಶದಲ್ಲಿ ಸಂಚಾರ ದಟ್ಟಣೆ ಬಹಳವಾಗಿದ್ದು, ಈ ಪ್ರದೇಶಗಳಲ್ಲಿ ಮೆಟ್ರೋ ನಿರ್ಮಿಸಲು ಮೊದಲ ಆದ್ಯತೆ ಮೇಲೆ ಪರಿಗಣಿಸಬೇಕಿದ್ದು, ಸರ್ಕಾರ ತೆಗೆದುಕೊಂಡ ಕ್ರಮವೇನು? (ವಿವರ ನೀಡುವುದು)

## ಬೆಂಗಳೂರಿನ ರಾಜ ಕಾಲುವೆ ಒತ್ತುವರಿ ಬಗ್ಗೆ

**ಶ್ರೀ ಸೋಮಣ್ಣ ವಿ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೫೭ (೩೮೧೦) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರು ನಗರದಲ್ಲಿ ರಾಜಕಾಲುವೆ ಒತ್ತುವರಿ ತೆರವು ಕಾರ್ಯ ನಡೆಸಿದ ಒಟ್ಟು ಪ್ರಕರಣಗಳೆಷ್ಟು; ಬಾಕಿ ಉಳಿದಿರುವ ಪ್ರಕರಣಗಳೆಷ್ಟು; (ವಿವರ ನೀಡುವುದು)

ಆ) ನ್ಯಾಯಾಲಯದಲ್ಲಿರುವ ಪ್ರಕರಣಗಳನ್ನು ಬಿಟ್ಟು ಉಳಿದ ಪ್ರಕರಣಗಳಲ್ಲಿ ತೆರವು ಕಾರ್ಯಗಳನ್ನು ಮಾಡದಿರಲು ಕಾರಣಗಳೇನು;

ಇ) ಒತ್ತುವರಿ ತೆರವು ಕಾರ್ಯಗಳನ್ನು ನಿಲ್ಲಿಸಲು ಕಾರಣಗಳೇನು; ಇದೀಗ ಮಳೆಗಾಲ ಪ್ರಾರಂಭವಾಗಿದ್ದು ಒತ್ತುವರಿಯನ್ನು ತೆರವುಗೊಳಿಸದಿದ್ದರೆ ಆಗುವ ಪರಿಣಾಮಗಳ ಬಗ್ಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆಲೋಚಿಸಿದೆಯೇ; ಇದಕ್ಕೆ ತೆಗೆದುಕೊಳ್ಳುವ ಕ್ರಮಗಳೇನು? (ವಿವರ ನೀಡುವುದು)

## ಹುಬ್ಬಳ್ಳಿ–ಧಾರವಾಡ ಹಾಗೂ ಹಾವೇರಿ ಪಾಲಿಕೆಯ ಆಸ್ತಿಗಳ ಬಗ್ಗೆ

**ಶ್ರೀ ಸೋಮಣ್ಣ ವಿ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೫೮ (೩೮೦೫) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಹುಬ್ಬಳ್ಳಿ–ಧಾರವಾಡ, ಹಾಗೂ ಹಾವೇರಿ ಪಾಲಿಕೆಯ ಎಷ್ಟು ಆಸ್ತಿಗಳು ಪಾಲಿಕೆಯ ಮಾಲೀಕತ್ವದಲ್ಲಿವೆ; ಅವುಗಳು ಯಾವುವು; ಇವುಗಳಲ್ಲಿ ಎಷ್ಟು ಅತಿಕ್ರಮಣವಾಗಿದೆ; ಗುರುತಿಸಲ್ಪಟ್ಟಿರುವುದು ಯಾವುವು; (ಸಂಪೂರ್ಣ ವಿವರ ನೀಡುವುದು)

ಆ) ಶಾಲೆ ಹಾಗೂ ಉದ್ಯಾನವನಕ್ಕೆ ಮೀಸಲಿಟ್ಟ ಆಸ್ತಿಗಳು ಅತಿಕ್ರಮಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಪ್ರಕರಣಗಳ ಸಂಖ್ಯೆ ಎಷ್ಟು;

ಇ) ಈ ಪ್ರಕರಣಗಳಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು)

## ಲೋಕಾಯುಕ್ತ ಸಂಸ್ಥೆಯಿಂದ ಸರ್ಕಾರಿ ನೌಕರರ ಮೇಲೆ ದಾಳಿ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೫೯ (೩೮೧೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ೨೦೧೦ ನೇ ಸಾಲಿನಿಂದ ಇದುವರೆವಿಗೆ ಲೋಕಾಯುಕ್ತ ಸಂಸ್ಥೆಯವರು ರಾಜ್ಯದ ಎಷ್ಟು ಸರ್ಕಾರಿ ನೌಕರರ ಮೇಲೆ ದಾಳಿ ನಡೆಸಿರುತ್ತಾರೆ; (ಹೆಸರು, ವಿಳಾಸ ಸಹಿತ ವಿವರ ನೀಡುವುದು)

ಆ) ಲೋಕಾಯುಕ್ತ ದಾಳಿ ಸಂದರ್ಭದಲ್ಲಿ ಕಂಡು ಹಿಡಿದಿರುವ ಅಕ್ರಮ ಸಂಪತ್ತನ್ನು ವಶಪಡಿಸಿಕೊಳ್ಳಲಾಗಿದೆಯೇ; (ವಿವರ ನೀಡುವುದು)

ಇ) ಅಕ್ರಮ ನಡೆಸಿರುವುದು ಸಾಬೀತಾಗಿರುವ ಎಷ್ಟು ಅಧಿಕಾರಿಗಳ ಮೇಲೆ ಇದುವರೆಗೆ ಕ್ರಮ ಕೈಗೊಳ್ಳಲಾಗಿದೆ; (ಹೆಸರು, ವಿಳಾಸ ಸಹಿತ ವಿವರ ನೀಡುವುದು)

ಈ) ಅಕ್ರಮಗಳು ಸಾಬೀತಾಗಿದ್ದರೂ, ಇದುವರೆವಿಗೆ ಯಾವ ಯಾವ ಪ್ರಕರಣಗಳಲ್ಲಿ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗಿಲ್ಲ; ಇದಕ್ಕೆ ಕಾರಣಗಳೇನು; (ವಿವರ ನೀಡುವುದು)

ಉ) ತಾಂತ್ರಿಕ ಶಿಕ್ಷಣ ಇಲಾಖೆಯ ನಿರ್ದೇಶಕರು ಮಾಡಿರುವ ಅಕ್ರಮಗಳು ಸಾಬೀತಾಗಿದ್ದರೂ, ಇದುವರೆವಿಗೆ ಅವರ ವಿರುದ್ಧ ಕ್ರಮ ಕೈಗೊಳ್ಳದಿರಲು ಕಾರಣಗಳೇನು? (ವಿವರ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ನಕಲಿ ಬಿಲ್ಲು ಹಾಗೂ ದಾಖಲೆಗಳನ್ನು ಸೃಷ್ಟಿಸಿ ಕೋಟ್ಯಾಂತರ ರೂಪಾಯಿ ವಂಚಿಸಿರುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೬೦ (೩೮೧೧) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿ.ಬಿ.ಎಂ.ಪಿ)ಯಲ್ಲಿ ನಕಲಿ ಬಿಲ್ಲು ಹಾಗೂ ದಾಖಲೆಗಳನ್ನು ಸೃಷ್ಟಿಸಿ ಕೋಟ್ಯಾಂತರ ರೂಪಾಯಿ ವಂಚಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದರೆ, ಇದರ ಮೊತ್ತವೆಷ್ಟು; ಇದರಲ್ಲಿ ಯಾರ ಯಾರ ಕೈವಾಡವಿದೆ; (ಅವರ ಹೆಸರು, ಹುದ್ದೆ ತಿಳಿಸುವುದು)

ಇ) ಇದರಲ್ಲಿ ಭಾಗಿಯಾದವರ ಬಗ್ಗೆ ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ; ಅವರ ಮೇಲೆ ಕೋರ್ಟಿನಲ್ಲಿ ಕೇಸ್ ದಾಖಲಿಸಲಾಗಿದೆಯೇ; ದಾಖಲಿಸಿದ್ದಲ್ಲಿ, ಪ್ರಸ್ತುತ ಪ್ರಕರಣ ಯಾವ ಹಂತದಲ್ಲಿದೆ?

## ೧೧೦ ಹಳ್ಳಿಗಳಿಗೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಯೋಜನೆ ಮತ್ತು ಕಾಮಗಾರಿ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೬೧ (೩೯೨೯) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಗೆ ಸೇರ್ಪಡೆಯಾದ ೧೧೦ ಹಳ್ಳಿಗಳಿಗೆ ಒಳಚರಂಡಿ ಹಾಗೂ ಕುಡಿಯುವ ನೀರು ಪೂರೈಸುವ ಯೋಜನೆ ಯಾವ ಹಂತದಲ್ಲಿದೆ;

ಆ) ಇದಕ್ಕಾಗಿ ಸರ್ಕಾರ ಅಥವಾ ಬೆಂಗಳೂರು ನೀರು ಸರಬರಾಜು ಒಳಚರಂಡಿ ಮಂಡಳಿ ರೂಪಿಸಿರುವ ಯೋಜನೆ ಯಾವ ಹಂತದಲ್ಲಿದೆ;

ಇ) ಈ ಯೋಜನೆಗೆ ಸರ್ಕಾರ ಹಣವನ್ನು ಬಿಡುಗಡೆ ಮಾಡಿದೆಯೇ; ಮಾಡಿದ್ದರೆ, ಬಿಡುಗಡೆ ಮಾಡಿದ ಮೊತ್ತ ಎಷ್ಟು; ಆ ಪೈಕಿ ವಿನಿಯೋಗಿಸಲಾದ ಮೊತ್ತ ಎಷ್ಟು? (ವಿವರ ನೀಡುವುದು)

## ಕಾವೇರಿ ಹಾಗೂ ಇತರೆ ಜಲಮೂಲಗಳಿಂದ ನಗರಕ್ಕೆ ಬರುತ್ತಿರುವ ನೀರಿನ ಬಗ್ಗೆ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೬೨ (೩೯೨೭) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೆಂಗಳೂರು ಜಲಮಂಡಳಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ತ್ಯಾಜ್ಯ ನೀರು ಸಂಸ್ಕರಣಾ ಘಟಕಗಳು ಎಷ್ಟು;

ಆ) ಸಂಸ್ಕರಣೆ ಘಟಕಗಳಿಂದ ಪ್ರತಿನಿತ್ಯ ಸಂಸ್ಕರಿಸುತ್ತಿರುವ ನೀರಿನ ಪ್ರಮಾಣ ಎಷ್ಟು;

ಇ) ಸಂಸ್ಕರಣೆ ಮಾಡಿದ ಎಷ್ಟು ಲೀಟರ್ ನೀರನ್ನು ಮಾರಾಟ ಮಾಡಲಾಗುತ್ತಿದೆ;

ಈ) ಕಾವೇರಿ ಹಾಗೂ ಇತರೆ ಜಲ ಮೂಲಗಳಿಂದ ಪ್ರತಿನಿತ್ಯ ನಗರಕ್ಕೆ ಬರುತ್ತಿರುವ ನೀರಿನ ಪ್ರಮಾಣ ಎಷ್ಟು; ಎಂ.ಎಲ್.ಡಿ. ಮತ್ತು ಲೀಟರ್‌ನಲ್ಲಿ ವಿವರ ನೀಡುವುದು?

## ಜಲಮಂಡಳಿಯಲ್ಲಿ ತ್ಯಾಜ್ಯ ನೀರಿನ ಸಂಸ್ಕರಣ ಘಟಕ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) –**

೩೪೬೩ (೩೯೨೮) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೆಂಗಳೂರು ಜಲಮಂಡಳಿಯಲ್ಲಿ ಹಾಲಿ ಇರುವ ತ್ಯಾಜ್ಯ ನೀರಿನ ಸಂಸ್ಕರಣ ಘಟಕಗಳು ಎಷ್ಟು;

ಆ) ತ್ಯಾಜ್ಯ ನೀರಿನ ಸಂಸ್ಕರಣಾ ಘಟಕಗಳನ್ನು ಹೊಸದಾಗಿ ನಿರ್ಮಾಣ ಮಾಡಲು ಜಲಮಂಡಳಿ ಉದ್ದೇಶಿಸಿರುವುದೇ; ಉದ್ದೇಶಿಸಿದ್ದರೆ, ಎಷ್ಟು ತ್ಯಾಜ್ಯ ನೀರಿನ ಸಂಸ್ಕರಣ ಘಟಕಗಳನ್ನು ನಿರ್ಮಾಣ ಮಾಡಲಾಗುತ್ತಿದೆ; ಯಾವ ಹಂತದಲ್ಲಿದೆ;

ಇ) ಇದನ್ನು ಯಾವ ಯೋಜನೆಯಡಿಯಲ್ಲಿ ನಿರ್ಮಾಣ ಮಾಡಲಾಗುತ್ತಿದೆ; ಇದಕ್ಕೆ ಹಣಕಾಸು ನೆರವು ನೀಡುತ್ತಿರುವ ಸಂಸ್ಥೆಗಳು ಯಾವುವು? (ವಿವರ ನೀಡುವುದು)

## ಜಾಹೀರಾತಿಗಾಗಿ ಮಾಡಲಾದ ವೆಚ್ಚದ ವಿವರ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) –**

೩೪೬೪ (೩೮೫೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ೨೦೧೪–೧೫,೨೦೧೫–೧೬, ಮತ್ತು ೨೦೧೬–೧೭ನೇ ಸಾಲಿನಲ್ಲಿ ಜಾಹೀರಾತಿಗಾಗಿ ಸರ್ಕಾರ ಖರ್ಚು ಮಾಡಿರುವ ಹಣ ಎಷ್ಟು; (ವರ್ಷಾವಾರು ಮಾಹಿತಿ ನೀಡುವುದು)

ಆ) ಸರ್ಕಾರ ಯಾವ ಯಾವ ಯೋಜನೆಗಳನ್ನು ಯಾವ ಯಾವ ರೀತಿಯಲ್ಲಿ ಜಾಹೀರಾತುಗೊಳಿಸಿದೆ;

ಇ) ಯಾವ ಯಾವ ಯೋಜನೆಗಳ ಜಾಹೀರಾತಿಗೆ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ? (ಸಂಪೂರ್ಣ ವಿವರವನ್ನು ನೀಡುವುದು)

## ಗದಗ–ಬೆಟಗೇರಿ ಅವಳಿ ನಗರಕ್ಕೆ ೨೪X೭ ಕುಡಿಯುವ ನೀರಿನ ಸರಬರಾಜು ಯೋಜನೆಯ ಕುರಿತು

**ಶ್ರೀ ಎಸ್.ವಿ. ಸಂಕನೂರ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) –**

೩೪೬೫ (೩೯೬೮) ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಗದಗ–ಬೆಟಗೇರಿ ಅವಳಿ ನಗರಕ್ಕೆ ೨೪X೭ ಎರಡನೇ ಹಂತದ ಕುಡಿಯುವ ನೀರಿನ ಯೋಜನೆ ಯಾವಾಗ ಮಂಜೂರಾಗಿದೆ; ಯಾವಾಗ ಪ್ರಾರಂಭವಾಗಿದೆ; ಈ ಯೋಜನೆಗೆ ನಿಗಧಿಪಡಿಸಿದ ಹಣ ಎಷ್ಟು; ಇಲ್ಲಿಯವರೆಗೆ ಖರ್ಚಾದ ಹಣ ಎಷ್ಟು;

ಆ) ಈ ಯೋಜನೆಯನ್ನು ಪೂರ್ಣಗೊಳಿಸಲು ಗುತ್ತಿಗೆದಾರರಿಗೆ ದಿನಾಂಕ: ೨೩.೦೬.೨೦೧೭ರೊಳಗೆ ಸಮಯ ನಿಗಧಿಪಡಿಸಿರುವುದು ನಿಜವೇ;

ಇ) ಈ ಕಾಮಗಾರಿಯನ್ನು ನಿಗಧಿತ ಕಾಲಮಿತಿಯಲ್ಲಿ ಪೂರ್ಣಗೊಳಿಸದಿರಲು ಕಾರಣವೇನು; (ವಿವರ ನೀಡುವುದು)

ಈ) ಗದಗ–ಬೆಟಗೇರಿ ಅವಳಿ ನಗರದ ಇನ್ನೂ ಎಷ್ಟು ವಾರ್ಡ್‌ಗಳಿಗೆ ೨೪X೭ದ ನೀರಿನ ಸಂಪರ್ಕ ಕಲ್ಪಿಸಬೇಕಾಗಿದೆ; ಇನ್ನು ಎಷ್ಟು ಕಡೆ ಮೇಲ್ಮಟ್ಟದ ಜಲ ಸಂಗ್ರಹಣಾಗಾರ ನಿರ್ಮಿಸಬೇಕಾಗಿದೆ; (ವಿವರ ನೀಡುವುದು)

ಉ) ಈ ಯೋಜನೆ ಪೂರ್ಣಗೊಳಿಸಲು ಬೇಕಾಗುವ ಕಾಲಾವಧಿ ಎಷ್ಟು;

ಊ) ಗದಗ–ಬೆಟಗೇರಿ ಅವಳಿ ನಗರದಲ್ಲಿ ಸಮರ್ಪಕ. ಕುಡಿಯುವ ನೀರಿನ ವಿತರಣೆಗಾಗಿ ಹೋರಾಟ ಮಾಡಿದವರ ಮೇಲೆ ಕೋರ್ಟ್ ಕೇಸ್ ದಾಖಲು ಮಾಡಿದ್ದು, ಕೇಸ್‌ಗಳನ್ನು ಹಿಂದಕ್ಕೆ ಪಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಗದಗ–ಬೆಟಗೇರಿ ನಗರದ ಒಳ ಚರಂಡಿ ಯೋಜನೆ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೩೪೬೬ (೫೪೦) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಗದಗ ಬೆಟಗೇರಿ ಅವಳಿ ನಗರದ ಒಳ ಚರಂಡಿ ಯೋಜನೆ ದಿನಾಂಕ:೧೧.೧೦.೨೦೦೦ಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ ೧೭ ವರ್ಷ ಕಳೆದರೂ ಈ ಯೋಜನೆ ಪೂರ್ಣಗೊಳ್ಳದೆ ಇರಲು ಕಾರಣವೇನು; (ವಿವರ ನೀಡುವುದು)

ಆ) ಯೋಜನೆಯನ್ನು ಪೂರ್ಣಗೊಳಿಸಲು ಮಾಡಿದ ಪ್ರಯತ್ನಗಳೇನು; (ವಿವರಣೆ ನೀಡುವುದು)

ಇ) ಈ ಯೋಜನೆಗೆ ಮಂಜೂರಾದ ಅನುದಾನ ಎಷ್ಟು; ಅದರಲ್ಲಿ ಖರ್ಚಾದ ಹಣ ಎಷ್ಟು;

ಈ) ಈ ಯೋಜನೆಯನ್ನು ಪೂರ್ಣಗೊಳಿಸಲು ಬೇಕಾದ ಕಾಲಾವಧಿ ಎಷ್ಟು?

## ಡ್ರ್ಯಾಗ್ ರೇಸ್ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೬೭ (೩೯೭೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದಲ್ಲಿ ಡ್ರ್ಯಾಗ್ ರೇಸ್, ವೀಲಿಂಗ್, ಸ್ಟಂಟಿಂಗ್ ನಡೆಸುವವರ ವಿರುದ್ಧ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

ಆ) ಡ್ರ್ಯಾಗ್ ರೇಸ್, ವೀಲಿಂಗ್ ಸ್ಟಂಟ್ ನಡೆಸುವವರ ವಿರುದ್ಧ ಕ್ರಮ ಜರುಗಿಸಲು ಇರುವ ಮಾನದಂಡಗಳೇನು;

ಇ) ಬೆಂಗಳೂರು ನಗರದಲ್ಲಿ ಅತೀ ಹೆಚ್ಚು ಸ್ಟಂಟ್ ಪ್ರದರ್ಶನ ನಡೆಸುವ ರಸ್ತೆಗಳು/ಪ್ರದೇಶಗಳು ಯಾವುವು;

ಈ) ಈ ರೀತಿ ಡ್ರ್ಯಾಗ್ ರೇಸ್, ವೀಲಿಂಗ್ ಸ್ಟಂಟ್ ನಡೆಸದಂತೆ ಯಾವ ಮುನ್ನೆಚ್ಚರಿಕೆ ಕ್ರಮಗಳನ್ನು ಸರ್ಕಾರ ತೆಗೆದುಕೊಂಡಿದೆ?

## ಅಪಘಾತಗಳಿಂದ ಮೃತಪಟ್ಟವರ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೬೮ (೩೯೭೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಕಳೆದ ಆರು ವರ್ಷಗಳಿಂದ ನಗರದಲ್ಲಿ ನಡೆದ ಅಪಘಾತಗಳ ಸಂಖ್ಯೆ ಎಷ್ಟು; ಅದರಲ್ಲಿ ಮೃತಪಟ್ಟವರ ಸಂಖ್ಯೆ ಎಷ್ಟು;

ಆ) ಈ ಅಪಘಾತಗಳಲ್ಲಿ ಮೃತಪಟ್ಟ ಪಾದಚಾರಿಗಳ ಸಂಖ್ಯೆ ಎಷ್ಟು;

ಇ) ಹೊರವರ್ತುಲ ರಸ್ತೆಗಳಲ್ಲಿ ಹೆಚ್ಚು ಪಾದಚಾರಿಗಳು ಅಪಘಾತಕ್ಕೀಡಾಗಿ ಸಾಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಆ ರಸ್ತೆಗಳು ಯಾವುವು;

ಈ) ರಸ್ತೆ ದಾಟಲು ಸೂಕ್ತ ವ್ಯವಸ್ಥೆ ಹಾಗೂ ಸಮರ್ಪಕ ಸೂಚನಾ ಫಲಕಗಳಿಲ್ಲದಿರುವುದು ಅವಘಡಕ್ಕೆ ಪ್ರಮುಖ ಕಾರಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಮುನ್ನೆಚ್ಚರಿಕೆ ಕ್ರಮಗಳೇನು?

## ಅನಧಿಕೃತ ಜಾಹೀರಾತು ಫಲಕಗಳ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೪೯ (೩೯೮೦) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಜಾಹೀರಾತು ಫಲಕಗಳನ್ನು ಅಳವಡಿಸಲು ಇರುವ ಮಾನದಂಡವೇನು;

ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಒಟ್ಟು ಜಾಹೀರಾತು ಫಲಕಗಳ ಸಂಖ್ಯೆ ಎಷ್ಟು;

ಇ) ಇದರಿಂದ ಬರುವ ವಾರ್ಷಿಕ ಆದಾಯ ಎಷ್ಟು;

ಈ) ನಗರದಲ್ಲಿ ಅನಧಿಕೃತ ಜಾಹೀರಾತು ಫಲಕಗಳನ್ನು ಅಳವಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು;

ಉ) ನಿಯಮ ಬಾಹಿರವಾಗಿ ಜಾಹೀರಾತು ಫಲಕಗಳನ್ನು ಅಳವಡಿಸಿರುವವರ ವಿರುದ್ಧ ಸರ್ಕಾರ ತೆಗೆದುಕೊಂಡ ಕಠಿಣ ಕ್ರಮವೇನು? (ಪ್ರಕರಣವಾರು ಹೆಸರು ಸಹಿತ ವಿವರ ನೀಡುವುದು)

## ಮಾದಕ ವಸ್ತು ಮಾರಾಟ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೭೦ (೩೯೭೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೆಂಗಳೂರು ನಗರದಲ್ಲಿ ಮಾದಕ ವಸ್ತು ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ಡ್ರಗ್ಸ್ ದಂಧೆಯಲ್ಲಿ ಸಿಕ್ಕಿಬಿದ್ದ ಆರೋಪಿತ ವಿದೇಶಿಗರ ಸಂಖ್ಯೆ ಎಷ್ಟು;

ಇ) ಈವರೆಗೂ ಇವರ ವಿರುದ್ಧ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು; ಈ ದಂಧೆಕೋರರ ವಿರುದ್ಧ ಕೈಗೊಂಡ ಕ್ರಮಗಳೇನು; (ಪ್ರಕರಣವಾರು ವಿವರ ನೀಡುವುದು)

ಈ) ಡ್ರಗ್ಸ್ ದಂಧೆಯು ಹೆಚ್ಚಾಗಿ ಯಾವ ಮಾರ್ಗಗಳ ಮುಖಾಂತರ ನಡೆಯುತ್ತಿದೆ?

## ಸನ್ನಡತೆ ತೋರಿದ ಖೈದಿಗಳನ್ನು ಬಿಡುಗಡೆಗೊಳಿಸುವ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೭೧ (೩೮೫೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೪ ವರ್ಷಗಳಿಂದ ಜೈಲಿನಲ್ಲಿ ಸನ್ನಡತೆ ತೋರಿದ ಎಷ್ಟು ಖೈದಿಗಳನ್ನು ಬಿಡುಗಡೆ ಮಾಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಪ್ರಸಕ್ತ ವರ್ಷದಲ್ಲಿ ಎಷ್ಟು ಸನ್ನಡತೆ ತೋರಿದ ಖೈದಿಗಳನ್ನು ಬಿಡುಗಡೆ ಮಾಡಲು ನಿರ್ಧರಿಸಲಾಗಿದೆ;

(ಇ) ಇವರಲ್ಲಿ ಪುರುಷ ಮತ್ತು ಮಹಿಳಾ ಖೈದಿಗಳ ಸಂಖ್ಯೆ ಎಷ್ಟು;

(ಈ) ಯಾವ ಯಾವ ಜೈಲಿನಿಂದ ಸನ್ನಡತೆ ತೋರಿದ ಖೈದಿಗಳನ್ನು ಬಿಡುಗಡೆ ಮಾಡಲಾಗುವುದು; (ವಿವರ ನೀಡುವುದು)

(ಉ) ಖೈದಿಗಳ ಬಿಡುಗಡೆಗೆ ಸರ್ಕಾರದಲ್ಲಿ ಇರುವ ಮಾನದಂಡವೇನು?

## ಸ್ಥಳೀಯ ಸಂಸ್ಥೆಗಳಲ್ಲಿ ಅಧ್ಯಕ್ಷರುಗಳು ತ್ರೈಮಾಸಿಕ ಸಭೆಗಳಲ್ಲಿ ಭಾಗವಹಿಸುವ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೭೨ (೩೮೨೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಸ್ಥಳೀಯ ಸಂಸ್ಥೆಗಳಾದ ಪಟ್ಟಣ ಪಂಚಾಯತ್, ಪುರಸಭೆ ಹಾಗೂ ನಗರಸಭೆ ಅಧ್ಯಕ್ಷರಿಗೆ ಜಿಲ್ಲಾಧಿಕಾರಿಗಳು ಕೈಗೊಳ್ಳುವ ಪರಿಶೀಲನಾ ತ್ರೈಮಾಸಿಕ ಸಭೆಯಲ್ಲಿ ಭಾಗವಹಿಸುವ ಅವಕಾಶವಿದೆಯೇ;

ಆ) ಈ ಸಭೆಗಳಲ್ಲಿ ಸ್ಥಳೀಯ ಸಂಸ್ಥೆಗಳಾದ ಪಟ್ಟಣ ಪಂಚಾಯತ್, ಪುರಸಭೆ ಹಾಗೂ ನಗರಸಭೆ ಅಧ್ಯಕ್ಷರು ಪಾಲ್ಗೊಳ್ಳುವುದು ಸೂಕ್ತವೆನಿಸುವುದಿಲ್ಲವೇ;

ಇ) ಹಾಗಾದರೇ ಈ ಬಗ್ಗೆ ಸರಕಾರವು ಕೈಗೊಳ್ಳಬಹುದಾದ ಕ್ರಮಗಳೇನು?

## ರಾಜ್ಯದಲ್ಲಿ ನಕ್ಸಲ್ ಮತ್ತು ಭಯೋತ್ಪಾದಕ ಚಟುವಟಿಕೆಗಳು ಹೆಚ್ಚಾಗಿರುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೭೩ (೩೮೨೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದಲ್ಲಿನ ಯಾವ ಯಾವ ಜಿಲ್ಲೆಗಳಲ್ಲಿ ನಕ್ಸಲ್ ಚಟುವಟಿಕೆ ನಡೆಯುತ್ತಿರುವ ಬಗ್ಗೆ ಮಾಹಿತಿ ಬಂದಿರುತ್ತದೆ; (ಮಾಹಿತಿ ನೀಡುವುದು)

ಆ) ಕೊಡಗು ಜಿಲ್ಲೆಯಲ್ಲಿ ನಕ್ಸಲ್ ಚಟುವಟಿಕೆ ಕಂಡುಬಂದಿರುವ ಬಗ್ಗೆ ಮಾಹಿತಿ ಬಂದಿದೆಯೇ;

ಇ) ಕೊಡಗು ಜಿಲ್ಲೆಯಲ್ಲಿ ಐ.ಸಿ.ಎಸ್ ಭಯೋತ್ಪಾದನೆ ಸಂಘಟನೆಯು ನುಸುಳಿರುವ ಮತ್ತು ಬೀಡು ಬಿಟ್ಟಿರುವ ಬಗ್ಗೆ ಮಾಹಿತಿ ಲಭ್ಯವಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು)

ಈ) ಇಲ್ಲಿಯವರೆಗೆ ಕೊಡಗು ಜಿಲ್ಲೆಯಲ್ಲಿ ಎಷ್ಟು ನಕ್ಸಲ್ ಮತ್ತು ಭಯೋತ್ಪಾದಕರ ಬಗ್ಗೆ ಕ್ರಮ ತೆಗೆದುಕೊಳ್ಳಲಾಗಿದೆ; ಈ ಬಗ್ಗೆ ದಾಖಲಾದ ಪ್ರಕರಣಗಳೆಷ್ಟು; (ಮಾಹಿತಿ ನೀಡುವುದು)

ಉ) ಕೊಡಗು ಜಿಲ್ಲೆಗೆ ಅಂತರ್ ರಾಜ್ಯದಿಂದ ಬರುವ ನಕ್ಸಲ್ ಹಾಗೂ ಭಯೋತ್ಪಾದಕರನ್ನು ನಿಗ್ರಹಿಸಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಿಷೇದಿಸಿರುವ ಪ್ಲಾಸ್ಟಿಕ್ ಕವರ್‌ಗಳನ್ನು ಬಳಸುತ್ತಿರುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೭೪ (೩೮೩೦) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಪ್ಲಾಸ್ಟಿಕ್ ಕಸದಿಂದ ರಾಜ್ಯದಲ್ಲಿ ಆಗುತ್ತಿರುವ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಸಮಸ್ಯೆಯ ಪರಿಹಾರಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು;(ವಿವರ ನೀಡುವುದು)

ಆ) ಬೆಂಗಳೂರು ನಗರದಲ್ಲಿ ಸಣ್ಣ ಸಣ್ಣ ಹೊಟೇಲ್‌ಗಳು ಮತ್ತು ರಸ್ತೆಯಲ್ಲಿನ ವ್ಯಾಪಾರಸ್ಥರುಗಳು ಪ್ಲಾಸ್ಟಿಕ್ ಕವರ್‌ಗಳನ್ನು ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರ ವಿರುದ್ಧ ಕೈಗೊಂಡ ಕ್ರಮಗಳೇನು; (ಮಾಹಿತಿ ನೀಡುವುದು)

ಇ) ರಾಜ್ಯದಲ್ಲಿ ಪೂರ್ಣ ಪ್ರಮಾಣದಲ್ಲಿ ಪ್ಲಾಸ್ಟಿಕ್‌ನ್ನು ನಿಷೇಧಿಸಲು ಸರ್ಕಾರದ ನಿಲುವೇನು? (ವಿವರ ನೀಡುವುದು)

## ನಗರಾಭಿವೃದ್ಧಿ ಕೋಶ, ಮಹಾನಗರ ಪಾಲಿಕೆಗಳ ಬಡತನ ನಿರ್ಮೂಲನೆ ಕೋಶಗಳಲ್ಲಿನ ಸಿಬ್ಬಂದಿಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) –**

೩೪೭೫ (೩೯೫೦) ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದ ಎಲ್ಲಾ ಜಿಲ್ಲೆಯ ನಗರಾಭಿವೃದ್ಧಿ ಕೋಶ ಮತ್ತು ಮಹಾನಗರ ಪಾಲಿಕೆಗಳಲ್ಲಿ ನಗರ ಬಡತನ ನಿರ್ಮೂಲನೆ ಕೋಶಗಳು ಕಳೆದ ಎಷ್ಟು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿವೆ;

ಆ) ನಗರ ಬಡತನ ನಿರ್ಮೂಲನ ಕೋಶದಲ್ಲಿ ಗುತ್ತಿಗೆ ಆಧಾರದ ಮೇಲೆ ನೇಮಕಾತಿಗೊಂಡ ವಿಷಯ ತಜ್ಞರು ಮತ್ತು ಕಛೇರಿ ಸಹಾಯಕರುಗಳ ಸೇವೆಯನ್ನು ಖಾಯಂಗೊಳಿಸುವ ಕುರಿತು ಮಾನ್ಯ ಮುಖ್ಯಮಂತ್ರಿಗಳು ತಾತ್ವಿಕ ಒಪ್ಪಿಗೆ ನೀಡಿದ್ದರು ಸಹ ಸದರಿ ಕಡತವನ್ನು ಕಳೆದ ೩ ವರ್ಷಗಳಿಂದ ಸಚಿವ ಸಂಪುಟ ಸಭೆಗೆ ಮಂಡಿಸಿಲ್ಲದಿರುವ ಕಾರಣವೇನು;

ಇ) ವಿಷಯ ತಜ್ಞರು ಡಾಕ್ಟರೇಟ್, ಎಂ.ಫಿಲ್, ಎಂ.ಎಸ್.ಡಬ್ಲ್ಯೂ, ಎಂ.ಎ ಸ್ನಾತಕೋತ್ತರ ಪದವಿಯೊಂದಿಗೆ ಸೇವಾ ಅನುಭವವನ್ನು ಹೊಂದಿದ್ದು ಸದರಿ ವಿಷಯ ತಜ್ಞರ ಸೇವಾ ಭದ್ರತೆ ಒದಗಿಸಲು ಕೈಗೊಂಡ ಕ್ರಮವೇನು;

ಈ) ವಿಷಯ ತಜ್ಞರಿಗೆ ನೀಡುತ್ತಿರುವ ಮಾಸಿಕ ವೇತನವೆಷ್ಟು; ಪ್ರತಿ ವರ್ಷ ನಿಯಮಗಳ ಪ್ರಕಾರ ವೇತವನ್ನು ಪರಿಷ್ಕರಿಸಲಾಗಿದೆಯೆ; ಇಲ್ಲವಾದಲ್ಲಿ ಕಾರಣವೇನು;

ಉ) ವಿಷಯ ತಜ್ಞರು ಮತ್ತು ಕಛೇರಿ ಸಹಾಯಕರಿಗೆ ಕಳೆದ ೯ ತಿಂಗಳಿಂದ ವೇತನ ಪಾವತಿಸದೆ ಇರಲು ಕಾರಣವೇನು;

ಊ) ಇವರಿಗೆ ಶೀಘ್ರ ವೇತನ ಪಾವತಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

## ನಗರ ಸ್ಥಳೀಯ ಸಂಸ್ಥೆಗಳಲ್ಲಿ ವಸೂಲಾದ ಗ್ರಂಥಾಲಯ ಸೆಸ್ (ಕರ) ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) –**

೩೪೭೬ (೩೯೪೯) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಕಳೆದ ಹತ್ತು ವರ್ಷಗಳಿಂದ ಇಲ್ಲಿಯವರೆಗೆ (೨೦೦೭–೧೭) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸೇರಿದಂತೆ ಎಲ್ಲಾ ನಗರ ಪ್ರದೇಶದ ಸ್ಥಳೀಯ ಸಂಸ್ಥೆಗಳಿಂದ (ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ) ವಸೂಲಾದ ಗ್ರಂಥಾಲಯ ಕರ ಎಷ್ಟು; (ವಿವರ ನೀಡುವುದು)

ಆ) ಈ ವಸೂಲಾದ ಕರದಲ್ಲಿ ಗ್ರಂಥಾಲಯ ಇಲಾಖೆಗೆ ಸಲ್ಲಿಸಿದ ಮೊತ್ತ ಎಷ್ಟು; ಬಾಕಿ ಉಳಿದಿರುವ ಮೊತ್ತ ಎಷ್ಟು; (ಸ್ಥಳೀಯ ಸಂಸ್ಥೆವಾರು ಪ್ರತ್ಯೇಕ ವಿವರ ನೀಡುವುದು)

ಇ) ಈ ಸ್ಥಳೀಯ ಸಂಸ್ಥೆಗಳು ಗ್ರಂಥಾಲಯ ಸೆಸ್‌ನ್ನು ಗ್ರಂಥಾಲಯ ಇಲಾಖೆಗೆ ಕಟ್ಟದೆ ಬಾಕಿ ಉಳಿಸಿಕೊಂಡಿರುವುದರಿಂದ ಗ್ರಂಥಾಲಯಗಳ ಅಭಿವೃದ್ಧಿಗೆ ಹಿನ್ನಡೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದಲ್ಲಿ, ಈ ಸೆಸ್ ಮೊತ್ತವನ್ನು ಗ್ರಂಥಾಲಯ ಇಲಾಖೆಗೆ ಪಾವತಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು?

## ಜವಾಹರ್‌ಲಾಲ್ ನೆಹರೂ ರಾಷ್ಟ್ರೀಯ ನಗರ ನವೀಕರಣ ಅಭಿಯಾನ ಯೋಜನೆಯ ಬಗ್ಗೆ (Jh:Nurm)

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) –**

೩೪೭೭ (೩೯೫೧) ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಜವಾಹರ್‌ಲಾಲ್ ನೆಹರೂ ರಾಷ್ಟ್ರೀಯ ನಗರ ನವೀಕರಣ ಅಭಿಯಾನದಲ್ಲಿ (Jh:Nurm) ಮೈಸೂರು ನಗರಕ್ಕೆ ಮಂಜೂರಾದ ಯೋಜನೆಗಳಾವುವು; ಅದರ ಅಂದಾಜು ಮೊತ್ತ ಎಷ್ಟು; (ವಿವರ ನೀಡುವುದು)

ಆ) ಈ ಮಂಜೂರದ ಯೋಜನೆಗಳಲ್ಲಿ ಮುಕ್ತಯುವಾಗಿರುವ ಯೋಜನೆಗಳೆಷ್ಟು; ಪ್ರಗತಿಯಲ್ಲಿರುವ ಯೋಜನೆಗಳು, ಇನ್ನು ಪ್ರಾರಂಭವಾಗದಿರುವ ಕಾಮಗಾರಿಗಳೆಷ್ಟು;

ಇ) ಪ್ರಗತಿಯಲ್ಲಿರುವ ಯೋಜನೆಗಳನ್ನು ಪೂರ್ಣಗೊಳಿಸಲಾಗುವುದು ಯಾವಾಗ;

ಈ) ಪ್ರಾರಂಭವಾಗದಿರುವ ಯೋಜನೆಗಳನ್ನು ಯಾವಾಗ ಪ್ರಾರಂಭಿಸಲಾಗುವುದು; ಯಾವ ಕಾಲಮಿತಿ ಒಳಗೆ ಪೂರ್ಣಗೊಳಿಸಲಾಗುವುದು?

## ರಾಜ್ಯದ ಜಿ.ಎಸ್.ಡಿ.ಪಿ ಕುರಿತು (ಕಳೆದ ೦೪ ವರ್ಷದ್ದು)

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೩೪೭೮ (೩೮೬೧) ಮಾನ್ಯ ಮುಖ್ಯ ಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ೨೦೧೩–೧೪ ರಿಂದ ೨೦೧೬–೧೭ನೇ ಸಾಲಿನಲ್ಲಿ ರಾಜ್ಯದ ಜಿ.ಎಸ್.ಡಿ.ಪಿ. ಎಷ್ಟು; (ಕೃಷಿ, ಕೈಗಾರಿಕೆ, ಸೇವೆ) ವಲಯವಾರು ವಾರ್ಷಿಕ ಬೆಳವಣಿಗೆಯ ಪ್ರಮಾಣ ಎಷ್ಟು;

ಆ) ಮೂಲ ಸೌಕರ್ಯ, ಕೃಷಿ, ಆರೋಗ್ಯ ಕ್ಷೇತ್ರಗಳಲ್ಲಿ ದಕ್ಷಿಣದ ರಾಜ್ಯಗಳಲ್ಲಿಯೇ ಕರ್ನಾಟಕ ಹಿಂದುಳಿದಿದೆ ಎನ್ನುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ರಾಜ್ಯದ ಸಂಯೋಜಿತ ವಾರ್ಷಿಕ ಬೆಳವಣಿಗೆ ದರದಲ್ಲಿ ರಾಜ್ಯ ಹಿಂದೆ ಬಿದ್ದಿದೆಯೇ; ಇದನ್ನು ಸರಿಪಡಿಸಲು ಸರ್ಕಾರದ ಕ್ರಮವೇನು?

## ರಸ್ತೆ ನಿರ್ವಹಣಾ ಗುತ್ತಿಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೩೪೭೯ (೩೮೫೯) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೆಂಗಳೂರು ನಗರದಲ್ಲಿ ಕಳೆದ ಮೂರು ವರ್ಷಗಳಲ್ಲಿ ಗುತ್ತಿಗೆ ನೀಡಿ ಅಭಿವೃದ್ಧಿ ಪಡಿಸಲಾಗಿರುವ ರಸ್ತೆಗಳು ಯಾವುವು; ಈ ರಸ್ತೆಗಳ

ನಿರ್ವಹಣಾ ಜವಾಬ್ದಾರಿಯನ್ನು ಯಾರಿಗೆ ವಹಿಸಲಾಗಿತ್ತು; ಅವರು ಈ ಕಾರ್ಯದ ಜವಾಬ್ದಾರಿ ನಿರ್ವಹಿಸಿದ್ದಾರೆಯೇ; ನಿರ್ವಹಿಸದಿದ್ದಲ್ಲಿ, ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು; (ರಸ್ತೆಗಳ ವಿಸ್ತೀರ್ಣದ ಮಾಹಿತಿಯೊಂದಿಗೆ ವಿವರ ನೀಡುವುದು)

ಆ) ಗುತ್ತಿಗೆ ನಿರ್ವಹಣಾ ಅವಧಿ ಮುಗಿದಿರುವ ರಸ್ತೆಗಳೆಷ್ಟು; ಅವುಗಳ ನಿರ್ವಹಣಗಾಗಿ ತೆಗೆದುಕೊಂಡಿರುವ ಕ್ರಮಗಳೇನು:

ಇ) ಬೆಂಗಳೂರು ನಗರದ ರಸ್ತೆಗಳಲ್ಲಿ ಇತ್ತೀಚಿಗೆ ಸುರಿದ ಮಳೆಯಿಂದ ಭಾರೀ ಪ್ರಮಾಣದಲ್ಲಿ ಗುಂಡಿಗಳು ಬಿದ್ದಿರುವುದು ನಿಜವೇ; ರಸ್ತೆ ಗುಂಡಿಗಳ ಬಗ್ಗೆ ಸಮೀಕ್ಷೆ ನಡೆಸಲಾಗಿದೆಯೇ; ರಸ್ತೆ ಗುಂಡಿಗಳನ್ನು ಮುಚ್ಚಲು ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು; ಅವುಗಳು ಯಶಸ್ವಿಯಾಗಿವೆಯೇ;

ಈ) ನಗರದ ಎಲ್ಲಾ ರಸ್ತೆ ಗುಂಡಿಗಳನ್ನು ಮುಚ್ಚಲಾಗಿದೆಯೇ; ಇಲ್ಲದಿದ್ದಲ್ಲಿ, ಯಾವಾಗ ಮುಚ್ಚಲಾಗುವುದು; ರ್‍ಯಾಪಿಡ್ ಸೆಟ್ಟಿಂಗ್ ಎಮಲ್ಷನ್ ಮತ್ತು ಹಾಟ್‌ಮಿಕ್ಸ್ ಬಳಸಿ ಮುಚ್ಚಿದ ರಸ್ತೆ ಗುಂಡಿಗಳ ಪ್ರತ್ಯೇಕ ವಿವರಗಳನ್ನು ನೀಡುವುದು;

ಉ) ನಗರದಲ್ಲಿರುವ ರಸ್ತೆಗಳ ಉದ್ದವೆಷ್ಟು; ಅವುಗಳಲ್ಲಿ ವಾರ್ಡ್ ರಸ್ತೆಗಳ ಉದ್ದವೆಷ್ಟು? (ವಿವರ ನೀಡುವುದು)

## ಮೊಬೈಲ್ ಫೋನ್ ಕಳವು ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೩೪೮೦ (೩೮೫೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೆಂಗಳೂರು ನಗರದಲ್ಲಿ ಇತ್ತೀಚೆಗೆ ಮೊಬೈಲ್ ಫೋನ್‌ಗಳ ಕಳವು ಪ್ರಕರಣಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ವಿವಿಧ ಪೊಲೀಸ್ ಠಾಣೆಗಳಲ್ಲಿ ಮೊಬೈಲ್ ಫೋನ್ ಕಳವು ಅಥವಾ ನಾಪತ್ತೆ ಕುರಿತು ದಾಖಲಾದ ಪ್ರಕರಣಗಳೆಷ್ಟು; ಅವುಗಳಲ್ಲಿ ಎಷ್ಟು ಪ್ರಕರಣಗಳಲ್ಲಿ ಕಳುವಾದ ಮೊಬೈಲ್‌ಗಳನ್ನು ಪತ್ತೆ ಹೆಚ್ಚಿ ದೂರುದಾರರಿಗೆ ನೀಡಲಾಗಿದೆ;

ಇ) ಕಳುವಾದ ಪ್ರಕರಣಗಳನ್ನು ದಾಖಲು ಮಾಡಲು 'ಲಾಸ್ಟ್ ಅಂಡ್ ಫೌಂಡ್' ಎಂಬ ವೆಬ್‌ಸೈಟ್ ಅನ್ನು ನಗರ ಪೋಲೀಸರು ರಚಿಸಿರುವುದು ನಿಜವೇ; ಈ ವೆಬ್‌ಸೈಟ್ ಮೂಲಕ ದಾಖಲಾದ ವಿವಿಧ ಪ್ರಕರಣಗಳೆಷ್ಟು; ವೆಬ್‌ಸೈಟ್‌ನಲ್ಲಿ ದಾಖಲಾಗುವ ದೂರುಗಳು ಮತ್ತು ಪೊಲೀಸ್ ಠಾಣೆಯಲ್ಲಿ ದಾಖಲಾಗುವ ದೂರುಗಳ ಬಗ್ಗೆ ತೆಗೆದುಕೊಳ್ಳುವ ಕ್ರಮದಲ್ಲಿ ಇರುವ ವ್ಯತ್ಯಾಸವೇನು? (ವಿವರ ನೀಡುವುದು)

## ತ್ಯಾಜ್ಯ ನೀರು ಸಂಸ್ಕರಣ ಘಟಕ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೩೪೮೧ (೩೮೩೪) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೆಂಗಳೂರು ನಗರದಲ್ಲಿ ಅಪಾರ್ಟ್‌ಮೇಟ್‌ಗಳ, ವಾಣಿಜ್ಯ ವಸತಿ ಕಟ್ಟಡಗಳು ತ್ಯಾಜ್ಯ ನೀರು ಸಂಸ್ಕರಣಾ ಘಟಕಗಳನ್ನು ಅಳವಡಿಸಿಕೊಳ್ಳಲು ಸರ್ಕಾರ ರೂಪಿಸಿದ ನಿಯಮಗಳೇನು; ತದನಂತರ ಅದಕ್ಕೆ ತಂದ ತಿದ್ದುಪಡಿಗಳೇನು; ಈ ನಿಯಮಗಳ ಜಾರಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

ಆ) ಸದರಿ ನಿಯಮಗಳನ್ನು ಉಲ್ಲಂಘಿಸಿರುವ ಅಪಾರ್ಟ್‌ಮೆಂಟ್‌ಗಳನ್ನು ಗುರುತಿಸಲಾಗಿದೆಯೇ; ಅಂತಹ ಅಪಾರ್ಟ್‌ಮೆಂಟ್‌ಗಳಿಗೆ ದಂಡ ವಿಧಿಸಲಾಗಿದೆಯೇ;

ಇ) ಅಂತಹ ಅಪಾರ್ಟ್‌ಮೆಂಟ್‌ಗಳಿಂದ ವಸೂಲು ಮಾಡಲಾದ ದಂಡದ ಮೊತ್ತವೆಷ್ಟು; ಆ ಮೊತ್ತವನ್ನು ಕೆಲವು ಅಪಾರ್ಟ್‌ಮೆಂಟ್‌ಗಳಿಗೆ ಹಿಂತಿರುಗಿಸಲಾಗಿದೆಯೇ; ಈ ರೀತಿ ಹಿಂತಿರುಗಿಸಲಾದ ದಂಡದ ಮೊತ್ತವೆಷ್ಟು; ಹಾಗೂ ದಂಡ ಮೊತ್ತ ಹಿಂತಿರುಗಿಸಲು ಕಾರಣಗಳೇನು;

ಈ) ಸಂಸ್ಕರಿಸಿದ ನೀರನ್ನು ಮರು ಬಳಕೆ ಮಾಡುವ ಸಂಬಂಧ ನಗರದ ಅಪಾರ್ಟ್‌ಮೆಂಟ್‌ಗಳಲ್ಲಿ ಡ್ಯೂಯಲ್ ಪೈಪ್‌ಲೈನ್ ಅಳವಡಿಸಲಾಗಿದೆಯೇ?

## ಭೂ ಪರಿವರ್ತನೆ ಆದೇಶ ಹಿಂಪಡೆಯುವ ಬಗ್ಗೆ

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು ) –**

೩೪೮೨ (೩೯೭೩) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಕೊಡಗು ಜಿಲ್ಲೆಯಲ್ಲಿ ನಗರ ಹಾಗೂ ಪಟ್ಟಣಗಳ ವ್ಯಾಪ್ತಿಯೊಳಗೆ ನೂರಾರು ವರ್ಷಗಳಿಂದ ತೆರಿಗೆ ಪಾವತಿಸಿಕೊಂಡು, ಖಾತೆ ಹೊಂದಿರುವ ಜಾಗದಲ್ಲಿ ಕಟ್ಟಡ ನಿರ್ಮಿಸಲು ಕಡ್ಡಾಯವಾಗಿ ಭೂ ಪರಿವರ್ತನೆ ಆದೇಶ ಪಡೆಯುವಂತೆ ಮಾಡಿರುವುದರಿಂದ ಖಾತೆದಾರರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಕೊಡಗಿನ ಎಲ್ಲಾ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದಂತೆ, ಹೊಸದಾಗಿ ಹೊರಡಿಸಲಾದ ಭೂ ಪರಿವರ್ತನಾ ಆದೇಶದ ಸುತ್ತೋಲೆಯನ್ನು

ಕೂಡಲೇ ಹಿಂಪಡೆದು, ಈ ಹಿಂದಿನ ನಿಯಮದಂತೆ ಕಟ್ಟಡ ಪರವಾನಗಿಗೆ ತಾಂತ್ರಿಕ ಅಭಿಪ್ರಾಯ ನೀಡುವ ಕ್ರಮವನ್ನು ಮುಂದುವರೆಸಲು ಸಾಧ್ಯವಿದೆಯೇ;

ಇ) ಸಾಧ್ಯವಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸದರಿ ಸುತ್ತೋಲೆಯನ್ನು ಹಿಂಪಡೆಯಲಾಗುವುದು? (ಸ್ಪಷ್ಟ ಕಾಲಮಿತಿಯನ್ನು ತಿಳಿಸುವುದು)

## ಇಲಾಖಾವಾರು ಅಧಿಕಾರಿ/ನೌಕರರ ಜೇಷ್ಠತಾ ಪಟ್ಟಿಯನ್ನು ಕಾಲಕಾಲಕ್ಕೆ ಸಿದ್ಧಪಡಿಸದೆ ಇರುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು ) –**

೩೪೮೩ (೩೯೬೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಅಧಿಕಾರಿ ಮತ್ತು ನೌಕರರ ಜೇಷ್ಠತಾ ಪಟ್ಟಿಯನ್ನು ನಿಯಮಗಳ ಪ್ರಕಾರ ಎಷ್ಟು ವರ್ಷಕ್ಕೊಮ್ಮೆ ಇಲಾಖೆಗಳು ಸಿದ್ಧಪಡಿಸಬೇಕು;

ಆ) ಹಲವಾರು ಇಲಾಖೆಗಳು ನಿಗದಿತ ಕಾಲಮಿತಿಯೊಳಗೆ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಪ್ರಕಟಿಸದಿರುವ ಇಲಾಖೆಗಳ ಪಟ್ಟಿ ನೀಡುವುದು)

ಇ) ಜೇಷ್ಠತಾ ಪಟ್ಟಿ ಪ್ರಕಟ ಮಾಡದೆ ನಿರ್ಲಕ್ಷ್ಯ ವಹಿಸಿ ಪ್ರಮಾಣಿಕ ಹಾಗೂ ದಕ್ಷ ಅಧಿಕಾರಿಗಳ ಮುಂಬಡ್ತಿಗೆ ಅನಗತ್ಯ ವಿಳಂಬ ಮಾಡಿ ಅವರ ಸೇವಾ ದಕ್ಷತೆ ಕುಗ್ಗಲು ಕಾರಣರಾದ ಅಧಿಕಾರಿಗಳ ವಿರುದ್ಧ ಕೈಗೊಂಡಿರುವ ಕ್ರಮಗಳೇನು; ಈ ರೀತಿಯ ನಿರ್ಲಕ್ಷ್ಯ ಮತ್ತೆ ಪುನರಾವರ್ತನೆ ಆಗದಿರುವಂತೆ ಏನು ಕ್ರಮ ಕೈಗೊಳ್ಳಲಾಗಿದೆ?

## ಕೊಡಗು ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಿಗೆ ವಿಶೇಷ ಅನುದಾನ ನೀಡುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು ) –**

೩೪೮೪ (೩೯೭೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಕೊಡಗು ಜಿಲ್ಲೆಯಲ್ಲಿರುವ ನಗರ ಸ್ಥಳೀಯ ಸಂಸ್ಥೆಗಳು ಯಾವುವು;

ಆ) ಸದರಿ ಸಂಸ್ಥೆಗಳಿಗೆ ಕಳೆದ ೫ ವರ್ಷಗಳಿಂದ ಬಿಡುಗಡೆಯಾದ ಅನುದಾನ ಎಷ್ಟು; (ವರ್ಷವಾರು, ಸಂಸ್ಥೆವಾರು ವಿವರ ನೀಡುವುದು)

ಇ) ಪ್ರವಾಸೋದ್ಯಮ ಅಭಿವೃದ್ಧಿ ಹಾಗೂ ವಾರ್ಷಿಕ ಸರಾಸರಿ ಮಳೆ ಹೆಚ್ಚು ಪ್ರಮಾಣದಲ್ಲಿ ಬೀಳುವುದರಿಂದ ಈ ಸಂಸ್ಥೆಗಳಿಗೆ ವಿಶೇಷ ಅನುದಾನ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಈ) ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಅನುದಾನವನ್ನು ಈ ಸಂಸ್ಥೆಗಳಿಗೆ ಬಿಡುಗಡೆ ಮಾಡಲಾಗುವುದು?

## ಕೊಡಗು ಜಿಲ್ಲೆಯ ಸರ್ಕಾರಿ ನೌಕರರಿಗೆ ಗಿರಿಭತ್ಯೆ ನೀಡುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು ) –**

೩೪೮೫ (೩೯೭೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಕೊಡಗು ಜಿಲ್ಲೆಯ ಸರ್ಕಾರಿ ಅಧಿಕಾರಿ/ನೌಕರರುಗಳು ಗಿರಿಭತ್ಯೆ ಪಡೆಯಲು ಅರ್ಹರಾಗಿದ್ದರೂ, ಅದರಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಬಂದಿದ್ದಲ್ಲಿ, ಯಾವ ಕಾರಣಗಳಿಗಾಗಿ ಸದರಿ ಅರ್ಹ ನೌಕರರಿಗೆ ಗಿರಿಭತ್ಯೆ ನೀಡಲಾಗಿಲ್ಲ; (ವಿವರ ನೀಡುವುದು)

ಇ) ಈಗಲಾದರೂ ಸದರಿ ಅರ್ಹ ನೌಕರರಿಗೆ ಸದರಿ ನ್ಯೂನತೆ ಸರಿಪಡಿಸಿ ಯಾವ ದಿನಾಂಕದಿಂದ ಗಿರಿಭತ್ಯೆಯನ್ನು ನೀಡಲಾಗುವುದು?

## ಕೊಡಗು ಜಿಲ್ಲೆಯಲ್ಲಿನ ಒಳಾಡಳಿತ ಇಲಾಖೆಯಲ್ಲಿನ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು ) –**

೩೪೮೬ (೩೯೭೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಕೊಡಗು ಜಿಲ್ಲೆಯಲ್ಲಿ ಒಳಾಡಳಿತ ಇಲಾಖೆಗೆ ಮಂಜೂರಾಗಿರುವ ವಿವಿಧ ಶ್ರೇಣಿಯ ಹುದ್ದೆಗಳ ಸಂಖ್ಯೆ ಎಷ್ಟು; ಅವು ಯಾವುವು; (ತಾಲ್ಲೂಕುವಾರು, ಠಾಣೆವಾರು, ಹುದ್ದೆಗಳ ಶ್ರೇಣಿವಾರು ಸಂಪೂರ್ಣ ವಿವರ ನೀಡುವುದು)

ಆ) ಸದರಿ ಹುದ್ದೆಗಳಲ್ಲಿ ಹಾಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು, ಠಾಣೆವಾರು ಹಾಗೂ ಹುದ್ದೆಗಳ ಶ್ರೇಣಿವಾರು ಸಂಪೂರ್ಣ ವಿವರ ನೀಡುವುದು)

ಇ) ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ತುಂಬಲಾಗುವುದು?

## ಬೀದರ್ ಜಿಲ್ಲೆಯ ಕಳ್ಳಭಟ್ಟಿ ಸಾರಾಯಿ ಪ್ರಕರಣಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೩೪೮೭ (೩೯೬೧) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೀದರ್ ಜಿಲ್ಲೆಯಲ್ಲಿ ಎಷ್ಟು ಕಳ್ಳಭಟ್ಟಿ ಪ್ರಕರಣಗಳು ದಾಖಲಾಗಿವೆ; (ತಾಲ್ಲೂಕುವಾರು ವಿವರ ನೀಡುವುದು)

ಆ) ಬೀದರ್ ಜಿಲ್ಲೆಯ ಜನರಲ್ ಸ್ಟೋರ್‌ಗಳಲ್ಲಿ ಮದ್ಯಪಾನ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

ಇ) ಬೀದರ್ ಜಿಲ್ಲೆ, ಔರಾದ್ ತಾಲ್ಲೂಕಿನಲ್ಲಿರುವ ಮದ್ಯಪಾನ ಮಾರಾಟ ಮಳಿಗೆಗಳ ಸಂಖ್ಯೆ ಎಷ್ಟು? (ವಿವರ ನೀಡುವುದು)

## ೨೪ ಗಂಟೆ ಕುಡಿಯುವ ನೀರಿನ ಯೋಜನೆ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೩೪೮೮ (೩೯೫೯) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೀದರ್‌ನಲ್ಲಿ ದಿನದ ೨೪ ಗಂಟೆ ಕುಡಿಯುವ ನೀರಿನ ಯೋಜನೆ ಕಾಮಗಾರಿ ಆರಂಭವಾದದ್ದು ಯಾವಾಗ; ಈವರೆಗೆ ಎಷ್ಟು ಕಾಮಗಾರಿ ಪೂರ್ಣಗೊಂಡಿದೆ;

ಆ) ಈ ಯೋಜನೆಯಡಿ ಸದ್ಯ ಎಷ್ಟು ಪ್ರದೇಶಗಳಿಗೆ ದಿನದ ೨೪ ಗಂಟೆ ನೀರನ್ನು ಪೂರೈಸಲಾಗುತ್ತಿದೆ ಮತ್ತು ಎಷ್ಟು ಪ್ರದೇಶಗಳಲ್ಲಿ ನಲ್ಲಿಗಳಿಂದ ನೀರು ಸರಬರಾಜು ಮಾಡಲಾಗುತ್ತಿದೆ;

ಇ) ನಗರದಲ್ಲಿ ವಾರಕ್ಕೊಮ್ಮೆ ನೀರು ಬಿಡಲಾಗುತ್ತಿದೆ ಎನ್ನುವ ದೂರು ನಿಜವೇ; ವಾಸ್ತವದಲ್ಲಿ ಎಷ್ಟು ದಿನಗಳಿಗೊಮ್ಮೆ ನೀರು ಪೂರೈಕೆ ಮಾಡಲಾಗುತ್ತಿದೆ;

ಈ) ಈ ಯೋಜನೆ ಪೂರ್ಣಗೊಳ್ಳುವುದು ಯಾವಾಗ; ನಗರದ ಸಂಪೂರ್ಣ ಜನತೆಗೆ ಯಾವಾಗಿನಿಂದ ನಿರಂತರ ನೀರು ಸಿಗಲಿದೆ?

## ಬೀದರ್ ಜಿಲ್ಲೆಯಲ್ಲಿ ಪೊಲೀಸ್ ಸಿಬ್ಬಂದಿಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೩೪೪೯ (೩೯೬೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೀದರ್ ಜಿಲ್ಲೆಯಲ್ಲಿ ಪೊಲೀಸ್ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬೀದರ್ ಜಿಲ್ಲೆ, ಔರಾದ್ ತಾಲ್ಲೂಕಿನ ಪೊಲೀಸ್ ಠಾಣೆಗಳಲ್ಲಿ ಸಬ್ ಇನ್ಸ್‌ಪೆಕ್ಟರ್ ಹುದ್ದೆಗಳು ಖಾಲಿ ಇರುವುದು ನಿಜವೇ; ಇದ್ದಲ್ಲಿ ಹುದ್ದೆಗಳ ಭರ್ತಿಗಳಿಗೆ ಸರ್ಕಾರ ಕೈಗೊಂಡ ಕ್ರಮಗಳೇನು;

ಇ) ಬೀದರ್ ಜಿಲ್ಲೆ ಬಸವ ಕಲ್ಯಾಣ ತಾಲ್ಲೂಕಿನಲ್ಲಿರುವ ಪೊಲೀಸ್ ಠಾಣೆಗಳ ಸಂಖ್ಯೆ ಎಷ್ಟು; ಹೊಸ ಪೊಲೀಸ್ ಠಾಣೆಗಳನ್ನು ಸ್ಥಾಪಿಸುವ ಉದ್ದೇಶ ಸರ್ಕಾರದ ಮುಂದಿದೆಯೇ? (ವಿವರ ನೀಡುವುದು)

## ಸುಳ್ಳು ಜಾತಿ ಪ್ರಮಾಣ ಪತ್ರ ನೀಡಿ ನೌಕರಿ ಪಡೆದಿರುವ ಬಗ್ಗೆ

**ಶ್ರೀ ಡಿ.ಎಸ್.ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೯೦ (೩೮೪೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದಲ್ಲಿ ಇದುವರೆವಿಗೆ ಸುಳ್ಳು ಜಾತಿ ಪ್ರಮಾಣ ಪತ್ರ ನೀಡಿ ಸರ್ಕಾರಿ ನೌಕರಿ ಪಡೆದಿರುವ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೆ; ಎಷ್ಟು ಪ್ರಕರಣಗಳು ಇತ್ಯರ್ಥವಾಗಿವೆ; ಈ ಪ್ರಕರಣಗಳಿಂದ ಖುಲಾಸೆಯಾಗಿದ್ದರೆ ಯಾವ ಕಾರಣಕ್ಕಾಗಿ ಖುಲಾಸೆಯಾಗಿವೆ;

ಆ) ಕೆಲಸದಿಂದ ವಜಾ ಮಾಡಲಾಗಿರುವ ಸಂಖ್ಯೆ ಎಷ್ಟು; ಎಷ್ಟು ಮಂದಿಗೆ ಶಿಕ್ಷೆ ನೀಡಲಾಗಿದೆ; ನೌಕರರ ಇಲಾಖಾವಾರು ಹೆಸರು ಮತ್ತು ಹುದ್ದೆ, ವಜಾ ಮಾಡಲು ಕಾರಣ, ವಜಾ ಮಾಡಿರುವ ದಿನಾಂಕ ಸಹಿತ ವಿವರ ನೀಡುವುದು?

## ಹೊರಗುತ್ತಿಗೆ ಆಧಾರದಲ್ಲಿ ನೇಮಕಗೊಂಡಿರುವ ಕುರಿತು

**ಶ್ರೀ ಡಿ.ಎಸ್.ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೯೧ (೩೮೪೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದ ವಿವಿಧ ಇಲಾಖೆ/ನಿಗಮ/ಮಂಡಳಿಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ನೇಮಕಗೊಂಡು ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು;

ಆ) ಈ ಅಧಿಕಾರಿ/ನೌಕರರಿಗೆ ನೀಡಲಾಗುತ್ತಿರುವ ವೇತನ ಎಷ್ಟು; (ವೃಂದವಾರು ಮಾಹಿತಿ ನೀಡುವುದು)

ಇ) ಗುತ್ತಿಗೆ ಏಜೆನ್ಸಿಗಳ ಮುಖಾಂತರ ಗುತ್ತಿಗೆದಾರರಿಗೆ ಪ್ರತಿ ಹುದ್ದೆಗಳಿಗೆ ನಿಗಧಿಪಡಿಸಿರುವ ವೇತನ ಎಷ್ಟು; ಗುತ್ತಿಗೆದಾರರು ನೌಕರರಿಗೆ ನೀಡುತ್ತಿರುವ ವೇತನ ಎಷ್ಟು?

## ಎ.ಸಿ.ಬಿ. ಯಲ್ಲಿ ದಾಖಲಾದ ಪ್ರಕರಣಗಳ ಕುರಿತು

**ಶ್ರೀ ಡಿ.ಎಸ್.ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೩೪೯೨ (೩೮೪೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎ.ಸಿ.ಬಿ. ಆರಂಭವಾದ ದಿನಾಂಕದಿಂದ ಇದುವರೆವಿಗೆ ಎಷ್ಟು ಪ್ರಕರಣಗಳು ದಾಖಲಾಗಿವೆ; (ದೂರುದಾರರ ಹೆಸರು, ಯಾರ ವಿರುದ್ಧ ದೂರು ದಾಖಲಾಗಿವೆ; ಯಾವ ಆಪಾದನೆ ಮೇಲೆ ದೂರು ದಾಖಲಾಗಿವೆ ವಿವರ ನೀಡುವುದು)

(ಆ) ದಾಖಲಾದ ಪ್ರಕರಣಗಳಲ್ಲಿ ಎಷ್ಟು ದಾವೆಗಳ ಎಫ್.ಐ.ಆರ್. ಆಗಿದೆ ಮತ್ತು ತನಿಖೆಯು ಯಾವ ಹಂತದಲ್ಲಿವೆ;

(ಇ) ದಾಖಲಾದ ದಾವೆಗಳಲ್ಲಿ ಸರ್ಕಾರಕ್ಕೆ ವರದಿ ಮಾಡಲಾದ ದಾವೆಗಳ ಸಂಖ್ಯೆ ಎಷ್ಟು; ಸರ್ಕಾರ ಎಷ್ಟು ದಾವೆಗಳಿಗೆ ನ್ಯಾಯಾಲಯದಲ್ಲಿ ಕಟ್ಟಲೆ ಹೂಡಲು ಅನುಮತಿ ನೀಡಿದೆ; ಎಷ್ಟು ದಾವೆಗಳಿಗೆ ಅನುಮತಿ ನೀಡಲಾಗಿರುವುದಿಲ್ಲ? (ಪ್ರತಿ ದಾವೆಯ ವಿವರ ನೀಡುವುದು)

## ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವರ್ಗಗಳಿಗೆ ಮನೆ ಕಟ್ಟಿಸಿ ಕೊಡುವ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾಸಭೆಯಿಂದ ಚುನಾಯಿತರಾದವರು) –**

೩೯೬೩ (೩೮೪೨) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩ನೇ ಸಾಲಿನಲ್ಲಿ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವರ್ಗದವರಿಗೆ ಪ್ರಸಕ್ತ ಆಯವ್ಯಯದಲ್ಲಿ ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆಯಡಿಯಲ್ಲಿ ನಿಗದಿಪಡಿಸಲಾಗಿರುವ ಹಣ ಎಷ್ಟು; ಖರ್ಚಾಗಿರುವ ಹಣ ಎಷ್ಟು;

(ಆ) ಯಾವ ಯಾವ ಉದ್ದೇಶಕ್ಕೆ ಈ ಹಣವನ್ನು ಮೀಸಲು ಇಡಲಾಗಿದ್ದು,. ಯಾವ ಯಾವ ಉದ್ದೇಶಗಳಿಗೆ ಎಷ್ಟೆಷ್ಟು ಹಣ ಖರ್ಚು ಮಾಡಲಾಗಿದೆ;

(ಇ) ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಕಳೆದ ೨೦೧೩ನೇ ಸಾಲಿನಿಂದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವರ್ಗದವರಿಗೆ ಹಾಗೂ ಸ್ಲಂ ನಿವಾಸಿಗಳಿಗೆ ಒದಗಿಸಲಾಗುತ್ತಿದ್ದ ವಸತಿ ಯೋಜನೆ ಜಾರಿಯಲ್ಲಿದೆಯೇ;

(ಈ) ಹಾಗಿದ್ದಲ್ಲಿ, ೨೦೧೩ರಿಂದ ಈ ಯೋಜನೆಯಡಿಯಲ್ಲಿ ಎಷ್ಟು ಮಂದಿಗೆ ಮನೆ ಕಟ್ಟಿಸಿಕೊಡಲಾಗಿದೆ; ಪ್ರತಿಯೊಂದು ಮನೆಗೆ ಖರ್ಚು ಮಾಡಲಾದ ವೆಚ್ಚ ಎಷ್ಟು? (ಫಲಾನುಭವಿಗಳ ಹೆಸರು ಮತ್ತು ವಾಸಿಸುವ ವಿಳಾಸದ ವಿವರ ನೀಡುವುದು)

## ವಾಣಿಜ್ಯ ಮಳಿಗೆ/ನಿವೇಶನಗಳ ಹಂಚಿಕೆ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾಸಭೆಯಿಂದ ಚುನಾಯಿತರಾದವರು) –**

೩೪೯೫ (೩೮೪೧) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ವತಿಯಿಂದ ಇದುವರೆವಿಗೆ ಎಷ್ಟು ವಾಣಿಜ್ಯ ಮಳಿಗೆಗಳನ್ನು ಎಲ್ಲೆಲ್ಲಿ ನಿರ್ಮಿಸಲಾಗಿದೆ;

(ಆ) ಆ ಮಳಿಗೆಗಳನ್ನು ಸಾರ್ವಜನಿಕರಿಗೆ ಹಂಚಿಕೆ ಮಾಡಲು ಯಾವ ನಿಯಮಗಳನ್ನು ಪಾಲಿಸಲಾಗಿದೆ; (ಆದೇಶದ ಪ್ರತಿಯನ್ನು ನೀಡುವುದು)

(ಇ) ಮಳಿಗೆಗಳನ್ನು ಹಂಚಿಕೆ ಮಾಡುವಾಗ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವರ್ಗದವರಿಗೆ ಮೀಸಲಾತಿ ಪಾಲಿಸಲಾಗಿದೆಯೇ; ಇದುವರೆವಿಗೆ ಎಷ್ಟೆಷ್ಟು ಸಂಖ್ಯೆಯ ಮಳಿಗೆಗಳನ್ನು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವರ್ಗದವರಿಗೆ ನೀಡಲಾಗಿದೆ; (ಹೆಸರು ಮತ್ತು ವಿಳಾಸ, ವರ್ಗಾವಾರು ವಿವರ ನೀಡುವುದು)

(ಈ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಹೆಚ್.ಎಸ್.ಆರ್. ಮತ್ತು ಓ.ಎಂ.ಬಿ.ಆರ್ ಬಡಾವಣೆಗಳಲ್ಲಿ ನಿರ್ಮಿಸಿರುವ ಒಟ್ಟು ನಿವೇಶನಗಳ ಸಂಖ್ಯೆ ಎಷ್ಟು; ಯಾವ ಯಾವ ಅಳತೆಯ ಎಷ್ಟೆಷ್ಟು ನಿವೇಶನಗಳನ್ನು ನಿರ್ಮಿಸಲಾಗಿದೆ;

(ಉ) ಈ ಎರಡು ಬಡಾವಣೆಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವರ್ಗದವರಿಗೆ ನೀಡಿರುವ ನಿವೇಶಗಳ ವಿವರ ನೀಡುವುದು ಹಾಗೂ ಹಂಚಿಕೆಯಾಗದೆ ಉಳಿದಿರುವ ನಿವೇಶನಗಳ ಸಂಖ್ಯೆ ಎಷ್ಟು? (ವಿಸ್ತೀರ್ಣವಾರು ವಿವರ ನೀಡುವುದು)

## ಸೇತುವೆ ನಿರ್ಮಾಣ ಕಾಮಗಾರಿ ವಿಳಂಬದ ಬಗ್ಗೆ

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೯೬ (೩೯೫೨) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಮನಗರ ಜಿಲ್ಲೆ ರಾಮನಗರ ಟೌನಿನ ಅಗ್ರಹಾರದ ಆಭಯ ಆಂಜನೇಯಸ್ವಾಮಿ ದೇವಸ್ಥಾನ ರಸ್ತೆಯಿಂದ (ವಾರ್ಡ್ ನಂ. ೬) ಇಂಡಸ್ಟ್ರೀಯಲ್ ಏರಿಯಾಗೆ (ಬಿ.ಎಂ. ರಸ್ತೆಗೆ) ಸಂಪರ್ಕ ಕಲ್ಪಿಸುವ ಅರ್ಕಾವತಿ ನದಿಗೆ ಅಡ್ಡವಾಗಿ ನಿರ್ಮಿಸುತ್ತಿರುವ ಸೇತುವೆಯ ನಿರ್ಮಾಣ ಕಾಮಗಾರಿ ಕಳೆದ ಮೂರುವರೆ ವರ್ಷಗಳಿಂದ ಸ್ಥಗಿತಗೊಂಡಿರುವುದು ನಿಜವೇ;

(ಆ) ಸದರಿ ಕಾಮಗಾರಿ ಇದುವರೆವಿಗೂ ಪೂರ್ಣಗೊಳ್ಳದಿರಲು ಕಾರಣಗಳೇನು;

(ಇ) ಕಳೆದ ನಾಲ್ಕು ತಿಂಗಳುಗಳಲ್ಲಿ ನಡೆದಿರುವ ಆರ್ಥಿಕ ಪ್ರಗತಿ ಎಷ್ಟು;

(ಈ) ಈ ಸೇತುವೆ ನಿರ್ಮಾಣ ಕಾಮಗಾರಿ ಸ್ಥಗಿತ ಅಥವಾ ವಿಳಂಬದಿಂದ ಟೌನಿನಲ್ಲಿ ಹಾದುಹೋಗಿರುವ ಬೆಂಗಳೂರು–ಮೈಸೂರು ರಸ್ತೆಯ ಹೊಸ ಮತ್ತು ಹಳೆ ಸೇತುವೆಗಳ ಮೇಲೆ ಭಾರಿ ವಾಹನ ಸಂಚಾರ ಒತ್ತಡವಿರುವುದು ನಿಜವೇ;

(ಉ) ಈ ಸೇತುವೆ ನಿರ್ಮಾಣವನ್ನು ಶೀಘ್ರವಾಗಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದೇ?

## ನಗರ ಸಭೆ ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ಬಗ್ಗೆ

**ಡಾ: ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೯೭ (೩೮೩೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಚಿಕ್ಕಬಳ್ಳಾಪುರ ಮತ್ತು ಕೋಲಾರ ಜಿಲ್ಲೆಗಳಲ್ಲಿ ಬರುವ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ಸಂಖ್ಯೆ ಎಷ್ಟು; ಅವು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು)

ಆ) ಈ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಎಷ್ಟು ಕಿಲೋಮೀಟರ್‌ವರೆಗೆ ಇರುತ್ತದೆ; ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳವಾರು ಸಂಪೂರ್ಣ ಮಾಹಿತಿ ನೀಡುವುದು;

ಇ) ಕಳೆದ ಮೂರು ವರ್ಷಗಳಲ್ಲಿ ಎರಡು ಜಿಲ್ಲೆಗಳ ಸ್ಥಳೀಯ ಸಂಸ್ಥೆಗಳಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಕೇಂದ್ರ ಸರ್ಕಾರದಿಂದ ಬಂದ ಅನುದಾನದ ಮೊತ್ತವೆಷ್ಟು; (ವಿವರಗಳನ್ನು ನೀಡುವುದು)

ಈ) ಸ್ಥಳೀಯ ಸಂಸ್ಥೆಗಳ ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರ ಯಾವ ಯಾವ ಯೋಜನೆಗಳಡಿ ಅನುದಾನವನ್ನು ಬಿಡುಗಡೆ ಮಾಡುತ್ತಿದೆ; (ಸಂಪೂರ್ಣ ಮಾಹಿತಿ ನೀಡುವುದು)

ಉ) ಕಳೆದ ಮೂರು ವರ್ಷಗಳಲ್ಲಿ ಕೇಂದ್ರ ಸರ್ಕಾರ ನೀಡುತ್ತಿರುವ ಅನುದಾನದಲ್ಲಿ ಎರಡು ಜಿಲ್ಲೆಗಳ ಸ್ಥಳೀಯ ಸಂಸ್ಥೆಗಳು ಯಾವ ಯಾವ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಿವೆ; ಇವುಗಳಲ್ಲಿ ಪೂರ್ಣಗೊಂಡಿರುವ ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು)

ಊ) ಈ ಕಾಮಗಾರಿಗಳಿಗೆ ಕಳೆದ ೩ ವರ್ಷಗಳಿಂದ ವೆಚ್ಚವಾಗಿರುವ ಮೊತ್ತವೆಷ್ಟು; ಮತ್ತು ಉಳಿಕೆಯಾಗಿರುವ ಮೊತ್ತವೆಷ್ಟು? (ಸಂಪೂರ್ಣ ಮಾಹಿತಿ ನೀಡುವುದು)

## ಚಾಮರಾಜನಗರ ದೊಡ್ಡ ಅಂಗಡಿ ಬೀದಿಯ ದುರಸ್ಥಿ

**ಶ್ರೀ ಎಸ್.ನಾಗರಾಜು (ಸಂದೇಶ್ ನಾಗರಾಜು) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೯೮ (೩೮೪೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಚಾಮರಾಜನಗರ ದೊಡ್ಡ ಅಂಗಡಿ ಬೀದಿಯು ನಗರದ ಪ್ರಮುಖ ವ್ಯಾಪಾರ ಸ್ಥಳವಾಗಿದ್ದು, ಈ ಬೀದಿಯು ಸಂಪೂರ್ಣ ಹದಗೆಟ್ಟಿದ್ದು ಸಾರ್ವಜನಿಕರಿಗೆ ತೀವ್ರ ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಒಳಚರಂಡಿ ಕಾಮಗಾರಿಗೆ ರಸ್ತೆ ಆಗೆದ ನಂತರ ಅದನ್ನು ಸರಿಯಾಗಿ ದುರಸ್ಥಿಗೊಳಸದೆ ಹಳ್ಳಬಿದ್ದಿರುವುದು, ರಸ್ತೆಯು ಕಿತ್ತುಹೋಗಿ ಗುಂಡಿ ಬಿದ್ದಿರುವುದು, ಮಳೆಯ ಕಾರಣ ಕೆಸರುಮಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ರಸ್ತೆಯನ್ನು ಕೂಡಲೇ ದುರಸ್ಥಿಗೊಳಿಸಲು ಕ್ರಮ ತೆಗೆದುಕೊಳ್ಳಲಾಗುವುದೇ;

ಇ) ನಗರೋತ್ಥಾನ ಯೋಜನೆ ಅಡಿಯಲ್ಲಿ ಸಂತೇಮರಹಳ್ಳಿ ವೃತ್ತದಿಂದ ಚಿಕ್ಕ ಅಂಗಡಿ ಬೀದಿ – ದೊಡ್ಡ ಅಂಗಡಿ ಬೀದಿ ಮಾರ್ಗವಾಗಿ ಗುಂಡ್ಲುಪೇಟೆ ವೃತ್ತದವರೆಗೆ ರಸ್ತೆಯನ್ನು ಅಭಿವೃದ್ಧಿ ಮಾಡುವ ಬಗ್ಗೆ ಕ್ರಿಯಾ ಯೋಜನೆ ಸಿದ್ಧಪಡಿಸಲಾಗಿದೆಯೇ; ಹಾಗಿದ್ದಲ್ಲಿ, ಈ ಯೋಜನೆ ಯಾವ ಹಂತದಲ್ಲಿದೆ?

## ಟಿ. ನರಸಿಪುರ ಪಟ್ಟಣದ ತುರುಕನಕಟ್ಟೆ ಸಮೀಪ ಕೊಳಚೆ ನೀರಿನ ಬಗ್ಗೆ

**ಶ್ರೀ ಎಸ್.ನಾಗರಾಜು (ಸಂದೇಶ್ ನಾಗರಾಜು) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪೯೯ (೩೮೪೪) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಟಿ.ನರಸಿಪುರದ ಲಿಂಕ್ ರಸ್ತೆಯ ಬಳಿ ಇರುವ ತುರುಕನಕಟ್ಟೆ ಸಮೀಪ ಕೊಳಚೆ ನೀರು ನಿಂತು ಸೊಳ್ಳೆಕಾಟದಿಂದ ಪಟ್ಟಣದ ಸುಶೀಲಮ್ಮ ಬಡಾವಣೆ, ವಿನಾಯಕ ಕಾಲೋನಿ ಬಡಾವಣೆಗಳು ದುರ್ವಾಸನೆಯಿಂದ ಕೂಡಿ ಅನಾರೋಗ್ಯಕರ ವಾತಾವರಣ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈ ಕೊಳಚೆ ನೀರು ಸರಾಗವಾಗಿ ಹರಿದುಹೋಗುವಂತೆ ಚರಂಡಿ ವ್ಯವಸ್ಥೆಯನ್ನು ಕಲ್ಪಿಸಿ ಈ ಬಡಾವಣೆಗಳ ನೈರ್ಮಲ್ಯ ಕಾಪಾಡಲು ಕ್ರಮ ಜರುಗಿಸಲಾಗುವುದೇ;

ಇ) ಮಸೀದಿ ಪಕ್ಕದ ಹುಲ್ಲಹಳ್ಳಿ ನಾಲಾ ರಸ್ತೆಯಲ್ಲಿ ಮಳೆ ನೀರು ನಿಂತು ಕೆಸರುಗುಂಡಿಯಾಗಿ ರಸ್ತೆ ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಈ ರಸ್ತೆಯ ರಿಪೇರಿಗೆ ಯಾವ ರೀತಿಯ ಕ್ರಮ ಜರುಗಿಸಲಾಗಿದೆ?

# ಮೈಸೂರು ನಗರಕ್ಕೆ ಪ್ರತ್ಯೇಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಬಗ್ಗೆ

**ಶ್ರೀ ಎಸ್.ನಾಗರಾಜು (ಸಂದೇಶ್ ನಾಗರಾಜು) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫೦೦ (೩೮೪೬) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಮೈಸೂರು ನಗರಕ್ಕೆ ಕಾವೇರಿ ಮತ್ತು ಕಪಿಲಾ ನದಿಗಳಿಂದ ಪ್ರತಿದಿನ ಎಷ್ಟು ಎಮ್.ಜಿ.ಡಿ. ನೀರು ಸರಬರಾಜಾಗುತ್ತಿದೆ; ಮೈಸೂರಿನಲ್ಲಿ ಎಷ್ಟು ಅಧಿಕೃತ ನೀರಿನ ಸಂಪರ್ಕಗಳಿವೆ; ಇನ್ನೂ ಎಷ್ಟು ಸಂಪರ್ಕಗಳಿಗೆ ಬೇಡಿಕೆ ಇದೆ; ನೀರು ಸರಬರಾಜು ಮತ್ತು ಒಳಚರಂಡಿ ನಿರ್ವಹಣೆಗೆ ಇರುವ ಸಿಬ್ಬಂದಿ ಎಷ್ಟು; ಸರ್ವೀಸ್ ಸ್ಟೇಷನ್‌ಗಳೆಷ್ಟು; ನೀರಿನಿಂದ ಬರುವ ರೆವಿನ್ಯೂ ಎಷ್ಟು;

ಆ) ಮೈಸೂರು ನಗರವು ದಿನೇ ದಿನೇ ಅಭಿವೃದ್ಧಿ ಹೊಂದುತ್ತಿರುವ ಅಂತರ ರಾಷ್ಟ್ರೀಯ ಖ್ಯಾತಿಯ ನಗರವಾಗಿದ್ದು, ಕಾವೇರಿ ಮತ್ತು ಕಪಿಲಾ ನದಿಗಳಿಂದ ನಗರಕ್ಕೆ ಸರಬರಾಜು ಮಾಡುವ ನೀರಿನ ನಿರ್ವಹಣೆಗೆ ಮತ್ತು ಒಳಚರಂಡಿ ವ್ಯವಸ್ಥೆಯ ಸ್ವತಂತ್ರವಾದ ಮೈಸೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯನ್ನು ಸ್ಥಾಪಿಸುವ ಬಗ್ಗೆ ಸರ್ಕಾರದ ಚಿಂತನೆ ಏನು;

ಇ) ಮೈಸೂರು ಮಹಾರಾಜರ ಕಾಲದಲ್ಲಿ ಸ್ಥಾಪನೆಯಾದ ವಾಣಿವಿಲಾಸ ನೀರು ಸರಬರಾಜು ಯೋಜನೆಯನ್ನು ಉನ್ನತೀಕರಿಸಿ, ಪ್ರತ್ಯೇಕ ನೀರು ಸರಬರಾಜು ಮಂಡಳಿಯನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇಲ್ಲದಿದ್ದಲ್ಲಿ ಈ ಬಗ್ಗೆ ಪರಿಶೀಲಿಸಲಾಗುವುದೇ?

## ಬೆಂಗಳೂರು ನಗರದ ನೀರುಗಾಲುವೆಗಳ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು)–**

೩೫೦೧ (೩೯೬೨) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದ ಬಹುತೇಕ ಕಡೆಗಳಲ್ಲಿ ಬೆಂಗಳೂರು ಮಹಾನಗರವು ಸೇರಿದಂತೆ ನಗರ/ಪಟ್ಟಣ ಪರಿಮಿತಿಯಲ್ಲಿ ಮಳೆಗಾಲ ಪ್ರಾರಂಭಕ್ಕೂ ಮುನ್ನ ಮುಖ್ಯ ನೀರುಗಾಲುವೆಗಳಲ್ಲಿ ಶುಚಿಗೊಳಿಸುವಲ್ಲಿ ನಿರ್ಲಕ್ಷ್ಯ ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಇದರಿಂದಾಗಿ ಮುಖ್ಯ ಕಾಲುವೆಗಳಲ್ಲಿ ತ್ಯಾಜ್ಯ ತುಂಬಿಕೊಂಡು ಮಳೆಗಾಲದಲ್ಲಿ ಮಳೆಯ ನೀರು ಸರಾಗವಾಗಿ ಹರಿಯದೆ ಮನೆಗಳಿಗೆ ಹಾಗೂ ತಗ್ಗು ಪ್ರದೇಶಗಳಿಗೆ ಮತ್ತು ರಸ್ತೆಯ ಮೇಲೆ ಹರಿದು ವಾಹನ ಸವಾರರು ಪಾದಚಾರಿಗಳು ಮತ್ತು ಮಕ್ಕಳು ಪ್ರಾಣ ಹಾನಿಗೊಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಮುನ್ನೆಚ್ಚರಿಕೆಯ ಕ್ರಮವಾಗಿ ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಿದೆ; ಇದಕ್ಕಾಗಿ ಸರ್ಕಾರ ಕಳೆದ ಮೂರು ವರ್ಷಗಳಲ್ಲಿ ವೆಚ್ಚ ಮಾಡಿರುವ ಹಣವೆಷ್ಟು? (ವರ್ಷವಾರು ಮಾಹಿತಿ ನೀಡುವುದು)

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ(ಪ್ರ)
ಕರ್ನಾಟಕ ವಿಧಾನ ಪರಿಷತ್ತು.

ಸರ್ಕಾರಿ ಮುದ್ರಣಾಲಯ, ಬೆಳಗಾವಿ ಕಾ.ಸೂ. 02–ಪ್ರತಿಗಳು–750